22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 282 | ನವದೆಹಲಿ | ಬೆಲೆ ₹ 10 | ಏಪ್ರಿಲ್ 18 2025, ಶುಕ್ರವಾರ

## ಒಳಪುಟಗಳಲ್ಲಿ

**ಹೊಸ ಶಿಕ್ಷಣ ನೀತಿಗೆ ಮಹಾರಾಷ್ಟ್ರ ಸರ್ಕಾರ ಅನುಮೋದನೆ: ಹಿಂದಿ ಕಡ್ಡಾಯ - ಪು.4**

## ಛತ್ತೀಸ್‌ಗಢ: 22 ನಕ್ಸಲರ ಬಂಧನ

**ರಾಯ್ಪುರ, ಏ. 17:** ಛತ್ತೀಸ್‌ಗಢದ ಬಿಜಾಪುರ ಜಿಲ್ಲೆಯ ಮೂರು ಸ್ಥಳಗಳಲ್ಲಿ ಇಪ್ಪತ್ತೆರಡು ನಕ್ಸಲರನ್ನು ಬಂಧಿಸಲಾಗಿದೆ, ಅವರಿಂದ ಸ್ಫೋಟಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ಗುರುವಾರ ತಿಳಿಸಿದ್ದಾರೆ. ಉಸೂರ್ ಪೊಲೀಸ್ ಠಾಣೆ ವ್ಯಾಪ್ತಿಯ ಟೆಕ್‌ಮೆಟ್ಲಾ ಗ್ರಾಮದ ಬಳಿಯ ಅರಣ್ಯದಿಂದ ಏಳು ಕೆಳ ಹಂತದ ಕೇಡರ್‌ಗಳನ್ನು ಬಂಧಿಸಲಾಗಿದೆ. ಕೋಬ್ರಾ (ಕಮಾಂಡೋ ಬೆಟಾಲಿಯನ್ ಫಾರ್ ರೆಸಲ್ಯೂಟ್ ಆಕ್ಷನ್ ಸಿಆರ್‌ಪಿಎಫ್‌ನ ಎಲೈಟ್ ಯುನಿಟ್) ಮತ್ತು ಸ್ಥಳೀಯ ಪೊಲೀಸರ ಜಂಟಿ ತಂಡವು ಪ್ರದೇಶದ ಪ್ರಾಬಲ್ಯ ಕಾರ್ಯಾಚರಣೆಯಲ್ಲಿದ್ದಾಗ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಜಂಗ್ಲಾ ಪೊಲೀಸ್ ಠಾಣೆ ವ್ಯಾಪ್ತಿಯ ಬೆಲ್ಚಾರ್ ಗ್ರಾಮದ ಕೋಟೆಗಳಿಂದ ಇತರ ಆರು ನಕ್ಸಲರನ್ನು ಬಂಧಿಸಲಾಗಿದೆ. ಮಂಗಳವಾರ ನೆಲಸ್ನಾರ್ ಪೊಲೀಸ್ ಠಾಣೆ ವ್ಯಾಪ್ತಿಯ ಕಂದರ್ಕ ಗ್ರಾಮದ ಅರಣ್ಯದಿಂದ ಒಂಬತ್ತು ಕೇಡರ್‌ಗಳನ್ನು ಬಂಧಿಸಲಾಗಿದೆ ಎಂದು ಅವರು ಹೇಳಿದರು. ಈ ಎರಡು ಕಾರ್ಯಾಚರಣೆಗಳಲ್ಲಿ ಭದ್ರತಾ ಸಿಬ್ಬಂದಿಯ ಪ್ರತ್ಯೇಕ ಜಂಟಿ ತಂಡಗಳು ಭಾಗಿಯಾಗಿದ್ದವು. ಬಂಧಿತ ನಕ್ಸಲರಿಂದ ಬಾಂಬ್‌ಗಳು, ಜಿಲಾಟಿನ್ ಕಡ್ಡಿಗಳು, ಡಿಟೋನೇಟರ್‌ಗಳು, ವಿದ್ಯುತ್ ತಂತಿಗಳು, ಬ್ಯಾಟರಿಗಳು, ಮಾವೋವಾದಿ ಕರಪತ್ರಗಳು ಮತ್ತು ಇತರ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ. ಈ ಇಬ್ಬರು ನಕ್ಸಲರು 19 ರಿಂದ 45 ವರ್ಷ ವಯಸ್ಸಿನವರಾಗಿದ್ದಾರೆ.

# ಜಾತಿಗಣತಿ ವರದಿ ಬಗ್ಗೆ ಚರ್ಚೆ ಮೇ 2ಕ್ಕೆ ಸಚಿವ ಸಂಪುಟ ನಿರ್ಧಾರ

**ಬೆಂಗಳೂರು, ಏ.17:** ಮೇ.2 ರಂದು ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಅಂತಿಮವಾಗಿ ಜಾತಿಗಣತಿ ವರದಿ ಬಗ್ಗೆ ಚರ್ಚಿಸಲು ನಿರ್ಧರಿಸಲಾಗಿದೆ ಎಂದು ಕಾನೂನು ಸಚಿವ ಎಚ್.ಕೆ.ಪಾಟೀಲ್ ಅವರು ತಿಳಿಸಿದರು. ಜಾತಿಗಣತಿ ವರದಿ ಬಗ್ಗೆ ಎಲ್ಲ ಸಚಿವರ ಅಭಿಪ್ರಾಯಗಳನ್ನು ಸಂಗ್ರಹಿಸಲು ಇಂದು ಸಿಎಂ ಸಿದ್ದರಾಮಯ್ಯ ಅವರು ಕರೆದ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ಚರ್ಚೆಯು ಅಪೂರ್ಣವಾಗಿದೆ ಎಂದು ಸಭೆ ಬಳಿಕ ಸುದ್ದಿಗೋಷ್ಠಿಯಲ್ಲಿ ಪಾಟೀಲರು ಹೇಳಿದರು.



ಸಂಪುಟ ಸಭೆಯಲ್ಲಿ ಸಚಿವರಿಗೆ ಆರು ಪುಟಗಳ ವರದಿಯನ್ನು ಮಂಡಿಸಲಾಗಿತ್ತು. ಒಬಿಸಿ ಸಮುದಾಯಕ್ಕೆ ಮೀಸಲಾತಿ ಪ್ರಮಾಣ ಹೆಚ್ಚಿಸುವುದು ಸೇರಿದಂತೆ ಹಲವು ಅಂಶಗಳನ್ನು ನೀಡಲಾಗಿತ್ತು. ವರದಿಯನ್ನು ಸರ್ಕಾರ ಅಂಗೀಕರಿಸಬೇಕು ಎಂದು ಪ್ರಮುಖ ದಲಿತ, ಹಿಂದುಳಿದ ವರ್ಗಗಳ ಸಮುದಾಯದ ಸಚಿವರಾದ ಪ್ರಿಯಾಂಕ್ ಖರ್ಗೆ, ಡಾ. ಎಚ್.ಸಿ. ಮಹದೇವಪ್ಪ, ಕೆ.ಎಚ್. ಮುನಿಯಪ್ಪ, ಕೆ.ಎನ್. ರಾಜಣ್ಣ, ಶಿವರಾಜ್ ತಂಗಡಗಿ ಮತ್ತಿತರರು ಆಗ್ರಹಿಸಿದರು. ಆದರೆ ಒಕ್ಕಲಿಗ ಮತ್ತು ವೀರಶೈವ ಸಚಿವರಾದ ಎಂ.ಬಿ.ಪಾಟೀಲ್. ಎಸ್.ಎಸ್. ಮಲ್ಲಿಕಾರ್ಜುನ ಖರ್ಗೆ ಈಶ್ವರ ಖಂಡ್ರೆ, ಚಲುವ ರಾಯಸ್ವಾಮಿ ಮತ್ತಿತರರು ವರದಿಗೆ ವಿರೋಧ ವ್ಯಕ್ತಪಡಿಸಿದರು. ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಅವರು ಜಾತಿಗಣತಿ ವರದಿ ಬಗ್ಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಮಲ್ಲಿಕಾರ್ಜುನ ಅವರ ಮಾತಿಗೆ ಧ್ವನಿಗೂಡಿಸಿದ್ದಾರೆ ಎಂಬ ಮಾತುಗಳು ಕೇಳಿಬರುತ್ತಿವೆ.

ಆರ್ಥಿಕ ಸಮೀಕ್ಷೆಯಲ್ಲಿ ವಿಶೇಷಗಳ ಕುರಿತು ಸ್ವಲ್ಪಮಟ್ಟಿಗೆ ಚರ್ಚೆ ನಡೆಸಲಾಗಿದೆ. ರಾಜ್ಯದ 94.17 ರಷ್ಟು ಜನಸಂಖ್ಯೆಯನ್ನು ನಾವು ಸಮೀಕ್ಷೆ ಮಾಡಿದ್ದೇವೆ. ವರದಿ ಸೋರಿಕೆ ಪ್ರಶ್ನೆ ಬರುವುದಿಲ್ಲ. ಈ ಕುರಿತ ವರದಿಗಳ ಪತ್ರಿಕೆಗಳಲ್ಲಿ ಬಂದಿದ್ದು, ಇವು ಸರಿಯಾಗಿವೆ. ಜಾತಿವಾರು ಜನಸಂಖ್ಯೆ ಬಗ್ಗೆ ಚರ್ಚೆ ನಡೆದಿಲ್ಲ. ಸಾಮಾಜಿಕ, ಆರ್ಥಿಕ ಸಮೀಕ್ಷಾ ವರದಿ ಸಂಪುಟ ಸಭೆಯಲ್ಲಿ ಮಂಡನೆಯಾಗಿದ್ದು, ಚರ್ಚೆ ಪ್ರಗತಿಯಲ್ಲಿದೆ ಸಚಿವ ಎಚ್.ಕೆ.ಪಾಟೀಲ್‌ಎಂದರು.

ಸೌಹಾರ್ದಯುತವಾಗಿ ಸಭೆಯಲ್ಲಿ ಚರ್ಚೆ ನಡೆದಿದೆ. ಆದರೆ ಜಾತಿಗಣತಿ ಬಗ್ಗೆ ಅಪೂರ್ಣವಾಗಿ ಮಾತುಕತೆ ಆಗಿದೆ. ಹೀಗಾಗಿ ಮುಂದಿನ ಸಚಿವ ಸಂಪುಟ ಸಭೆಯು ಏ.24ರಂದು ಮಲೆ ಮಹದೇಶ್ವರ ಬೆಟ್ಟದಲ್ಲಿ ನಡೆಯಲಿದೆ. ಸಚಿವರ ಅಭಿಪ್ರಾಯಗಳನ್ನು ಲಿಖಿತ ರೂಪದಲ್ಲಿ ಆ ಸಭೆಯಲ್ಲಿ ನೀಡುವಂತೆ ಸಿಎಂ ಸೂಚಿಸಿದ್ದಾರೆ ಎಂದರು. ಹೀಗಾಗಿ ಚರ್ಚೆಯನ್ನು ಮುಂದೂಡಲು ಸಭೆ ತೀರ್ಮಾನಿಸಿತು.

ಸಭೆಯ ನಂತರ ಸಂಪುಟದ ಹಲವು ಸಚಿವರು ಪ್ರತಿಕ್ರಿಯೆ ನೀಡಿದ್ದು, ವರದಿಗೆ ಯಾವುದೇ ಸಚಿವರು ವಿರೋಧ ವ್ಯಕ್ತಪಡಿಸಿಲ್ಲ. ವರದಿ ಬಗ್ಗೆ ಇನ್ನಷ್ಟು ಚರ್ಚೆ ನಡೆದು ಅಂತಿಮ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಸಮಜಾಯಿಷಿ ನೀಡಿದರು.

### ಜಾತಿಗಣತಿ ವರದಿಯಲ್ಲಿರುವ ಶಿಫಾರಸುಗಳ ಪ್ರಸ್ತಾವನೆ ಸಂಪುಟಕ್ಕೆ ಸಲ್ಲಿಕೆ:

ಈಗಿರುವ ಒಬಿಸಿ ಮೀಸಲಾತಿ ಪ್ರಮಾಣ ಹೆಚ್ಚಳ ಮಾಡಬೇಕು. ಒಬಿಸಿ ಮೀಸಲಾತಿ ಪ್ರಮಾಣ ಶೇ.32ರಿಂದ 51ಕ್ಕೆ ಹೆಚ್ಚಿಸಬೇಕು ಅಂತ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಿಶೇಷ ಸಚಿವ ಸಂಪುಟಕ್ಕೆ ಪ್ರಸ್ತಾವನೆ ಮಂಡನೆ ಮಾಡಲಾಯಿತು. ತಮಿಳುನಾಡಿನಲ್ಲಿ ಒಬಿಸಿ ಮೀಸಲಾತಿ ಶೇ.69ರಷ್ಟಿದೆ. ಜಾರ್ಖಂಡ್‌ನಲ್ಲಿ ಹಿಂದುಳಿದ ವರ್ಗಕ್ಕೆ ಶೇ.77ರಷ್ಟು ಮೀಸಲಾತಿ ಇದೆ. ಆ ರಾಜ್ಯಗಳಂತೆ ನಮ್ಮ ರಾಜ್ಯದಲ್ಲೂ ಒಬಿಸಿ ವರ್ಗಕ್ಕೆ ಮೀಸಲಾತಿ ಹೆಚ್ಚಿಸಿ ಅಂತ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಪ್ರಸ್ತಾವನೆಯನ್ನು ಸಂಪುಟದ ಮುಂದೆ ಇಡಲಾಯಿತು. ಯಾವ ವರ್ಗಕ್ಕೆ ಎಷ್ಟು ಮೀಸಲಾತಿ ಹೆಚ್ಚಾಗಬೇಕೆಂದು ಕೂಡ ಪ್ರಸ್ತಾಪ ಮಾಡಲಾಗಿದೆ.

ಶೇ.32ರಷ್ಟು ಮೀಸಲಾತಿ ಉಳಿಸಿಕೊಳ್ಳುವ ಒಂದು ಶಿಫಾರಸ್ಸು ಮಾಡಲಾಗಿತ್ತು. ಶೇ.51ಕ್ಕೆ ಮೀಸಲಾತಿ ಪ್ರಮಾಣ ಹೆಚ್ಚಿಸಲು ಮತ್ತೊಂದು ಶಿಫಾರಸ್ಸು ಮಾಡಲಾಗಿತ್ತು. 32% ಮೀಸಲಾತಿ ಉಳಿಸಿಕೊಂಡರೇ ಮೀಸಲಾತಿ ಪ್ರಮಾಣ ಅದಲು ಬದಲು ಎನ್ನುವ ಬಗ್ಗೆಯೂ ಮಾಹಿತಿ ನೀಡಲಾಯಿತು.ಪ್ರವರ್ಗ–1ಎಗೆ ಶೇ.4, ಪ್ರವರ್ಗ–1ಬಿಗೆ ಶೇ.7ರಷ್ಟು, ಪ್ರವರ್ಗ–2ಎ ಮೀಸಲಾತಿಯಲ್ಲಿ ಕಡಿತಗೊಳಿಸಬೇಕು. ಶೇ.15ರಿಂದ ಶೇ.7ಕ್ಕೆ ಕಡಿತ ಮಾಡಬೇಕೆಂಬ ಪ್ರಸ್ತಾವನೆಯನ್ನು ಇಡಲಾಗಿತ್ತು. ಪ್ರವರ್ಗ–2ಬಿ ಮುಸ್ಲಿಮರಿಗೆ ಶೇ.4ರಿಂದ 5ಕ್ಕೆ ಏರಿಕೆ ಮಾಡುವಂತೆಯೂ ಪ್ರಸ್ತಾವನೆಯಲ್ಲಿ ತಿಳಿಸಲಾಗಿತ್ತು. ಪ್ರವರ್ಗ–3ಎ ಗೆ ಶೇ.4ರಷ್ಟು, 3ಬಿಗೆ ಶೇ.5ರಷ್ಟು ಮೀಸಲಾತಿ ಹಂಚಿಕೆಗೆ ಪ್ರಸ್ತಾವನೆ ಮಾಡಲಾಗಿತ್ತು. ಪ್ರವರ್ಗ–1ಎ, ಬಿ ಸೇರಿ ಎಲ್ಲಾ ಪ್ರವರ್ಗಗಳಿಗೆ ಕೆನೆಪದರ ನೀತಿ ಅಳವಡಿಕೆ ಮಾಡಬೇಕು.

# ಮಸೂದೆಗಳ ಅಂಗೀಕಾರಕ್ಕೆ ರಾಷ್ಟ್ರಪತಿಗೆ ಸುಪ್ರೀಂ ಗಡುವು

### ಸುಪ್ರೀಂಕೋರ್ಟ್ ಆದೇಶಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಉಪರಾಷ್ಟ್ರಪತಿ ಧನ್ಕರ್



**ನವದೆಹಲಿ, ಏ.17:** ರಾಷ್ಟ್ರಪತಿಗಳು ಮಸೂದೆಗಳ ಮೇಲೆ ನಿರ್ಧಾರ ಕೈಗೊಳ್ಳಲು ಸಮಯದ ಗಡುವು ನೀಡಿರುವ ಸುಪ್ರೀಂಕೋರ್ಟ್ ಆದೇಶವನ್ನು ಉಪರಾಷ್ಟ್ರಪತಿ ಜಗದೀಪ್ ಧನಕರ್ ತೀಕ್ಷ್ಣವಾಗಿ ಟೀಕಿಸಿದ್ದಾರೆ. ಭಾರತದ ಸಂವಿಧಾನದ ಚೌಕಟ್ಟಿನಲ್ಲಿ ಈ ರೀತಿಯ ಆದೇಶವು ಸೂಕ್ತವಲ್ಲ ಎಂದು ಅವರು ಹೇಳಿದ್ದಾರೆ. ಖಾಸಗಿ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ರಾಷ್ಟ್ರಪತಿಗಳ ಕಾರ್ಯವೈಖರಿಯನ್ನು ಗಡುವಿನೊಳಗೆ ಒತ್ತಾಯಿಸುವ ಸುಪ್ರೀಂ ಕೋರ್ಟ್‌ನ ನಿರ್ಧಾರವು ಸಂವಿಧಾನದ ಸಮತೋಲನವನ್ನು ಒಡ್ಡುತ್ತದೆ ಎಂದು ಆಕ್ಷೇಪಿಸಿದ್ದಾರೆ. ರಾಷ್ಟ್ರಪತಿಗಳ ಕಚೇರಿಯು ಸಂವಿಧಾನದ ಒಂದು ಪ್ರಮುಖ ಭಾಗವಾಗಿದೆ. ಅದರ ಸ್ವಾಯತ್ತತೆಯನ್ನು ಗೌರವಿಸಬೇಕು ಎಂದು ಹೇಳಿದ್ದಾರೆ.

ಮಸೂದೆಗಳ ಮೇಲಿನ ನಿರ್ಧಾರಗಳು ಆಳವಾದ ಚಿಂತನೆ ಮತ್ತು ಸಮಾಲೋಚನೆಯನ್ನು ಒಳಗೊಂಡಿರುತ್ತವೆ, ಇಂತಹ ವಿಷಯಗಳಲ್ಲಿ ಗಡುವು ವಿಧಿಸುವುದು ಸರಿಯಲ್ಲ ಎಂದಿದ್ದಾರೆ. ನ್ಯಾಯಾಂಗದ ಪ್ರವೇಶ ಆತಂಕಕಾರಿ ಬೆಳವಣಿಗೆಯಾಗಿದೆ. ಕಾರ್ಯಾಂಗ ಮತ್ತು ಶಾಸಕಾಂಗದ ಜಾಗದಲ್ಲಿ ನ್ಯಾಯಾಂಗದ ಪ್ರವೇಶವಾಗುತ್ತಿದೆ, ರಾಷ್ಟ್ರಪತಿಗಳಿಗೆ ಕೋರ್ಟ್ ನಿರ್ದೇಶನ ನೀಡಲು ಸಾಧ್ಯವಿಲ್ಲ ಕೋರ್ಟ್‌ಗಳು ಸೂಪರ್ ಪಾರ್ಲಿಮೆಂಟ್ ಗಳಾಗಬಾರದು ನಾವು ಎಲ್ಲಿಗೆ ಹೋಗುತ್ತಿದ್ದೇವೆ? ದೇಶದಲ್ಲಿ ಏನಾಗುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ

## ಮುಸ್ಲಿಮರಿಗೆ ಶೇ.4 ಗುತ್ತಿಗೆ ಮೀಸಲಾತಿ ವಿಧೇಯಕ: ರಾಷ್ಟ್ರಪತಿ ಬಳಿಗೆ ರವಾನಿಸಿದ ಗೆಹ್ಲೋತ್



**ಬೆಂಗಳೂರು, ಏ.17:** ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಅವರು ಸರಕಾರಿ ಕಾಮಗಾರಿ ಗಳ ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಶೇ.4 ರಷ್ಟು ಮೀಸಲಾತಿ ಕಲ್ಪಿಸುವ ವಿಧೇಯಕವನ್ನು ರಾಷ್ಟ್ರಪತಿಗಳ ಒಪ್ಪಿಗೆಗಾಗಿ ಕಳುಹಿಸಿದ್ದಾರೆ ಎಂದು ವರದಿಯಾಗಿದೆ. ಮೂಲಗಳ ಪ್ರಕಾರ, ರಾಜ್ಯಪಾಲರು ಇಂದು(ಬುಧವಾರ) ಈ ಮಸೂದೆಯನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಒಪ್ಪಿಗೆಗಾಗಿ ಕಾಯ್ದಿರಿಸಿದ್ದಾರೆ. ಸಂವಿಧಾನವು ಧರ್ಮದ ಆಧಾರದ ಮೇಲೆ ಮೀಸಲಾತಿಗೆ ಅವಕಾಶ ನೀಡುವುದಿಲ್ಲ. ಮುಸ್ಲಿಮರು ಮಾತ್ರ ಇರುವ ಪ್ರವರ್ಗ 2(ಬಿ)ಗೆ ಶೇ.4ರಷ್ಟು ಮೀಸಲಾತಿ ನೀಡಿರುವುದನ್ನು ಧರ್ಮ ಆಧರಿಸಿ ಸಮುದಾಯಕ್ಕೆ ನೀಡಿದ ಮೀಸಲಾತಿ ಎಂದು ಅರ್ಥೈಸಿಕೊಳ್ಳಬಹುದು ಎಂದು ರಾಜಭವನವು ಹೇಳಿಕೆಯಲ್ಲಿ ತಿಳಿಸಿದೆ ಎನ್ನಲಾಗಿದೆ. ಅಲ್ಲದೆ, ರಾಜ್ಯಪಾಲರು ತಮ್ಮ ವಿವೇಚನಾ ಅಧಿಕಾರವನ್ನು ಬಳಸಿಕೊಂಡು ರಾಷ್ಟ್ರಪತಿಗಳಿಗೆ ಈ ಮಸೂದೆಯನ್ನು ಕಳುಹಿಸುತ್ತಿರುವುದಾಗಿ ಹೇಳಿದ್ದಾರೆ. ಸರಕಾರಿ ಗುತ್ತಿಗೆ ಕಾಮಗಾರಿಗಳಲ್ಲಿ ಮುಸ್ಲಿಮರಿಗೆ ಶೇ.4ರಷ್ಟು ಮೀಸಲಾತಿ ನೀಡುವ ಉದ್ದೇಶವನ್ನು ಹೊಂದಿರುವ ವಿಧೇಯಕವನ್ನು ಮಾರ್ಚ್‌ನಲ್ಲಿ ನಡೆದ ಅಧಿವೇಶನದಲ್ಲಿ ಉಭಯ ಸದನ ಅಂಗೀಕರಿಸಿತ್ತು. ರಾಜ್ಯದ ಪ್ರತಿಪಕ್ಷ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ಈ ವಿಧೇಯಕವನ್ನು ತೀವ್ರವಾಗಿ ವಿರೋಧಿಸಿರುವುದನ್ನು ಸ್ಮರಸಬಹುದು.

# ಬಿಜೆಪಿ ನೂತನ ರಾಷ್ಟ್ರೀಯ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ಚುರುಕು

### ಶೀಘ್ರವೇ ಕರ್ನಾಟಕ ಸೇರಿ ಹಲವು ರಾಜ್ಯಗಳ ಅಧ್ಯಕ್ಷರ ಬದಲಾವಣೆ ಸಾಧ್ಯತೆ

**ನವದೆಹಲಿ, ಏ.17:** ಬಿಜೆಪಿ ತನ್ನ ಹೊಸ ರಾಷ್ಟ್ರೀಯ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆಯನ್ನು ಚುರುಕುಗೊಳಿಸಿದ್ದು, ಪ್ರಮುಖ ರಾಜ್ಯಗಳ ಅಧ್ಯಕ್ಷರ ಹೆಸರುಗಳನ್ನು ಅಂತಿಮಗೊಳಿಸಲು ಪಕ್ಷದ ಉನ್ನತಮಟ್ಟದ ನಾಯಕರು ಚರ್ಚೆ ನಡೆಸಿದ್ದಾರೆ. ಮಂಗಳವಾರ ರಾತ್ರಿ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಹಾಲಿ ಬಿಜೆಪಿ ಅಧ್ಯಕ್ಷ ಜೆ.ಪಿ. ನಡ್ಡಾ ಸೇರಿದಂತೆ ಹಿರಿಯ ನಾಯಕರು ಈ ಬಗ್ಗೆ ಚರ್ಚೆ ನಡೆಸಿದ್ದಾರೆ. ರಾಷ್ಟ್ರೀಯ ಅಧ್ಯಕ್ಷರ ಬದಲಾವಣೆಗೆ 51% ನಷ್ಟು ರಾಜ್ಯಾಧ್ಯಕ್ಷರ ಬದಲಾವಣೆಗೆ ಕಡ್ಡಾಯವಾಗಿದೆ. ಈಗಾಗಲೇ 14 ರಾಜ್ಯ ಅಧ್ಯಕ್ಷರನ್ನು ನೇಮಿಸಲಾಗಿದೆ,



ಆದರೆ ಪಕ್ಷದ ಸಂವಿಧಾನದ ಪ್ರಕಾರ ರಾಷ್ಟ್ರೀಯ ಅಧ್ಯಕ್ಷೀಯ ಚುನಾವಣೆಯನ್ನು ನಡೆಸುವ ಮೊದಲು ಕನಿಷ್ಠ 19 ರಾಜ್ಯಗಳಲ್ಲಿ ಚುನಾವಣೆಗಳನ್ನು ನಡೆಸಬೇಕು. ಈ ಹಿನ್ನಲೆ ಬಾಕಿ ಐದು ರಾಜ್ಯಗಳ ಅಧ್ಯಕ್ಷರ ಬದಲಾವಣೆಗೆ ಬಗ್ಗೆ ಚರ್ಚೆ ನಡೆದಿದೆ ಎಂದು ಉನ್ನತ ಮೂಲಗಳು ಹೇಳಿವೆ.

ಬಿಜೆಪಿ ಹೈಕಮಾಂಡ್ ನಾಯಕರು ಕರ್ನಾಟಕ, ಉತ್ತರ ಪ್ರದೇಶ, ಗುಜರಾತ್, ಮಧ್ಯಪ್ರದೇಶ, ಮತ್ತು ಒಡಿಶಾ ರಾಜ್ಯಗಳಿಗೆ ಹೊಸ ರಾಜ್ಯ ಘಟಕದ ಮುಖ್ಯಸ್ಥರ ನೇಮಕದ ಕುರಿತು ಚರ್ಚೆ ನಡೆಸಿದ್ದಾರೆ. ಉಳಿದ ಪ್ರಮುಖ ರಾಜ್ಯಗಳ ರಾಜಾಧ್ಯಕ್ಷರ ಹೆಸರುಗಳನ್ನು ಶೀಘ್ರದಲ್ಲೇ ಅಂತಿಮಗೊಳಿಸುವ ಸಾಧ್ಯತೆಯಿದೆ.

ಈ ಪ್ರಕ್ರಿಯೆಗಳು ಪೂರ್ಣಗೊಂಡ ನಂತರ, ಬಿಜೆಪಿಯ ರಾಷ್ಟ್ರೀಯ ಚುನಾವಣಾ ಅಧಿಕಾರಿ ಮುಂದಿನ ರಾಷ್ಟ್ರೀಯ ಅಧ್ಯಕ್ಷರ ಆಯ್ಕೆ ವೇಳಾಪಟ್ಟಿಯನ್ನು ಔಪಚಾರಿಕವಾಗಿ ಘೋಷಣೆ ಮಾಡಬಹುದು. ಮೂಲಗಳ ಪ್ರಕಾರ ಈ ತಿಂಗಳ ಅಂತ್ಯದ ವೇಳೆಗೆ ಅಥವಾ ಮುಂದಿನ ತಿಂಗಳ ಆರಂಭದಲ್ಲಿ ಚುನಾವಣೆ ನಡೆಯಬಹುದು. ಹವಾಮಾನ ವೈಪರೀತ್ಯದಿಂದಾಗಿ ಜಮ್ಮು ಭೇಟಿಯನ್ನು ಮುಂದೂಡಿದ್ದರಿಂದ, ಪ್ರಧಾನಿಯವರ ವೇಳಾಪಟ್ಟಿಯಲ್ಲಿ ಸಂಬಂಧವಿಲ್ಲದ ಬದಲಾವಣೆಗಳ ಮಧ್ಯೆ ಆಂತರಿಕ ಬೆಳವಣಿಗೆಗಳು ಸಂಭವಿಸಿವೆ.

# ಕೇಂದ್ರ ಸರ್ಕಾರದ ನೀತಿಗಳೇ ಬೆಲೆ ಏರಿಕೆಗೆ ಕಾರಣ: ರಾಜ್ಯ ಕಾಂಗ್ರೆಸ್ ನಾಯಕರ ವಾಗ್ದಾಳಿ

**ಬೆಂಗಳೂರು, ಏ.17:** ಕೇಂದ್ರ ಸರ್ಕಾರದ ನೀತಿಗಳಿಂದ ದೇಶದಲ್ಲಿ ಜೀವನಾವಶ್ಯಕ ವಸ್ತುಗಳ ಬೆಲೆ ದುಬಾರಿಯಾಗಿದ್ದು, ಬೆಲೆ ಏರಿಕೆಗೆ ಮೋದಿ ಸರ್ಕಾರವೇ ಕಾರಣ ಎಂದು ಆರೋಪಿಸಿ ಕಾಂಗ್ರೆಸ್ ಗುರುವಾರ ಫ್ರೀಡಂಪಾರ್ಕ್‌ನಲ್ಲಿ ರಾಜ್ಯಮಟ್ಟದ ಬೃಹತ್ ಪ್ರತಿಭಟನೆ ನಡೆಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಎಐಸಿಸಿ ಪ್ರಧಾನಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ, ಸಚಿವರಾದ ಹೆಚ್.ಕೆ.ಪಾಟೀಲ್, ಎಚ್.ಸಿ.ಮಹದೇವಪ್ಪ, ಕೃಷ್ಣಬೈರೇಗೌಡ, ಈಶ್ವರ್ ಖಂಡ್ರೆ, ರಾಮಲಿಂಗಾರೆಡ್ಡಿ, ಚಲುವರಾಯಸ್ವಾಮಿ, ಬೈರತಿ ಸುರೇಶ್, ಕೆ.ಜೆ.ಜಾರ್ಜ್, ಕೆ.ಎಚ್.ಮುನಿಯಪ್ಪ ಸೇರಿದಂತೆ ಅನೇಕ ಸಚಿವರು, ಶಾಸಕರು ಹಾಗೂ ಕಾಂಗ್ರೆಸ್ ನಾಯಕರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು. ಬೇಕಿತ್ತಾ ದುಬಾರಿ ಬೆಲೆ ಏರಿಕೆಯ ಸರ್ಕಾರ ಎಂದು ಪ್ರತಿಭಟನಾಕಾರರು ಕೇಂದ್ರದ ಬಿಜೆಪಿ ಸರ್ಕಾರವನ್ನು ಪ್ರಶ್ನಿಸಿದರು. ಪ್ರತಿಭಟನೆಯಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಸರ್ಕಾರ ನಿರುದ್ಯೋಗ, ಬೆಲೆ ಏರಿಕೆಯ ಬಗ್ಗೆ ಮಾತನಾಡುವುದಿಲ್ಲ. ಪ್ರತಿಬಾರಿಯೂ ಸುಳ್ಳುಗಳ ಮೂಲಕ ಜನರನ್ನು ದಾರಿ ತಪ್ಪಿಸುವ ಯತ್ನ ನಡೆಸುತ್ತಿದ್ದಾರೆ. ಬಿಜೆಪಿಯಿಂದ ನಡೆಸುತ್ತಿರುವ ಜನಾಕ್ರೋಶ ಯಾತ್ರೆ ಜನರ ಸಿಟ್ಟಿಗೆ ಕಾರಣವಾಗಿದೆ ಎಂದು ಕಿಡಿಕಾರಿದರು. ಕಾಂಗ್ರೆಸ್ ಸರ್ಕಾರ ಬೆಲೆ ಏರಿಕೆಯಿಂದ ತತ್ತರಿಸಿರುವ ಜನರ ನೆರವಿಗಾಗಿ ಐದು ಗ್ಯಾರಂಟಿಗಳನ್ನು ನೀಡಲಾಗುತ್ತಿದೆ. ಬಿಜೆಪಿ–ಜೆಡಿಎಸ್‌ನವರು ಜನಪರ ಯೋಜನೆಗಳನ್ನು ಟೀಕಿಸಿದರು. ಈ ಮೂಲಕ ವಿರೋಧ ಪಕ್ಷಗಳ ನಾಯಕರು ಜನಸಾಮಾನ್ಯರ ಪರವಾದ ಕಾರ್ಯಕ್ರಮಗಳಿಗೆ ಅಡ್ಡಿ ಪಡಿಸಲು ಯತ್ನಿಸಿದರು ಎಂದು ಆರೋಪಿಸಿದರು. ಕೇಂದ್ರ ಸರ್ಕಾರ ಇತ್ತೀಚೆಗೆ ಎಲ್‌ಪಿಜಿ ಬೆಲೆ ಏರಿಕೆ ಮಾಡಿದ್ದಕ್ಕೆ ಮತ್ತು ಪಕ್ಷದ ನಾಯಕರಾದ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ವಿರುದ್ಧ ಜಾರಿ ನಿರ್ದೇಶನಾಲಯ ಸಲ್ಲಿಸಿದ ಆರೋಪಪಟ್ಟಿಯ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯ ತೀವ್ರ ವಾಗ್ದಾಳಿ ನಡೆಸಿದರು.



**ಸಚಿವರಾದ ಕೆ.ಕೆ.ಜಾರ್ಜ್, ಕೆ.ಎಚ್.ಮುನಿಯಪ್ಪ, ರಾಮಲಿಂಗಾರೆಡ್ಡಿ, ಡಾ.ಎಂ.ಸಿ.ಸುಧಾಕರ್, ರಾಜ್ಯ ಮಹಿಳಾ ಕಾಂಗ್ರೆಸ್ ಅಧ್ಯಕ್ಕೆ ಸೌಮ್ಯ ರೆಡ್ಡಿ, ಎಐಸಿಸಿಯ ಯುವಘಟಕದ ಮಾಜಿ ರಾಷ್ಟ್ರೀಯ ಅಧ್ಯಕ್ಷ ಬಿ.ವಿ.ಶ್ರೀನಿವಾಸ್ ಮತ್ತಿತರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು. ಡಿ.ಕೆ.ಶಿವಕುಮಾರ್ ಸಿಲಿಂಡರ್ ಪ್ರತಿಕೃತಿಯನ್ನು ಹೆಗಲ ಮೇಲೆ ಹೊತ್ತು ಪ್ರತಿಭಟನೆ ವ್ಯಕ್ತಪಡಿಸಿದರೆ, ಮುಖ್ಯಮಂತ್ರಿಯವರು ಪ್ರತಿಭಟನೆಯ ಭಿತ್ತಿಪತ್ರವನ್ನು ಪ್ರದರ್ಶಿಸಿದರು.**

### ಬೆಲೆ ಏರಿಕೆಗೆ ಜನರ ಆಕ್ರೋಶ: 2028ರಲ್ಲಿ ಮತ್ತೆ ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ- ಡಿ.ಕೆ.ಶಿ ಭವಿಷ್ಯ

ಬೆಲೆ ಏರಿಕೆ ವಿಚಾರವಾಗಿ ಬಿಜೆಪಿ ಮತ್ತು ಜೆಡಿಎಸ್ ವಿರುದ್ಧ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಾಗ್ದಾಳಿ ನಡೆಸಿದ್ದು, ಬೆಲೆ ಏರಿಕೆ ವಿರುದ್ಧದ ಸಾರ್ವಜನಿಕರ ಕೋಪವು 2028ರಲ್ಲಿ ಕಾಂಗ್ರೆಸ್ ಅನ್ನು ಮತ್ತೆ ಅಧಿಕಾರಕ್ಕೆ ತರುತ್ತದೆ ಎಂದು ಭವಿಷ್ಯ ನುಡಿದರು. ಇತ್ತೀಚೆಗೆ ಹಾಲಿನ ಬೆಲೆಯಲ್ಲಿ 4 ರೂ. ಹೆಚ್ಚಳ ಮಾಡಲಾಗಿದ್ದು, ಇತರ ರಾಜ್ಯಗಳಿಗಿಂತ ಕಡಿಮೆ ದರ ಇದಾಗಿದೆ. ಸರ್ಕಾರವು ರೈತರು ಮತ್ತು ಸಾರ್ವಜನಿಕರ ಪರವಾಗಿ ಕೆಲಸ ಮಾಡುತ್ತಿದೆ. ಟೂತ್‌ಪೇಸ್ಟ್, ಮೊಬೈಲ್ ಫೋನ್‌ಗಳು, ಸಿಮೆಂಟ್ ಮತ್ತು ಕಾರುಗಳಂತಹ ಅಗತ್ಯ ವಸ್ತುಗಳ ಬೆಲೆ ಏರಿಕೆ ಸಾಮಾನ್ಯ ಜನರ ಮೇಲಿನ ಹೊರೆಗೆ ಉದಾಹರಣೆಗಳಾಗಿವೆ. ಚಿನ್ನದ ಬೆಲೆ ಏರಿಕೆಯಿಂದಾಗಿ ಮಂಗಳಸೂತ್ರಗಳಂತಹ ಸಾಂಪ್ರದಾಯಿಕ ಆಭರಣಗಳನ್ನು ಭರಿಸಲು ಸಹ ಮಹಿಳೆಯರಿಗೆ ಕಷ್ಟವಾಗಿದೆ ಎಂದು ಅವರು ಹೇಳಿದರು. ಬಿಜೆಪಿ–ಜೆಡಿಎಸ್ ಪಕ್ಷಗಳಿಗೆ ಕಾಂಗ್ರೆಸ್ ಸರ್ಕಾರದ ಜನಪರ ಯೋಜನೆಗಳನ್ನು ಸಹಿಸಿಕೊಳ್ಳಲಾಗುತ್ತಿಲ್ಲ. ಅದಕ್ಕಾಗಿ ಪ್ರತಿದಿನ ಅಪಪ್ರಚಾರ ಮಾಡುತ್ತಿದ್ದಾರೆ. ಆದರೆ ಜನರಿಗೆ ವಾಸ್ತವತೆ ಗೊತ್ತಿದೆ ಎಂದರು.

### ಕಾಂಗ್ರೆಸ್ ಮಾಂಗಲ್ಯ ಸರ ಕಿತ್ತುಕೊಳ್ಳುತ್ತದೆ: ಪ್ರಧಾನಿ ಹೇಳಿಕೆಗೆ ಡಿಸಿಎಂ ತಿರುಗೇಟು

ಕಳೆದ ಲೋಕಸಭಾ ಚುನಾವಣಾ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ಪ್ರಚಾರ ಕಾರ್ಯಕ್ರಮದಲ್ಲಿ, ಕಾಂಗ್ರೆಸ್ ಅಧಿಕಾರಕ್ಕೆ ಬಂದ್ರೆ ಮಾಂಗಲ್ಯ ಸರ ಕಿತ್ತುಕೊಳ್ಳುತ್ತದೆ ಎಂದು ವಾಗ್ದಾಳಿ ಮಾಡಿದ್ದರು. ಪ್ರಧಾನಿ ಮೋದಿಯವರ ಈ ಹೇಳಿಕೆಗೆ ಡಿಸಿಎಂ ಡಿ.ಕೆ.ಶಿವಕುಮಾರ್ ತಿರುಗೇಟು ನೀಡಿದ್ದಾರೆ. ಕೇಂದ್ರ ಸರ್ಕಾರ ಚಿನ್ನದ ಬೆಲೆಯನ್ನು ಏರಿಸಿದೆ. ಇದರಿಂದ ಮಹಿಳೆಯರು ಮಾಂಗಲ್ಯ ಸರ ಕಟ್ಟಿಕೊಳ್ಳಲು ಆಗುತ್ತಿಲ್ಲ ಎಂದು ತಿರುಗೇಟು ನೀಡಿದ್ದಾರೆ.

### ಬೆಲೆ ಏರಿಕೆ ಬಡವರ ರಕ್ತ ಹೀರುವ ಕ್ರಮ: ಕಂದಾಯ ಸಚಿವ ಕೃಷ್ಣ ಬೈರೇಗೌಡ ವಾಗ್ದಾಳಿ

ಸಚಿವ ಕೃಷ್ಣ ಬೈರೇಗೌಡ, ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಡೀಸೆಲ್ ಬೆಲೆ 500 ಪಟ್ಟು, ಪೆಟ್ರೋಲ್ ಬೆಲೆ 250 ಪಟ್ಟು ಹೆಚ್ಚಾಗಿದೆ. ಅಡುಗೆ ಅನಿಲ ದರ 400 ರೂಪಾಯಿನಿಂದ 900 ರೂಪಾಯಿ ಆಗಿದೆ ಎಂದು ಆಕ್ರೋಶ ವ್ಯಕ್ತ ಪಡಿಸಿದರು. ಶ್ರೀಮಂತರ ಮೇಲಿನ ತೆರಿಗೆಯನ್ನು ಕಡಿಮೆ ಮಾಡಿ, ಜನ ಸಾಮಾನ್ಯರ ಮೇಲೆ ದುಬಾರಿ ತೆರಿಗೆ ಹಾಕಿ ಬೆಲೆ ಹೆಚ್ಚಿಸಲಾಗುತ್ತಿದೆ ಎಂದು ಆಕ್ರೋಶ ವ್ಯಕ್ತ ಪಡಿಸಿದರು. ಶ್ರೀಮಂತರಿಗೆ ತೆರಿಗೆ ಕಡಿತ ಮತ್ತು ಅನಿಲ, ತೈಲ ಮತ್ತು ಸಿಮೆಂಟ್‌ನಂತಹ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗಿದ್ದು, ಇದು ಜನರ ರಕ್ತ ಹೀರುವ ಕ್ರಮವಾಗಿದೆ ಎಂದು ಕರೆದರು. ಎಐಸಿಸಿ ಪ್ರಮುಖರಾದ ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿ ವಿರುದ್ಧ ಜಾರಿ ನಿರ್ದೇಶನಾಲಯದಿಂದ ದೋಷಾರೋಪಣಾ ಪಟ್ಟಿ ಸಲ್ಲಿಸಿರುವುದನ್ನು ಖಂಡಿಸಲಾಯಿತು.

### ಸುಳ್ಳೇ ಬಿಜೆಪಿಯ ಮನೆ ದೇವರು: ಸಿಎಂ

ರಾಜಕೀಯ ಅಂದರೆ ಬರೀ ಅಧಿಕಾರ ಅಲ್ಲ. ಸೈದ್ಧಾಂತಿಕ ಸ್ಪಷ್ಟತೆಯಿಂದ ಜನರ ಪರವಾಗಿ ನಿಂತು ನಿರಂತರ ಹೋರಾಟ ನಡೆಸುವುದೂ ರಾಜಕೀಯ ಬದ್ಧತೆಯೇ ಆಗಿದೆ ಎಂದು ಸಿಎಂ ಸಿದ್ದರಾಮಯ್ಯ ಅಭಿಪ್ರಾಯಪಟ್ಟರು. ಆರ್‌ಎಸ್‌ಎಸ್ ಸುಳ್ಳಿನ ಮಹಾ ಕಾರ್ಖಾನೆ ಎಂದ ಸಿಎಂ, ಅಂಬೇಡ್ಕರ್ ಅವರನ್ನು ಸೋಲಿಸಿದ್ದೇ ಸಾವರ್ಕರ್ ಮತ್ತು ಢಾಂಗೆ ಎಂದು ಸ್ವತಃ ಅಂಬೇಡ್ಕರ್ ಅವರೇ ಬರೆದಿದ್ದಾರೆ. ಆದರೆ ಕಾಂಗ್ರೆಸ್ ಸೋಲಿಸಿದ್ದು ಎಂದು ಬಿಜೆಪಿ ಬಂಡಲ್ ಬಿಡುತ್ತಿದೆ. ಸುಳ್ಳಿನ ಕಾರ್ಖಾನೆ RSSನ ಸುಳ್ಳುಗಳ ವಿರುದ್ಧ ಸತ್ಯವನ್ನು ದೇಶದ ತುಂಬ ಹೇಳುವ ಎದೆಗಾರಿಕೆ ಬೆಳೆಸಿಕೊಳ್ಳಬೇಕು ಎಂದು ಕಾರ್ಯಕರ್ತರಿಗೆ ಸಿಎಂ ಕರೆ ನೀಡಿದರು.ನಮ್ಮ ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿದೆ ಎಂದು ಅಪಪ್ರಚಾರ ಮಾಡುತ್ತಾ ಮೋದಿ ಸರ್ಕಾರ ತನ್ನ ಬಡವರ, ಮಧ್ಯಮ ವರ್ಗ ವಿರೋಧಿತನವನ್ನು ಬಚ್ಚಿಡಲು ಯತ್ನಿಸುತ್ತಿದೆ. ಸರ್ಕಾರ ದಿವಾಳಿ ಆಗಿದ್ದರೆ ಗ್ಯಾರಂಟಿಗಳಿಗೆ 56 ಸಾವಿರ ಕೋಟಿ ರೂಪಾಯಿ ಪ್ರತೀ ವರ್ಷ ತೆಗೆದಿಡಲು ಸಾಧ್ಯವಾಗುತ್ತಿತ್ತಾ ಎಂದು ಪ್ರಶ್ನಿಸಿದರು.ಗೊಬ್ಬರ, ಔಷಧಿ, ರಾಗಿ, ಗೋದಿ, ಡೀಸೆಲ್, ಪೆಟ್ರೋಲ್ ಎಲ್ಲದರ ಬೆಲೆ ಆಕಾಶಕ್ಕೇರಿಸಿದ ಮೋದಿಯವರು ಭಾರತದ ಮಧ್ಯಮ ವರ್ಗ ಮತ್ತು ಬಡವರ ವಿರೋಧಿಯಾಗಿದ್ದಾರೆ.

**ನಿತ್ಯ ಪಂಚಾಂಗ 18.04.2025 ಶುಕ್ರವಾರ**



ಶ್ರೀ ವಿಶ್ವಾವಸು ನಾಮ ಸಂವತ್ಸರ,
ಉತ್ತರಾಯಣ ವಸಂತ ಋತು
ಚಾಂದ್ರಮಾನ, ಚೈತ್ರ ಬಹುಳ

ಪಂಚಮಿ, ಮೂಲ ನಕ್ಷತ್ರ,
ಗುಡ್ ಫ್ರೈಡೇ,
ಗುಲ್ವರ್ಗ ಸನ್ನತಿ ಚಂದ್ರಲಾಪರಮೇಶ್ವರಿ ರಥ.
ಕಮಲ ಶಿಲೆ ದುರ್ಗಾಪರಮೇಶ್ವರೀ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 –12.00 | 1.30 – 3.00 |
| ಮಂಗಳ | 3.00 – 4.30 | 9.00 –10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 –12.00 |
| ಗುರು | 1.30 – 3.00 | 6.00 – 7.30 | 9.00 –10.30 |
| ಶುಕ್ರ | 10.30 –12.00 | 3.00 – 4.30 | 7.30 – 9.00 |
| ಶನಿ | 9.00 –10.30 | 1.30 – 3.00 | 6.00 – 7.30 |

# ರಥಯಾತ್ರೆಯಿಂದ ಸಾಹಿತ್ಯದ ಪರಿಚಯ, ಬಸವಣ್ಣನ ವಿಚಾರಗಳು ಪ್ರಸಾರ: ಮುಖ್ಯಮಂತ್ರಿ ಸಿದ್ದರಾಮಯ್ಯ ಬಣ್ಣನೆ

**ಬೆಂಗಳೂರು, ಏ.17:** ಅನುಭವ ಮಂಟಪ– ಬಸವಾದಿ ಶರಣರ ವೈಭವ ರಥಯಾತ್ರೆಯು ಇಡೀ ರಾಜ್ಯದಲ್ಲಿ ಪ್ರಯಾಣ ಮಾಡಲಿದೆ. ಇದರಿಂದ ವಚನ ಸಾಹಿತ್ಯದ ಪರಿಚಯ, ಬಸವಣ್ಣನವರ ವಿಚಾರಗಳು ಪ್ರಚಾರವಾಗುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ವಿಧಾನಸೌಧದಲ್ಲಿ ಇಂದು ಆಯೋಜಿಸಲಾಗಿದ್ದ ಅನುಭವ ಮಂಟಪ– ಬಸವಾದಿ ಶರಣರ ವೈಭವ ಕಾರ್ಯಕ್ರಮದ ಲಾಂಛನ ಬಿಡುಗಡೆ ಮತ್ತು ರಥಯಾತ್ರೆಗೆ ಚಾಲನೆ ನೀಡಿ, ಮಾತನಾಡಿದರು.

ಬಸವಣ್ಣನವರು ಸಮಾಜಕ್ಕಾಗಿ ಬದುಕಿದವರು. ಸಮಾಜದ ಬದಲಾವಣೆಗಾಗಿ ಬದುಕಿರುವವರೆಗೂ ಪ್ರಯತ್ನಿಸಿದರು. ಬಸವಣ್ಣನವರ ಅನುಭವ ಮಂಟಪ ಪರಿಕಲ್ಪನೆಯ ಮೂಲಕ 12ನೇ ಶತಮಾನದಲ್ಲಿಯೇ ಪ್ರಜಾಪ್ರಭುತ್ವದ ಸ್ಥಾಪನೆಯಾಗಿತು.



ಇಲ್ಲಿ ಚರ್ಚೆ ಮತ್ತು ಅದಕ್ಕೆ ಪರಿಹಾರವನ್ನು ಕಂಡುಹಿಡಿದು ಅದನ್ನು ಜಾರಿ ಮಾಡುತ್ತಿದ್ದರು. ಜಗತ್ತಿನ ಮೊದಲನೇ ಸಂಸತ್ತು ಇದಾಗಿತ್ತು. ಎಲ್ಲಾ ಧರ್ಮ, ಜಾತಿಯವರಿಗೆ ಭಾಗವಹಿಸಲು ಅವಕಾಶವನ್ನು ಕಲ್ಪಿಸಲಾಗಿತ್ತಲ್ಲದೇ ಅವರ ಅಭಿಪ್ರಾಯವನ್ನು ಮುಕ್ತವಾಗಿ ವ್ಯಕ್ತಪಡಿಸಬಹುದಾಗಿತ್ತು ಎಂದರು.

ಕಳೆದ ಬಾರಿ ನಮ್ಮ ಸರ್ಕಾರದ ಅವಧಿಯಲ್ಲಿ ಬಸವ ಕಲ್ಯಾಣದ ಪುನರುತ್ಥಾನ ಮಾಡಲು ಹಿರಿಯ ಸಾಹಿತಿ ಗೊ.ರು. ಚನ್ನಬಸಪ್ಪ ಅವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿತ್ತು. ಪುನರುತ್ಥಾನದ ಕೆಲಸವನ್ನು ಈ ಬಾರಿ ಪೂರೈಸಲಾಗುವುದು ಎಂದು ಮುಖ್ಯಮಂತ್ರಿಗಳು ಈ ಸಂದರ್ಭದಲ್ಲಿ ಭರವಸೆ ನೀಡಿದರು.

ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ನಮ್ಮ ಸರ್ಕಾರ ಘೋಷಣೆಯನ್ನು ಮಾಡಿದೆ. ಕೇವಲ ಘೋಷಣೆ ಮಾಡಿಲ್ಲ ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಒಪ್ಪಿಕೊಂಡು ಜಾರಿ ಮಾಡಿದೆ. ಬಸವಣ್ಣ ಸಾಮಾಜಿಕ ಕ್ರಾಂತಿ ಮಾಡಿದವರು. ಸಮಾಜದಲ್ಲಿನ ಸಾಮಾಜಿಕ ರೋಗಗಳಿಗೆ ಪರಿಹಾರವನ್ನು ಸೂಚಿಸಿದ್ದು ಮಾತ್ರವಲ್ಲದೇ ನುಡಿದಂತೆ ನಡೆಯುವ ಹಾಗೂ ನಡೆದಂತೆ ನುಡಿಯುವ ಪ್ರಯತ್ನವನ್ನು ಮಾಡಿದರು ಎಂದರು.

# ಜಾತಿಗಣತಿ ಮತ್ತೊಮ್ಮೆ ನಡೆಸಿ ಕೇಂದ್ರ ಸಚಿವ ವಿ.ಸೋಮಣ್ಣ ಸಲಹೆ




**ಬೆಂಗಳೂರು ಏ.17:** ಜಾತಿಗಣತಿ ವರದಿಯಲ್ಲಿ ಗೊಂದಲ ಸೃಷ್ಟಿಯಾಗಿದ್ದು, ಮತ್ತೊಮ್ಮೆ ಸರ್ವೇ ಮಾಡುವಂತೆ ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ ರಾಜ್ಯ ಸರ್ಕಾರಕ್ಕೆ ಸಲಹೆ ನೀಡಿದ್ದಾರೆ. ತುಮಕೂರು ಜಿಲ್ಲೆಯ ಗುಬ್ಬಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಜಾತಿ ಗಣತಿ ವರದಿಗೆ 10 ವರ್ಷ ಕಳೆದಿದೆ. ಆಯೋಗದ ಅಧ್ಯಕ್ಷರಾಗಿದ್ದ ಕಾಂತರಾಜು ಸಹಿ ಹಾಕದೆ ಓಡಿಹೋಗಿದ್ದರು. ನಾವು ಜಯಪ್ರಕಾಶ್ ಹೆಗಡೇನಾ ಕರೆತಂದೆವು, ಅವರು ಕೂಡ ಎಲ್ಲೋ ಒಂದು ಕಡೆ ಮಕ್ಕಿಕಾ ಮಕ್ಕಿ ಆದರು. ಎಲ್ಲರಿಗೂ ಸ್ವಾರ್ಥ ತುಂಬಿ ತುಳುಕಿತ್ತು ಎಂದರು.

ಇದರಲ್ಲಿ ಯಾರಿಗೆ ತೊಂದರೆ ಅನ್ನೋದಕ್ಕಿಂತ ಗೊಂದಲ ಸೃಷ್ಟಿಯಾಗಿದೆ. ಇನ್ನಷ್ಟು ಗೊಂದಲ ಮಾಡಿ ಕೊಳ್ಳದೆ, ವರದಿ ತಿರಸ್ಕಾರ ಮಾಡಿ, ಮತ್ತೆ ಪ್ರತಿಯೊಂದನ್ನು ಪಾರದರ್ಶಕವಾಗಿ ಪುನಃ ಸರ್ವೇ ಮಾಡಿ ಎಂದು ಹೇಳಿದರು. ಒಂದು ಕಣ್ಣಿಗೆ ಬೆಣ್ಣೆ ಒಂದು ಕಣ್ಣಿಗೆ ಸುಣ್ಣ ಹಚ್ಚುವ ಕಾರ್ಯ ಮಾಡಬೇಡಿ. ಇಷ್ಟೆಲ್ಲಾ ಗೊಂದಲ ಇಟ್ಟುಕೊಂಡು ಇದನ್ನು ಜಾರಿ ಮಾಡಿದರೆ ಜೇನುಗೂಡಿಗೆ ಕೈ ಹಾಕಿದ ಹಾಗೆ ಆಗುತ್ತದೆ. ಇದರಿಂದ ಏನೂ ಪ್ರಪಂಚ ಮುಳುಗಿ ಹೋಗುವುದಿಲ್ಲ ಎಂದರು. ಸಿದ್ದರಾಮಯ್ಯ ಅರಿವು ಉಳ್ಳವರಾಗಿ ಹೀಗೆ ಮಾಡಬಾರದು, ಒಂದೂವರೆ ವರ್ಷ ಸಮಯ ಕೊಟ್ಟು ಮತ್ತೊಮ್ಮೆ ಸರ್ವೇ ಮಾಡಿ. ನಿಮ್ಮ ಕಾಲದಲ್ಲೇ ಅನೌನ್ಸ್ ಮಾಡಿ ನೀವೇ ಕ್ರೆಡಿಟ್ ತಗೊಳ್ಳಿ. ಆಗ ದೇವರಾಜ ಅರಸು ತರ ನಿಮ್ಮನ್ನು ನೆನಪು ಮಾಡಿಕೊಳ್ಳುತ್ತೇವೆ. ಅದನ್ನು ಬಿಟ್ಟು ಇರುವ ವರದಿ ಜಾರಿ ಮಾಡಿ ಖಳನಾಯಕರಾಗಬೇಡಿ ಎಂದು ಅವರು ಹೇಳಿದರು.

# ದೋಷಪೂರಿತ ಜಾತಿಗಣತಿ ವರದಿ ಜಾರಿ ಬೇಡ: ಕೇಂದ್ರ ಸಚಿವೆ ಕರಂದ್ಲಾಜೆ ಅಭಿಮತ

**ಬೆಂಗಳೂರು, ಏ.17–** ಜಾತಿ ಗಣತಿ ವರದಿಯನ್ನು ಅನುಷ್ಠಾನ ಮಾಡದೇ ಅದನ್ನು ತಿರಸ್ಕರಿಸಬೇಕು ಎಂದು ಕೇಂದ್ರ ಸಚಿವ ಶೋಭ ಕರಂದ್ಲಾಜೆ ಒತ್ತಾಯಿಸಿದ್ದಾರೆ. ಹಿಂದುಳಿದ ವರ್ಗಗಳ ಶಾಶ್ವತ ಆಯೋಗ ಸರ್ಕಾರಕ್ಕೆ ಸಲ್ಲಿಕೆ ಮಾಡಿರುವ ಜಾತಿ ಗಣತಿ ವರದಿಯ ಬಗ್ಗೆ ಸಾಕಷ್ಟು ಸಂಶಯಗಳು ವ್ಯಕ್ತವಾಗಿವೆ. ಹಾಗಾಗಿ ವರದಿ ಅನುಷ್ಠಾನ ಬೇಡ. ಅದನ್ನು ತಿರಸ್ಕರಿಸಿ ಎಂದು ಕೇಂದ್ರ ಸಚಿವೆ ಶೋಭ ಕರಂದ್ಲಾಜೆ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಪತ್ರ ಬರೆದು ಆಗ್ರಹಿಸಿದ್ದಾರೆ.

ಈ ಹಿಂದೆ ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ಅಧ್ಯಕ್ಷರಾಗಿದ್ದ ಕಾಂತರಾಜು ಮೇಲುಸ್ತುವಾರಿಯಲ್ಲಿ ಸಿದ್ಧಪಡಿಸಲಾದ ಜಾತಿ ಗಣತಿ ವರದಿ ದೋಷಪೂರಿತವಾಗಿದೆ. ವಿವಿಧ ಸಮುದಾಯಗಳ ಜನಸಂಖ್ಯೆಯ ಅಂಕಿ–ಅಂಶಗಳಲ್ಲೂ ಅತ್ಯಂತ ಎದ್ದು ಕಾಣುವ ವ್ಯತ್ಯಾಸಗಳು ಇವೆ. ಹೀಗಾಗಿ ಈ ವರದಿ ಜಾರಿ ಬೇಡ ಎಂದು ಅವರು ಹೇಳಿದ್ದಾರೆ.

ಜಾತಿ ಗಣತಿ ವರದಿಯಲ್ಲಿ ಲಿಂಗಾಯತ ಜನಸಂಖ್ಯೆ ಕೇವಲ 60 ಲಕ್ಷ ಎಂದು ಉಲ್ಲೇಖಿಸಿರುವ ಬಗ್ಗೆ ಸೋರಿಕೆಯಾಗಿರುವ ಮಾಹಿತಿಗಳು ಹೇಳಿವೆ. ಆದರೆ ವೀರಶೈವ–ಲಿಂಗಾಯತರ ಸಂಖ್ಯೆ 1.25 ಕೋಟಿ ಮೀರಿದೆ. ಸಾದರ ಲಿಂಗಾಯತರನ್ನು ವರದಿಯಲ್ಲಿ 67 ಸಾವಿರ ಎಂದು ತೋರಿಸಲಾಗಿದೆ. ಚನ್ನಗಿರಿ ವಿಧಾನಸಭಾ ಕ್ಷೇತ್ರವೊಂದರಲ್ಲೇ ಸುಮಾರು 60 ಸಾವಿರ ಸಾದರ ಲಿಂಗಾಯತರಿದ್ದಾರೆ. ಇದನ್ನೆಲ್ಲಾ ನೋಡಿದರೆ ವರದಿ ಸಮರ್ಪಕವಾಗಿಲ್ಲ. ಇದನ್ನು ತಿರಸ್ಕರಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.



ಜಾತಿ ಗಣತಿ ವರದಿಗೆ 169 ಕೋಟಿ ರೂ. ಖರ್ಚು ಮಾಡಲಾಗಿದೆ ಎಂದು ಹೇಳಲಾಗಿದೆ. ಜಾತಿ ಗಣತಿಗೆ ಸಂಬಂಧಿಸಿದ ವಿಧಾನಗಳು, ಸಂಶೋಧನೆಗಳು ಮತ್ತು ವೆಚ್ಚಗಳನ್ನು ವಿವರಿಸುವ ಶ್ವೇತ ಪತ್ರವನ್ನು ಸರ್ಕಾರ ಬಿಡುಗಡೆ ಮಾಡಬೇಕು ಎಂದು ಅವರು ಮುಖ್ಯಮಂತ್ರಿಗಳಿಗೆ ಬರೆದಿರುವ ಪತ್ರದಲ್ಲಿ ಒತ್ತಾಯಿಸಿದ್ದಾರೆ.

# ಜಾತಿಗಣತಿ ಆಯೋಗ ವರದಿ ಸೋರಿಕೆ: ಉನ್ನತಮಟ್ಟದ ತನಿಖೆಗೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಆಗ್ರಹ

**ಬೆಂಗಳೂರು, ಏ.17:** ಹಿಂದುಳಿದ ವರ್ಗಗಳ ಆಯೋಗದ ವರದಿ ಸೋರಿಕೆ ಆಗಿರುವ ಬಗ್ಗೆ ಉನ್ನತ ಮಟ್ಟದ ತನಿಖೆ ನಡೆಸುವಂತೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ. ಸೋರಿಕೆಗೆ ನಿಮ್ಮ ಸರ್ಕಾರವೇ ಹೊಣೆ, ಈ ವರದಿಯನ್ನು ಸಂಪುಟದಲ್ಲಿ ಮಂಡಿಸಲೇಬಾರದು, ಮಂಡಿಸಿ ಅದರ ಪಾವಿತ್ರ್ಯತೆಯನ್ನು ಹಾಳು ಮಾಡಬೇಡಿ. ಆಯೋಗದಿಂದ ಸೋರಿಕೆಯಾಯಿತಾ ಅಥವಾ ಸಂಪುಟದಲ್ಲಿ ಸಚಿವರ ಕೈಸೇರಿದ ಮೇಲೆ ಸೋರಿಕೆಯಾಯಿತಾ ಅಥವಾ ನಿಮ್ಮ ಗ್ಯಾಂಗ್‌ನ ಕೈಚಳಕವಾ ಎಂದು ಪ್ರಶ್ನಿಸಿದ್ದಾರೆ.

ಈ ಸಂಬಂಧ ಟ್ವೀಟ್ ಮಾಡಿರುವ ಅವರು, ಸೋರಿಕೆ ಮಾಡಿ ನೆಮ್ಮದಿಯಾಗಿದ್ದ ರಾಜ್ಯಕ್ಕೆ ಬೆಂಕಿ ಹಾಕಿದ್ದೀರಿ, ಜಾತಿ–ಜಾತಿಗಳ ಮಧ್ಯೆ ವಿಷಬೀಜ ಬಿತ್ತಿದ್ದೀರಿ, ಸಿದ್ದರಾಮಯ್ಯನವರೇ ನಿಮ್ಮ ದುರುದ್ದೇಶ, ದುಷ್ಟತನದ ಪರಾಕಾಷ್ಠೆ ಇದು ಎಂದು ಕಿಡಿಕಾರಿದ್ದಾರೆ. ಮಾಹಿತಿ ಸೋರಿಕೆ ಆಗುತ್ತಿದ್ದಂತೆ ನೀವು ಉಲ್ಟಾ ಹೊಡೆದಿದ್ದೀರಿ,




ಅದು ಜಾತಿ ಸಮೀಕ್ಷೆ ಅಲ್ಲ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆ ಎಂದು ಹೊಸ ಪೀಪಿ ಊದುತ್ತಿದ್ದೀರಿ. ಹಾಗಾದರೆ, ಹಾದಿಬೀದಿಯಲ್ಲಿ ತೇಲಾಡುತ್ತಿರುವ, ಹೊರಳಾಡುತ್ತಿರುವ ಅಂಕಿ–ಸಂಖ್ಯೆಗಳು ಏನು, ಸೋರಿಕೆ ಆಗಿರುವ ದತ್ತಾಂಶ ಮತ್ತು ಸಿದ್ದರಾಮಯ್ಯ ಹೇಳಿದ ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆ ದತ್ತಾಂಶ ಎರಡು ಒಂದೆಯೇ ಅಥವಾ ಬೇರೆಯೇ ಎಂದು ಪ್ರಶ್ನಿಸಿದ್ದಾರೆ.

# ಜಾತಿಗಣತಿ ಸಮಸ್ಯೆ ಸಂಪುಟ ಸಭೆಯಲ್ಲಿ ಚರ್ಚಿಸಿ ಬಗೆಹರಿಸಿಕೊಂಡರೆ ಪರಿಹಾರ: ಎಂ.ಬಿ.ಪಾಟೀಲ್ ವಿಶ್ವಾಸ

**ಬೆಂಗಳೂರು, ಏ.17:** ಜಾತಿ ಜನಗಣತಿ ವಿಚಾರದಲ್ಲಿ ತಲೆದೋರಿರುವ ಸಮಸ್ಯೆಯನ್ನು ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ಬಗೆಹರಿಸಿಕೊಳ್ಳಬೇಕೆಂದಿದ್ದು, ಪರಿಹಾರ ಸಿಗಲಿದೆ ಎಂದು ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ವಿಶ್ವಾಸ ವ್ಯಕ್ತಪಡಿಸಿದರು. ವಿಧಾನಸೌಧದಲ್ಲಿ ಸುದ್ದಿಗಾರರಿಗೆ ಬುಧವಾರ ಪ್ರತಿಕ್ರಿಯಿಸಿದ ಅವರು, ಯಾವ ಲಿಂಗಾಯತ ಮುಖಂಡರು ಸಭೆ ಮಾಡುತ್ತಿಲ್ಲ. ಶಾಮನೂರು ಶಿವಶಂಕರಪ್ಪ ಯಾವ ಅರ್ಥದಲ್ಲಿ ಹೇಳಿದ್ದಾರೋ ಗೊತ್ತಿಲ್ಲ. ಎಲ್ಲವೂ ಪ್ರಾಥಮಿಕ ಹಂತದಲ್ಲಿದ್ದು, ಚರ್ಚೆಯಾಗದೆ ಯಾವುದೇ ನಿರ್ಣಯ ವಾಗುವುದಿಲ್ಲ ಎಂದರು.ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ಚರ್ಚಿಸಲು ಮುಕ್ತ ಮನಸ್ಸು ಹೊಂದಿದ್ದೇವೆ. ನಾನು, ಈಶ್ವರ ಖಂಡ್ರೆ ಹೀಗೆ ಅನೇಕ ಸಚಿವರಿದ್ದೇವೆ, ನಮ್ಮ ಆತಂಕವೇನು,



ಏನು ಮಾಡಿದರೂ ಒಳ್ಳೆಯದಾಗುತ್ತದೆ ಎಂಬುದನ್ನೂ ಹೇಳುತ್ತೇವೆ ಎಂದು ಎಂ.ಬಿ.ಪಾಟೀಲ ಹೇಳಿದರು. ಲಿಂಗಾಯತರಲ್ಲೂ ಅನೇಕ ಸಮಸ್ಯೆಗಳಿವೆ. ಇದಕ್ಕೆ ರಾಜ್ಯ ಸರ್ಕಾರ ಅಥವಾ ಕಾಂತರಾಜು ಎಂದು ಹೇಳುವುದಿಲ್ಲ. ಲಿಂಗಾಯತರ ಅನೇಕ ಉಪ ಪಂಗಡಗಳಿವೆ, ಮೀಸಲಾತಿ ಸಿಗುತ್ತದೆ ಎಂಬ ಕಾರಣಕ್ಕೆ ಬೇರೆ ಬೇರೆ ಉಪ ಪಂಗಡ ಬರೆಯಿಸಿದ್ದಾರೆ.ತಾಂತ್ರಿಕವಾದ ಈ ಸಮಸ್ಯೆ ಅಷ್ಟೇನೂ ಸರಳವಾಗಿಲ್ಲ. ಮೀಸಲಾತಿ ಬಿಡಿ ಎಂದು ಉಪ ಪಂಗಡಗಳಿಗೆ ಹೇಳಲಾಗುವುದಿಲ್ಲ, ಅದನ್ನು ಅವರು ಬಿಡುವುದೂ ಇಲ್ಲ. ಅವರ ಮಕ್ಕಳಿಗೆ ಮೀಸಲಾತಿ ಸಿಗುತ್ತದೆ ಎಂದು ಹೀಗೆ ಬರೆಯಿಸಿರಬಹುದು ಈ ಬಗ್ಗೆ ಟೀಕೆ–ಟಿಪ್ಪಣಿ ಮಾಡುವುದು ಸರಿಯಲ್ಲ ಎಂದರು.ಸಚಿವ ಸಂಪುಟ ಸಭೆಯಲ್ಲಿ ಶೇ.99ರಷ್ಟು ಸಮಸ್ಯೆ ಬಗೆಹರಿಯಲಿದೆ. ಬೇರೆ ಸಮುದಾಯದವರು ಅವರವರ ಸಭೆ ಮಾಡಿಕೊಳ್ಳುತ್ತಾರೆ. ನಾವು ಯಾರಿಗೋ ಸಮಸ್ಯೆಯಾಗಲಿ ಎಂದು ಮಾತನಾಡಲ್ಲ, ನಮಗೆ ಸಮಸ್ಯೆಯಾಗಿರುವುದನ್ನು ನಾವು ಹೇಳುತ್ತೇವೆ ಎಂದು ಸಚಿವ ಎಂ.ಬಿ.ಪಾಟೀಲ ಸಮಜಾಯಿಷಿ ನೀಡಿದರು.



**ಈಗಾಗಲೇ ಜಾತಿಗಣತಿ ವರದಿಯದ್ದು ಎನ್ನಲಾದ ಜಾತಿವಾರು ಜನಸಂಖ್ಯೆ ಅಂಕಿಅಂಶ ಸಾಮಾಜಿಕ ಜಾಲತಾಣದಲ್ಲಿ ಹರಿದಾಡಿದ್ದು, ಭಾರೀ ಪರ ಹಾಗೂ ವಿರೋಧಗಳು ವ್ಯಕ್ತವಾಗಿವೆ.ಅದರಲ್ಲೂ ಲಿಂಗಾಯತ ಹಾಗೂ ಒಕ್ಕಲಿಗ ಸಮದಾಯಗಳು ತಮ್ಮ ಸಮುದಾಯದ ಸಂಖ್ಯೆಯನ್ನು ಕಡಿಮೆ ತೋರಿಸಲಾಗಿದೆ ಎಂದು ಕಿಡಿಕಾರಿದ್ದಾರೆ. ಇನ್ನು, ಈ ವರದಿ ಬಳಿಕ ಅಂಕಿ ಅಂಶದಲ್ಲಿ ತಪ್ಪಿದ್ದರೆ ಅದನ್ನು ಸರಿಪಡಿಸಲು ಅವಕಾಶವಿದೆ, ಅಪ್ಡೇಟ್ ಮಾಡಬಹುದು ಎಂದು ಹಿಂದುಳಿದ ಆಯೋಗದ ಮಾಜಿ ಅಧ್ಯಕ್ಷ ಜಯಪ್ರಕಾಶ್ ಹೆಗ್ಡೆ ತಿಳಿಸಿದ್ದಾರೆ. ಅಲ್ಲದೇ ವರದಿಯಲ್ಲಿ ಲೋಪದೋಷಗಳಿರಬಹುದು, ಆದರೆ ನ್ಯೂನ್ಯತೆಗಳಂತೂ ಖಂಡಿತವಾಗಿಯೂ ಇಲ್ಲ ಎಂದರು.**

# ಶೈಲಜಾ ನಾಗ್–ಬಿ ಸುರೇಶ್ ದಂಪತಿಯ ಪುತ್ರಿ ಚಂದನಾ ನಾಗ್ ರಂಗಪ್ರವೇಶ

ನಟನೆ, ನಿರ್ಮಾಣ, ನಿರ್ದೇಶನ, ರಂಗಭೂಮಿ ಹೀಗೆ ಹಲವು ವಿಭಾಗಗಳಲ್ಲಿ ಗುರುತಿಸಿಕೊಂಡಿರುವ ಬಿ ಸುರೇಶ ಮತ್ತು ನಟಿ, ನಿರ್ಮಾಪಕಿ ಶೈಲಜಾ ನಾಗ್ ಅವರ ಪುತ್ರಿ ಚಂದನಾ ಎಸ್ ನಾಗ್ ಈಗ ಭರತನಾಟ್ಯ ರಂಗಪ್ರವೇಶ ಮಾಡಲಿದ್ದಾರೆ. ಸ್ನೇಹಾ ಕಪ್ಪಣ್ಣ ಅವರ ಭ್ರಮರಿ ನಾಟ್ಯಶಾಲೆಯಲ್ಲಿ ಕಲಿಯುತ್ತಿರುವ ಚಂದನಾ ಎಸ್. ನಾಗ್, ಇದೇ ಏಪ್ರಿಲ್ 20ರಂದು ಬೆಂಗಳೂರಿನ ಜೆಸಿ ರಸ್ತೆಯಲ್ಲಿನ ಎಡಿಎ ರಂಗಮಂದಿರದಲ್ಲಿ, ಸಂಜೆ 5:30ಕ್ಕೆ ರಂಗಪ್ರವೇಶ ಮಾಡಲಿದ್ದಾರೆ. ಈ ವಿಶೇಷ ಕಾರ್ಯಕ್ರಮಕ್ಕೆ ನೂಪುರ ಸ್ಕೂಲ್ ಆಫ್ ಭರತನಾಟ್ಯಂನ ನಿರ್ದೇಶಕಿ ಗುರು ಡಾ. ಲಲಿತಾ ಶ್ರೀನಿವಾಸನ್, ಪದ್ಮಶ್ರೀ ಶ್ರೀಮತಿ ಪ್ರತಿಭಾ ಪ್ರಹ್ಲಾದ್, ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯ ಅಧ್ಯಕ್ಷೆ ಗುರು ಶುಭಾ ಧನಂಜಯ್ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ.




**ಚಂದನಾ ಎಸ್ ನಾಗ್ ಕುರಿತು:**

ನಟಿಯಾಗಿ, ಬರಹಗಾರ್ತಿಯಾಗಿ, ನೃತ್ಯಗಾರ್ತಿಯಾಗಿ ನಿರ್ದೇಶಕಿಯಾಗಿಯೂ ಗುರುತಿಸಿಕೊಂಡಿರುವ ಚಂದನಾ, ಬೆಂಗಳೂರಿನ ಸೆಂಟ್ ಜೋಸೆಫ್ ಕಾಲೇಜಿನಲ್ಲಿ ವಿಷುಯಲ್ ಕಮ್ಯೂನಿಕೇಷನ್ ವಿಷಯದಲ್ಲಿ ಪದವಿಯನ್ನು ಪಡೆದಿದ್ದಾರೆ. ಅಜ್ಜಿಯಂದಿರಾದ ಕಮಲಾ ರಾಧಾಕೃಷ್ಣ ಮತ್ತು ವಿಜಯಾ ಅವರ ಮಾರ್ಗದರ್ಶನದಲ್ಲಿ ಬದುಕಿನ ಪಟ್ಟುಗಳನ್ನು ಕಲಿತ ಚಂದನಾ, ಅಪ್ಪ ಅಮ್ಮನಂತೆ ಸಿನಿಮಾ ಮತ್ತು ಕಿರುತೆರೆಯ ಆಳ ಅಗಲವನ್ನೂ ಅರಿತಿದ್ದಾರೆ. ಬೆಂಗಳೂರಿನ ಸಂಚಯ, ಸಮುದಾಯ ಮತ್ತು ಬೆಂಗಳೂರು ಪ್ಲೇಯರ್ಸ್ ಸೇರಿ ಹಲವು ರಂಗತಂಡಗಳಲ್ಲಿ ಸಕ್ರಿಯರಾಗಿ ಗುರುತಿಸಿಕೊಂಡಿದ್ದಾರೆ. 2024ರಲ್ಲಿ ನಾಟಕ ಬೆಂಗಳೂರು ಫೆಸ್ಟಿವಲ್‌ನಲ್ಲಿ ಚಂದನಾ ಬರೆದ "ಕಿಂಟ್ಸುಗಿ" ನಾಟಕವು ಅತ್ಯುತ್ತಮ ಮೂಲ ನಾಟಕ ಕೃತಿ ಎಂಬ ಪ್ರಶಸ್ತಿ ಪಡೆದಿದೆ. ಮೊದಲನೆಯ ಅಧ್ಯಾಯ, ಬ್ಲಡಿ ಡೊಮಿನೊ, ಸದ್ಗತಿ, ಅನ್‌ವಾಂಟೆಡ್ ಕಿಡ್, ಪಂಜರದ ಗಿಳಿ ಸೇರಿ ಇನ್ನೂ ಹಲವು ಕಿರುಚಿತ್ರಗಳಲ್ಲಿಯೂ ನಟಿಸಿದ ಅನುಭವ ಇದೆ. ಈ ಕಿರುಚಿತ್ರಗಳು ಹಲವು ಚಿತ್ರೋತ್ಸವಗಳಲ್ಲಿಯೂ ಪ್ರದರ್ಶನ ಕಂಡಿವೆ. 2021ರಲ್ಲಿ ಪ್ರಗುಣಿ ಶಾರ್ಟ್ ಫಿಲಂ ಫೆಸ್ಟಿವಲ್‌ನಲ್ಲಿ ಅತ್ಯುತ್ತಮ ನಟಿ ಪ್ರಶಸ್ತಿ ಸಹ ಪಡೆದಿದ್ದಾರೆ. ಯಜಮಾನ ಮತ್ತು ಕ್ರಾಂತಿ ಸಿನಿಮಾಗಳಲ್ಲಿ ನಿರ್ದೇಶನ ತಂಡದಲ್ಲಿ ಸಹಾಯಕಿ ಆಗಿಯೂ ಕೆಲಸ ಮಾಡಿದ್ದಾರೆ.

## ನಿಧನ ವಾರ್ತೆ

# ರಾಮಕೃಷ್ಣ ಹೋಟೆಲ್ ಮಾಲಿಕ ಸುಬ್ಬಯ್ಯ ವಿ.ಶೆಟ್ಟಿ ನಿಧನ



**ಮುಂಬಯಿ, (ಆರ್‌ಬಿಐ) ಏ.17:** ಬೃಹನ್ಮುಂಬಯಿ ಯಲ್ಲಿನ ಹಿರಿಯ ಹೋಟೇಲು ಉದ್ಯಮಿ, ರಾಮಕೃಷ್ಣ ಹೋಟೇಲು ಸಮೂಹದ ಮಾಲಿಕ, ರಾಮಕೃಷ್ಣ ರೆಸಾರ್ಟ್ಸ್ ಪ್ರೈವೇಟ್ ಲಿಮಿಟೆಡ್ ಇದರ ಕಾರ್ಯಾಧ್ಯಕ್ಷ ಸುಬ್ಬಯ್ಯ ವಿ.ಶೆಟ್ಟಿ (92.) ಇಂದಿಲ್ಲಿ ಬೆಳಿಗ್ಗೆ ತನ್ನ ಸ್ವನಿವಾಸ ಅಂಧೇರಿ ವರ್ಸೋವಾ ಜೆ.ಪಿ ರಸ್ತೆ ಅಲ್ಲಿನ ಗಂಗಾ ಭವನ ಸೊಸೈಟಿಯ ರಾಮಕೃಷ್ಣ ಬಂಗಲೆಯಲ್ಲಿ ವೃದ್ಧಾಪ್ಯ ಸಹಜತೆಯಿಂದ ನಿಧನರಾದರು.

ಅವಿಭಜಿತ ದಕ್ಷಿಣ ಕನ್ನಡ ಜಿಲ್ಲೆಯ ಉಡುಪಿ ಬೋಳ ಮೂಲತಃ ಮೃತರು ನಂದಳಿಕೆ ಶ್ರೀಮಾತಾ ನಿವಾಸಿಯಾಗಿದ್ದು ಸುಮಾರು ಆರು ದಶಕಗಳ ಹಿಂದೆ ಮಹಾನಗರದ ಮಸ್ಜಿದ್, ಸಯಾನ್‌ನಲ್ಲಿ ಉದ್ಯಮ ಆರಂಭಿಸಿ ಪ್ರಸ್ತುತ ಬೃಹನ್ಮುಂಬಯಿಯಲ್ಲಿನ ಹಿರಿಯ ಹೋಟೇಲು ಉದ್ಯಮಿಯಾಗಿ ಪ್ರಸಿದ್ಧಿ ಪಡೆದಿದ್ದರು.

ಸಾಮಾಜಿಕ, ಶೈಕ್ಷಣಿಕ ಮತ್ತು ಧಾರ್ಮಿಕ ಕಾಳಜಿ ಹೊಂದಿದ್ದ ಅವರು ಯುವ ಜನಾಂಗಕ್ಕೆ ಪ್ರೇರಕಶಕ್ತಿಯಾಗಿದ್ದರು. ತೀರಾ ಸರಳ ಸಜ್ಜನ, ಹಿತಮಿತ ಭಾಷಿಯಾಗಿ ತಮ್ಮ ಹಸನ್ಮುಖದಲ್ಲೇ ಪ್ರೇರಣೆಯನ್ನೀಡುತ್ತಾ ನೂರಾರು ಉದ್ಯಮಿಗಳ ಸೃಷ್ಟಿಕರ್ತನಾಗಿದ್ದರು. ಬಡಕುಟುಂಬದ ಅದೆಷ್ಟೋ ಹೆಣ್ಣುಮಕ್ಕಳ ಮದುವೆ, ಇನ್ನಿತರ ಕಾರ್ಯಗಳಿಗೆ, ಅಶಕ್ತ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಪ್ರಚಾರವಿಲ್ಲದೆ ತುಂಬುಹೃದಯದ ದೇಣಿಗೆ ನೀಡುತ್ತಾ ಕೊಡುಗೈದಾನಿಯಾಗಿ, ಧರ್ಮಶ್ರದ್ಧಾಳು ಎಂದೆಣಿಸಿದ್ದರು. ದಾರ್ಶನಿಕ ಮತ್ತು ಪ್ರವರ್ತಕರಾಗಿದ್ದ ಅವರ ಸೇವಾ ಕೊಡುಗೆ, ಜೀವನ ಮೌಲ್ಯಗಳು ಅನುಪಮವಾದುದು. ಇಹಲೋಕ ತ್ಯಜಿಸಿ ಸ್ವಸಮುದಾಯ ಮತ್ತು ಸಮಾಜದಲ್ಲಿ ತಮ್ಮ ಶಾಶ್ವತ ಪರಂಪರೆಯನ್ನು ಬಿಟ್ಟಿಹೋಗಿರುವ ಕರ್ಮಭೂಮಿ ಹೊರನಾಡ ಮಹಾರಾಷ್ಟ್ರದ ತುಳು ಕನ್ನಡಿಗರಲ್ಲಿನ ಹಳೇ ತಲೆಮಾರಿನ ಕೊನೆಯ ಕೊಂಡಿ ಎಂದೇ ಜನಜನಿತರಾಗಿರುವರು.

ಪತ್ನಿ, ಎರಡು ಗಂಡು, ಎರಡು ಹೆಣ್ಣು ಮಕ್ಕಳ ಸಹಿತ ಅಪಾರ ಬಂಧು ಬಳಗವನ್ನು ಅಗಲಿದ ಸುಬ್ಬಯ್ಯ ಶೆಟ್ಟಿ ಅವರ ಅಂತಿಮ ವಿಧಿವಿಧಾನಗಳು ಅಂಧೇರಿ ಪೂರ್ವದ ಚಕಲಾ ಸ್ಮಶಾನಭೂಮಿಯಲ್ಲಿ ಇಂದಿಲ್ಲಿ ನಡೆಯಿತು.

ನಿಧನಕ್ಕೆ ಅನೇಕ ಸಂಸ್ಥೆಗಳ ಪದಾಧಿಕಾರಿಗಳು ಮತ್ತು ಸದಸ್ಯರು, ನೂರಾರು ಗಣ್ಯರು ಸಂತಾಪ ಸೂಚಿಸಿ ಬಾಷ್ಪಾಂಜಲಿ ಅರ್ಪಿಸಿದ್ದಾರೆ. ಅವರ ಅಪಾರ ಸಂಖ್ಯೆಯ ಅಭಿಮಾನಿಗಳು, ಹಿತೈಷಿಗಳು, ವಿವಿಧ ಸಂಘಸಂಸ್ಥೆಗಳ ಮುಖ್ಯಸ್ಥರು ಅಂತಿಮ ದರ್ಶನ ಪಡೆದು ಶ್ರದ್ಧಾಂಜಲಿ ಸಮರ್ಪಿಸಿ ಕುಟುಂಬಕ್ಕೆ ಸಾಂತ್ವನ ನೀಡಿದರು.

# ದೀಕ್ಷಿತ್ ಶೆಟ್ಟಿ ಅಭಿನಯದ ಬ್ಯಾಂಕ್ of ಭಾಗ್ಯಲಕ್ಷ್ಮಿ ಚಿತ್ರದ ಮೊದಲ ಹಾಡು ಬಿಡುಗಡೆ

ರಂಗಿ ತರಂಗ, ಅವನೇ ಶ್ರೀಮನ್ನಾರಾಯಣ ದಂತಹ ಯಶಸ್ವಿ ಚಿತ್ರಗಳ ನಿರ್ಮಾಪಕ ಎಚ್.ಕೆ ಪ್ರಕಾಶ್ ನಿರ್ಮಾಣದ, ದಿಯಾ, ಬ್ಲಿಂಕ್ ಸೇರಿದಂತೆ ಯಶಸ್ವಿ ಸಿನಿಮಾಗಳ ಮೂಲಕ ಜನಪ್ರಿಯರಾಗಿರುವ ದೀಕ್ಷಿತ್ ಶೆಟ್ಟಿ ನಾಯಕರಾಗಿ ನಟಿಸಿರುವ ಹಾಗೂ ಅಭಿಷೇಕ್ ಎಂ ನಿರ್ದೇಶನದ ಬ್ಯಾಂಕ್ ಆಫ್ ಭಾಗ್ಯಲಕ್ಷ್ಮೀ ಚಿತ್ರದ ಮೊದಲ ಹಾಡು MRTಮ್ಯೂಸಿಕ್(ಲಹರಿ) ಮೂಲಕ ಬಿಡುಗಡೆಯಾಗಿದೆ. ಪ್ರೇಮ ಪೂಜ್ಯಂ, ಕೌಸಲ್ಯ ಸುಪ್ರಜಾ ರಾಮ ಖ್ಯಾತಿಯ ಬೃಂದಾ ಆಚಾರ್ಯ ಈ ಚಿತ್ರದ ನಾಯಕಿಯಾಗಿ ಅಭಿನಯಿಸಿದ್ದಾರೆ. ನಾಗಾರ್ಜುನ ಶರ್ಮ ಅವರು ಬರೆದಿರುವ ಹರ ಓಂ ಎಂಬ ಶಿವನ ಕುರಿತಾದ ಚಿತ್ರದ ಮೊದಲ ಹಾಡನ್ನು ಬಿಡುಗಡೆ ಮಾಡುವ ಮೂಲಕ ಚಿತ್ರತಂಡ ಪ್ರಚಾರಕ್ಕೆ ಚಾಲನೆ ನೀಡಿದೆ. ಕನ್ನಡ ಹಾಗೂ ತೆಲುಗು ಎರಡು ಭಾಷೆಗಳಲ್ಲಿ ಈ ಚಿತ್ರ ಮೂಡಿಬರುತ್ತಿದ್ದು, ಹಾಡು ಸಹ ಎರಡೂ ಭಾಷೆಗಳಲ್ಲಿ ಏಕಕಾಲಕ್ಕೆ ಬಿಡುಗಡೆಯಾಗಿದೆ. ಕನ್ನಡದಲ್ಲಿ ಶಿಲ್ಪ ಹಾಗೂ ತೆಲುಗಿನಲ್ಲಿ ಖ್ಯಾತ ಗಾಯಕಿ ಮಂಗ್ಲಿ ಹಾಡಿದ್ದಾರೆ. ಜ್ಯೂಡಾ ಸ್ಯಾಂಡಿ ಸಂಗೀತ ನೀಡಿದ್ದಾರೆ. ಉಷಾ ಭಂಡಾರಿ ಹಾಗೂ ದರ್ಶನ್ ನೃತ್ಯ ಸಂಯೋಜನೆ ಮಾಡಿದ್ದಾರೆ. ಲಹರಿ ವೇಲು ಅವರು ಈ ಹಾಡನ್ನು ಬಿಡುಗಡೆ ಮಾಡಿ ಚಿತ್ರತಂಡಕ್ಕೆ ಶುಭ ಹಾರೈಸಿದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.




ಸಿಂಪಲ್ ಸುನಿ ಅವರ ಜೊತೆಗೆ ಸಹ ನಿರ್ದೇಶಕನಾಗಿ ಕಾರ್ಯ ನಿರ್ವಸುತ್ತಿದ್ದ ನನಗೆ ಇದು ಮೊದಲ ನಿರ್ದೇಶನದ ಚಿತ್ರ. ನಾನು, ರಕ್ಷಿತ್ ಶೆಟ್ಟಿ ಹಾಗೂ ಸಚಿನ್ ಅವರು ಸೇರಿ ಪಿನಾಕ ಎಂಬ ಎಫ್.ಎಕ್ಸ್ ಸ್ಟುಡಿಯೋ ಸಹ ನಡೆಸುತ್ತಿದ್ದೇವೆ. ನಿರ್ಮಾಪಕ ಪ್ರಕಾಶ್ ಅವರು ಅವನ್ನೇ ಶ್ರೀಮನ್ನಾರಾಯಣ ಚಿತ್ರದ ಸಮಯದಿಂದಲೂ ಪರಿಚಯ. ಈ ಚಿತ್ರದ ಕಥೆ ಕೇಳಿದ ಅವರು ನಿರ್ಮಾಣಕ್ಕೆ ಮುಂದಾದರು. ಬ್ಯಾಂಕ್ ಆಫ್ ಭಾಗ್ಯಲಕ್ಷ್ಮೀ ಭಿನ್ನ ಕಥಾಹಂದರ ಹೊಂದಿರುವ ಚಿತ್ರ. ಈಗಾಗಲೇ ಚಿತ್ರದ ಚಿತ್ರೀಕರಣ ಮುಕ್ತಾಯವಾಗಿದ್ದು, ಇಂದು ಹರ ಓಂ ಎಂಬ ಚಿತ್ರದ ಮೊದಲ ಹಾಡನ್ನು ಬಿಡುಗಡೆ ಮಾಡಿದ್ದೇವೆ. ಜ್ಯೂಡಾ ಸ್ಯಾಂಡಿ ಸಂಗೀತ ನೀಡಿದ್ದಾರೆ. ಕನ್ನಡ ಹಾಗೂ ತೆಲುಗು ಭಾಷೆಗಳಲ್ಲಿ ಏಕಕಾಲಕ್ಕೆ ಹಾಡು ಬಿಡುಗಡೆಯಾಗಿದೆ. ಚಿತ್ರದ ಪ್ರೀ ಕ್ಲೈಮ್ಯಾಕ್ಸ್‌ನಲ್ಲಿ ಈ ಹಾಡು ಬರುತ್ತದೆ. ಚಿತ್ರದ ಕಥೆಗೆ ಹಾಗೂ ಈ ಹಾಡಿಗೂ ಸಂಬಂಧದೆ. ಈ ವರ್ಷದ ಮಧ್ಯದಲ್ಲಿ ಚಿತ್ರವನ್ನು ತೆರೆಗೆ ತರುವ ಸಿದ್ಧತೆ ನಡೆಯುತ್ತಿದೆ ಎಂದರು ನಿರ್ದೇಶಕ ಅಭಿಷೇಕ್.

ರಂಗಿತರಂಗ ಚಿತ್ರದಿಂದ ನಿರ್ಮಾಪಕನಾದೆ. ಇದು ನನ್ನ ನಿರ್ಮಾಣದ ಆರನೇ ಚಿತ್ರ. ರಂಗಿತರಂಗ ಚಿತ್ರದ ಹಾಡುಗಳು ಲಹರಿ ಸಂಸ್ಥೆಯಿಂದ ಬಿಡುಗಡೆಯಾಗಿತ್ತು. ಈ ಚಿತ್ರದ ಹಾಡುಗಳು ಸಹ ಲಹರಿ ಸಂಸ್ಥೆಯಿಂದಲೇ ಬಿಡುಗಡೆಯಾಗಿದೆ. ವೇಲು ಅವರು ಒಂದೊಳ್ಳೆ ಮೊತ್ತ ಸಹ ನೀಡಿದ್ದಾರೆ. ನಿರ್ದೇಶಕ ಅಭಿಷೇಕ್ ಉತ್ತಮ ಕಥೆ ಮಾಡಿಕೊಂಡಿದ್ದಾರೆ. ನಮ್ಮ ರಂಗಿತರಂಗ ಚಿತ್ರ ಹತ್ತು ವರ್ಷಗಳ ಂದೆ ಜುಲೈ ತಿಂಗಳಲ್ಲಿ ಬಿಡುಗಡೆಯಾಗಿತ್ತು. ಈ ಚಿತ್ರವನ್ನು ಸಹ ಜುಲೈನಲ್ಲೇ ಬಿಡುಗಡೆ ಮಾಡುತ್ತೇವೆ ಎಂದರು ನಿರ್ಮಾಪಕ ಪ್ರಕಾಶ್.

ಕಳೆದ ವರ್ಷ ಇದೇ ಸಮಯಕ್ಕೆ ನನ್ನ ಬ್ಲಿಂಕ್ ಚಿತ್ರ ಬಿಡುಗಡೆಯಾಗಿತ್ತು. ಒಂದು ವರ್ಷದ ನಂತರ ನಿಮ್ಮನೆಲ್ಲಾ ಭೇಟಿ ಮಾಡುತ್ತಿದ್ದೇನೆ. ಇನ್ನೂ, ಇಂದು ಬಿಡುಗಡೆಯಾಗಿರುವ ಈ ಚಿತ್ರದ ಹಾಡು ತುಂಬಾ ಚೆನ್ನಾಗಿದೆ. ಶೇಷವೆಂದರೆ ಈ ಹಾಡಿನಲ್ಲಿ ನನ್ನ ಗುರುಗಳು ಹಾಗೂ ನಾನು ಪಾಠ ಹೇಳಿ ಕೊಟ್ಟಿರುವ ಹುಡುಗರು ಅಭಿನಯಿಸಿದ್ದಾರೆ ಎಂದು ನಾಯಕ ದೀಕ್ಷಿತ್ ಶೆಟ್ಟಿ ತಿಳಿಸಿದರು.

ನನ್ನ ದಿನಚರಿ ಆರಂಭವಾಗುವುದೆ ಶಿವನಾಮ ಸ್ಮರಣೆಯಿಂದ. ನಮ್ಮ ಚಿತ್ರದ ಈ ಹಾಡನ್ನು ಕೇಳಿದ ಮೇಲಂತೂ ಎಷ್ಟು ಸಲ ಗುನುಗಿದ್ದೇನೊ ಲೆಕ್ಕಲ್ಲ. ಅಷ್ಟು ಅದ್ಭುತವಾಗಿದೆ ಹರ ಓಂ ಹಾಡು ಎಂದರು ನಾಯಕಿ ಬೃಂದಾ ಆಚಾರ್ಯ.

ಹಾಡು ಬರೆದಿರುವ ನಾಗಾರ್ಜುನ ಶರ್ಮ, ಛಾಯಾಗ್ರಾಹಕ ಅಭಿಷೇಕ್ ಕಾಸರಗೋಡು, ನಾಯಕನ ಸ್ನೇತರಾಗಿ ನಟಿಸಿರುವ ಶ್ರೀವತ್ಸ ಶ್ರೇಯಸ್ ಶರ್ಮ, ಅಶ್ವಿನ್, ನುತ್ ಹಾಗೂ ನೃತ್ಯ ಸಂಯೋಜನೆ ಮಾಡಿರುವ ಉಷಾ ಭಂಡಾರಿ ಮತ್ತು ದರ್ಶನ್ ಮುಂತಾದವರು ಹರ ಓಂ ಹಾಡಿನ ಕುರಿತು ಮಾತನಾಡಿದರು. ಉಷಾ ಭಂಡಾರಿ ಅವರು ಈ ಹಾಡಿನಲ್ಲಿ ಅಭಿನಯ ಕೂಡ ಮಾಡಿದ್ದಾರೆ

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಯಮುನಾ ಪುನಶ್ಚೇತನ ಕುರಿತು ಪ್ರಧಾನಿ ಮೋದಿ ನೇತೃತ್ವದಲ್ಲಿ ಉನ್ನತಮಟ್ಟದ ಸಭೆ



**ನವದೆಹಲಿ, ಏ.17:** ಯಮುನಾ ನದಿಯ ಪ್ರಸ್ತುತ ಸ್ಥಿತಿಯನ್ನು ನಿರ್ಣಯಿಸಲು ಮತ್ತು ಅದರ ಶುದ್ಧೀಕರಣ ಮತ್ತು ಪುನರುಜ್ಜೀವನಕ್ಕಾಗಿ ನಡೆಯುತ್ತಿರುವ ಮತ್ತು ಭವಿಷ್ಯದ ಯೋಜನೆಗಳ ಕುರಿತು ಚರ್ಚಿಸಲು ಪ್ರಧಾನಿ ನರೇಂದ್ರ ಮೋದಿ ಗುರುವಾರ 7, ಲೋಕ ಕಲ್ಯಾಣ್ ಮಾರ್ಗದಲ್ಲಿ ಸಮಗ್ರ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದರು.

ನದಿಯ ಮಾಲಿನ್ಯಕ್ಕೆ ಬಹಳ ಮುಖ್ಯವಾದ ಅಂಶಗಳಾದ ಚರಂಡಿ ಹರಿವು ಮತ್ತು ಒಳಚರಂಡಿ ಸ್ಥಾವರದ ಕಾರ್ಯಕ್ಷಮತೆಯನ್ನು ಪತ್ತೆಹಚ್ಚಲು ನೈಜ-ಸಮಯದ ದತ್ತಾಂಶ ಮತ್ತು ಬಾಹ್ಯಾಕಾಶ ತಂತ್ರಜ್ಞಾನವನ್ನು ಬಳಸಬೇಕೆಂದು ಅವರು ಕರೆ ನೀಡಿದರು.

ನದಿಯ ಬಗ್ಗೆ ಗೌರವವನ್ನು ಬೆಳೆಸಲು ಮತ್ತು ನದಿಯನ್ನು ನಾಗರಿಕರ ಜೀವನದ ಭಾಗವಾಗಿಸಲು 'ಜನ-ನದಿ ಸಂಪರ್ಕ'ವನ್ನು ರಚಿಸುವ ಅಗತ್ಯವನ್ನು ಒತ್ತಿ ಹೇಳಿದ ಪ್ರಧಾನಿ, ಛತ್ ಪೂಜಾ ಹಬ್ಬವನ್ನು ಆಚರಿಸುವಾಗ ದೆಹಲಿಯ ಜನರ ಅನುಭವವು ಸುಧಾರಿಸಬೇಕು ಎಂದು ಹೇಳಿದರು.

ದೆಹಲಿ ಪ್ರದೇಶದ ಜೊತೆಗೆ, ಬ್ರಿಜ್ ಸುತ್ತಮುತ್ತಲಿನ ಸಾಂಸ್ಕೃತಿಕವಾಗಿ ಶ್ರೀಮಂತ ಪ್ರದೇಶಕ್ಕೂ ವಿಶೇಷ ಗಮನ ನೀಡಬೇಕು, ಇದು ಬ್ರಜ್ ಯಾತ್ರೆಯನ್ನು ನದಿ-ಜನರ ಚಳುವಳಿಯ ಭಾಗವಾಗಿಸುತ್ತದೆ ಎಂದು ಅವರು ಹೇಳಿದರು.

ಚರಂಡಿಗಳಲ್ಲಿನ ಹರಿವನ್ನು ಅಳೆಯಲು ಮತ್ತು ಒಳಚರಂಡಿ ಸಂಸ್ಕರಣಾ ಘಟಕಗಳ ಕಾರ್ಯ ನಿರ್ವಹಣೆಯನ್ನು ಮೇಲ್ವಿಚಾರಣೆ ಮಾಡಲು ಸೂಕ್ಷ್ಮ ಮಟ್ಟದ ನೈಜ-ಸಮಯದ ಡೇಟಾವನ್ನು ಸಂಗ್ರಹಿಸಲು ಲಭ್ಯವಿರುವ ಅತ್ಯುತ್ತಮ ತಂತ್ರಜ್ಞಾನವನ್ನು ಬಳಸಿಕೊಳ್ಳಬೇಕು ಎಂದು ಮೋದಿ ಹೇಳಿದರು.

ಮಾಲಿನ್ಯ ತಗ್ಗಿಸುವ ಮೂಲ ಸೌಕರ್ಯಗಳ ಯೋಜನೆ ಮತ್ತು ಅನುಷ್ಠಾನವು ದತ್ತಾಂಶವನ್ನು ಆಧರಿಸಿರಬೇಕು ಮತ್ತು ಅಸ್ತಿತ್ವದಲ್ಲಿರುವ ಮೂಲಸೌಕರ್ಯಗಳು ಪರಿಣಾಮ ಕಾರಿಯಾಗಿ ಕಾರ್ಯನಿರ್ವಹಿಸುತ್ತಿವೆ ಎಂದು ಖಚಿತಪಡಿಸಿಕೊಳ್ಳಲು ಆಡಳಿತವನ್ನು ಸುಧಾರಿಸಲು ಅದೇ ಡೇಟಾವನ್ನು ಬಳಸಬೇಕು ಎಂದು ಅವರು ಹೇಳಿದರು. ಈ ಉದ್ದೇಶಕ್ಕಾಗಿ ಬಾಹ್ಯಾಕಾಶ ತಂತ್ರಜ್ಞಾನವನ್ನು ಬಳಸುವಂತೆಯೂ ಅವರು ಸಲಹೆ ನೀಡಿದರು.

ಈ ನಿಟ್ಟಿನಲ್ಲಿ ಜನ ಭಾಗೀದಾರಿ ಆಂದೋಲನದ ಅಗತ್ಯವನ್ನು ಪ್ರಧಾನಿ ಒತ್ತಿ ಹೇಳಿದರು, ನದಿ ಪುನರುಜ್ಜೀವನ ಮತ್ತು ನದಿಯ ಸುತ್ತಲಿನ ಸಾರ್ವಜನಿಕ ಕಾರ್ಯಕ್ರಮಗಳಿಗೆ ಸ್ವಯಂಸೇವಕರನ್ನು ಸೇರಿಸಿಕೊಂಡರು. ಕೇಂದ್ರ ಗೃಹ ಸಚಿವ ಅಮಿತ್ ಶಾ, ಕೇಂದ್ರ ಜಲಶಕ್ತಿ ಸಚಿವೆ, ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಮತ್ತು ಹಿರಿಯ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಕಾಶ್ಮೀರದ ಕುರಿತು ಪಾಕ್ ಸೇನಾ ಮುಖ್ಯಸ್ಥರ ಹೇಳಿಕೆಗೆ ಭಾರತ ತಿರುಗೇಟು

**ನವದೆಹಲಿ, ಏ.17:** ಕಾಶ್ಮೀರವು ಇಸ್ಲಾಮಾಬಾದ್‌ನ ಕುತ್ತಿಗೆಯ ರಕ್ತನಾಳ" ಎಂದು ಹೇಳಿಕೊಂಡ ಪಾಕಿಸ್ತಾನಿ ಸೇನಾ ಮುಖ್ಯಸ್ಥರ ಹೇಳಿಕೆಗೆ ಭಾರತ ಇಂದು ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ. ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ್ದು, ಪಾಕಿಸ್ತಾನದೊಂದಿಗಿನ ಕಾಶ್ಮೀರದ ಏಕೈಕ ಸಂಬಂಧವೆಂದರೆ ಆ ದೇಶವು ಅಕ್ರಮವಾಗಿ ಆಕ್ರಮಿಸಿಕೊಂಡಿರುವ ಪ್ರದೇಶಗಳನ್ನು ಖಾಲಿ ಮಾಡುವುದು ಎಂದು ಹೇಳಿದ್ದಾರೆ. ಜನರಲ್ ಮುನೀರ್ ಜಮ್ಮು ಮತ್ತು ಕಾಶ್ಮೀರವನ್ನು ಪಾಕಿಸ್ತಾನದ "ಕಂಠನಾಳ" ಎಂದು ಕರೆದಿದ್ದು, ಈ ಹೇಳಿಕೆಯನ್ನು ಅಸಮರ್ಪಕ, ಉದ್ದೇಶಪೂರ್ವಕ ಮತ್ತು ಭಯೋತ್ಪಾದನೆಯನ್ನು ಪ್ರಚೋದಿಸುವ ಪ್ರಯತ್ನ ಎಂದು ಹೇಳಿದೆ. ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರರು ಈ ಬಗ್ಗೆ ಮಾತನಾಡಿ, ಜನರಲ್ ಮುನೀರ್ ಅವರ ಹೇಳಿಕೆಯು ಪಾಕಿಸ್ತಾನದ ಹಳೆಯ, ದಿಕ್ಕುತಪ್ಪಿದ ಮತ್ತು ಭಯೋತ್ಪಾದನೆಗೆ ಬೆಂಬಲ ನೀಡುವ ಧೋರಣೆಯನ್ನು ಮತ್ತೊಮ್ಮೆ ತೋರಿಸುತ್ತದೆ ಎಂದು ಆರೋಪಿಸಿದ್ದಾರೆ. ಜಮ್ಮು ಮತ್ತು ಕಾಶ್ಮೀರವು ಭಾರತದ ಅವಿಭಾಜ್ಯ ಭಾಗವಾಗಿದೆ. ಇದರ ಬಗ್ಗೆ ಯಾವುದೇ ರಾಜಿ ಮಾಡಿಕೊಳ್ಳುವ ಪ್ರಶ್ನೆಯೇ ಇಲ್ಲ. ಪಾಕಿಸ್ತಾನದ ಈ ರೀತಿಯ ಉದ್ದೇಶಪೂರ್ವಕ ಹೇಳಿಕೆಗಳು ಈ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆಗೆ ಧಕ್ಕೆ ತರುತ್ತವೆ ಎಂದು ಹೇಳಿದರು.

ಪಾಕಿಸ್ತಾನದ ಸೇನಾ ಮುಖ್ಯಸ್ಥರ ಈ ಹೇಳಿಕೆಯು ಜಮ್ಮು ಮತ್ತು ಕಾಶ್ಮೀರದಲ್ಲಿ ಶಾಂತಿಯನ್ನು ಕದಡುವ ಉದ್ದೇಶವನ್ನು ಸ್ಪಷ್ಟವಾಗಿ ತೋರಿಸುತ್ತದೆ. ಇಂತಹ ಭಾಷೆಯು ಎರಡೂ ದೇಶಗಳ ನಡುವಿನ ಸಂಬಂಧವನ್ನು ಸುಧಾರಿಸಲು ಯಾವುದೇ ರೀತಿಯಲ್ಲಿ ಸಹಕಾರಿಯಾಗುವುದಿಲ್ಲ. ಬದಲಾಗಿ, ಇದು ಭಯೋತ್ಪಾದನೆಗೆ ಪ್ರಚೋದನೆ ನೀಡುವ ಕೃತ್ಯವಾಗಿದೆ ಎಂದು ತಿಳಿಸಿದರು. ಭಾರತವು ಜಮ್ಮು ಮತ್ತು ಕಾಶ್ಮೀರದಲ್ಲಿ ಶಾಂತಿಯನ್ನು ಕಾಪಾಡಲು ಮತ್ತು ತನ್ನ ಸಾರ್ವಭೌಮತೆಯನ್ನು ರಕ್ಷಿಸಲು ಎಲ್ಲ ಕ್ರಮಗಳನ್ನು ಕೈಗೊಳ್ಳುವುದಾಗಿ ಸ್ಪಷ್ಟಪಡಿಸಿದರು. ವಿದೇಶಿ ವಸ್ತುಗಳು ಹೇಗೆ ಕುತ್ತಿಗೆಯ ನಾಳದಲ್ಲಿರಲು ಸಾಧ್ಯ? ಇದು ಭಾರತದ ಕೇಂದ್ರಾಡಳಿತ ಪ್ರದೇಶ. ಪಾಕಿಸ್ತಾನ ದೊಂದಿಗಿನ ಕಾಶ್ಮೀರದ ಏಕೈಕ ಸಂಬಂಧವೆಂದರೆ ಆ ದೇಶವು ಅಕ್ರಮವಾಗಿ ಆಕ್ರಮಿಸಿಕೊಂಡಿರುವ ಪ್ರದೇಶಗಳನ್ನು ಬಿಟ್ಟುಕೊಡುವುದು ಎನ್ನುವ ಮೂಲಕ ಅಕ್ರಮವಾಗಿ ಆಕ್ರಮಿಸಿಕೊಂಡಿರುವ ಪ್ರದೇಶಗಳನ್ನು ಹಸ್ತಾಂತರಿಸುವಂತೆ ಪಾಕಿಸ್ತಾನಕ್ಕೆ ಭಾರತದ ವಿದೇಶಾಂಗ ಇಲಾಖೆ ವಕ್ತಾರರು ಒತ್ತಾಯಿಸಿದರು.

ಜನರಲ್ ಆಸಿಮ್ ಮುನೀರ್ ಈ ವಿವಾದಾತ್ಮಕ ಹೇಳಿಕೆಯನ್ನು ಪಾಕಿಸ್ತಾನದ ಒಂದು ಸಾರ್ವಜನಿಕ ಕಾರ್ಯಕ್ರಮದಲ್ಲಿ ನೀಡಿದ್ದರು, ವಿದೇಶದಲ್ಲಿರುವ ಪಾಕಿಸ್ತಾನಿಗಳನ್ನು ಉದ್ದೇಶಿಸಿ ಮಾತನಾಡಿದ್ದ ಅವರು, ಪಾಕಿಸ್ತಾನಿಯರು ಹಿಂದೂ ಮತ್ತು ಮುಸ್ಲಿಮರ ನಡುವಿನ ವ್ಯತ್ಯಾಸಗಳನ್ನು ತಮ್ಮ ಮಕ್ಕಳಿಗೆ ಹೇಳಿಕೊಡಬೇಕು. ಈ ವ್ಯತ್ಯಾಸವೇ ಪಾಕಿಸ್ತಾನ ರಚನೆ ಮೂಲ ಆಧಾರವಾಗಿದ್ದು, ಪಾಕಿಸ್ತಾನದ ಜನಕ ಮೊಹಮ್ಮದ್ ಅಲಿ ಜಿನ್ನಾ ಅವರ ದ್ವಿರಾಷ್ಟ್ರ ಸಿದ್ಧಾಂತದ ಮಹತ್ವವನ್ನು ನಾವು ಮುಂದಿನ ಪೀಳಿಗೆಗೆ ತಿಳಿಸಬೇಕು ಎಂದು ಹೇಳಿದ್ದರು.

ಪಾಕಿಸ್ತಾನದ ಜನನಕ್ಕೆ ಕಾರಣವಾದ ಎರಡು ರಾಷ್ಟ್ರಗಳ ಸಿದ್ಧಾಂತವನ್ನು ಸಮರ್ಥಿಸಿ ಕೊಳ್ಳುವಾಗ, ಜಮ್ಮು ಮತ್ತು ಕಾಶ್ಮೀರದ ಮೇಲಿನ ತನ್ನ ದೇಶದ ದೀರ್ಘಕಾಲದ ಹಕ್ಕನ್ನು ಪುನರುಚ್ಚರಿಸಿದ್ದರು. ನಮ್ಮ ನಿಲುವು ಸಂಪೂರ್ಣವಾಗಿ ಸ್ಪಷ್ಟವಾಗಿದೆ, ಕಾಶ್ಮೀರ ನಮ್ಮ ಕಂಠನಾಳವಾಗಿತ್ತು, ಅದು ನಮ್ಮ ಕಂಠನಾಳವಾಗಿರುತ್ತದೆ. ನಾವು ಅದನ್ನು ಮರೆಯುವುದಿಲ್ಲ. ನಮ್ಮ ಕಾಶ್ಮೀರಿ ಸಹೋದರರನ್ನು ಅವರ ವೀರೋಚಿತ ಹೋರಾಟದಲ್ಲಿ ಬಿಡುವುದಿಲ್ಲ ಎಂದು ಹೇಳಿದ್ದರು.

# ವಕ್ಫ್ ಮಂಡಳಿಗೆ ಸದಸ್ಯರ ನೇಮಕ ಬೇಡ: ಆಸ್ತಿಗಳ ವಿಚಾರದಲ್ಲೂ ಯಥಾಸ್ಥಿತಿ ಕಾಯ್ದುಕೊಳ್ಳಿ- ಕೇಂದ್ರ ಸರ್ಕಾರಕ್ಕೆ ಸುಪ್ರೀಂಕೋರ್ಟ್ ನಿರ್ದೇಶನ

**ನವದೆಹಲಿ, ಏ.17:** ವಕ್ಫ್ ತಿದ್ದುಪಡಿ ಕಾಯ್ದೆಗೆ ಪೂರ್ಣ ಪ್ರಮಾಣ ತಡೆ ನೀಡಲು ನಿರಾಕರಿಸಿರುವ ಸುಪ್ರೀಂಕೋರ್ಟ್ ಮುಂದಿನ ಆದೇಶದವರೆಗೂ ವಕ್ಫ್ ಮಂಡಳಿಗಳಿಗೆ ಮುಸ್ಲಿಂ, ಮುಸ್ಲಿಂಮೇತರ ಸದಸ್ಯರ ನೇಮಕ ಮಾಡದಂತೆ ಮತ್ತು ವಕ್ಫ್ ಆಸ್ತಿಗಳಲ್ಲಿ ಯಾವುದೇ ಬದಲಾವಣೆ ಮಾಡದಂತೆ ಕೇಂದ್ರ ಸರ್ಕಾರಕ್ಕೆ ನಿರ್ದೇಶನ ನೀಡಿದೆ.

ವಕ್ಫ್ (ತಿದ್ದುಪಡಿ) ಕಾಯ್ದೆಯ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸಿ ಸಲ್ಲಿಕೆಯಾಗಿರುವ ಅರ್ಜಿಗಳ ವಿಚಾರಣೆಯನ್ನು ಸುಪ್ರೀಂಕೋರ್ಟ್ ಇಂದು ಮುಂದುವರೆಸಿತು. ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ನೇತೃತ್ವದ ಮೂವರು ನ್ಯಾಯಮೂರ್ತಿಗಳ ಪೀಠವು ಈ ವಿಚಾರಣೆಯನ್ನು ನಡೆಸಿತು. ಕೇಂದ್ರ ಸರ್ಕಾರವು ತನ್ನ ಪ್ರತಿಕ್ರಿಯೆಯನ್ನು ಒಂದು ವಾರದೊಳಗೆ ಸಲ್ಲಿಸಬೇಕೆಂದು ಕೋರ್ಟ್ ಸೂಚಿಸಿದೆ. ಅರ್ಜಿದಾರರಿಗೆ ಕೇಂದ್ರದ ಪ್ರತಿಕ್ರಿಯೆಯನ್ನು ಪರಿಶೀಲಿಸಲು ಐದು ದಿನಗಳ ಕಾಲಾವಕಾಶ ನೀಡಲಾಗಿದೆ. ಮುಂದಿನ ವಿಚಾರಣೆಯನ್ನು ಮೇ 5ಕ್ಕೆ ನಿಗದಿಪಡಿಸಲಾಗಿದೆ.




ಸರ್ಕಾರದ ಪರವಾಗಿ ಹಾಜರಾದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ, ಕೇಂದ್ರ ಸರ್ಕಾರವು ಜನರಿಗೆ ಜವಾಬ್ದಾರವಾಗಿದೆ, ಕೆಲವು ಪ್ರಕರಣಗಳಲ್ಲಿ ಸಂಪೂರ್ಣ ಹಳ್ಳಿಗಳನ್ನು ವಕ್ಫ್ ಆಸ್ತಿ ಎಂದು ಹೇಳಲಾಗುತ್ತಿದೆ, ಹೆಚ್ಚಿನ ಜನರು ಈ ಬಗ್ಗೆ ಕಳವಳವನ್ನು ವ್ಯಕ್ತಪಡಿಸಿದ್ದಾರೆ ಲಕ್ಷಾಂತರ ಜನರ ಕಳವಳಕ್ಕೆ ಪ್ರತಿಕ್ರಿಯೆಯಾಗಿ ಈ ಶಾಸನವನ್ನು ತರಲಾಗಿದೆ.

ಒಂದರ ನಂತರ ಒಂದರಂತೆ ಲೆಕ್ಕವಿಲ್ಲದಷ್ಟು ಪ್ಲಾಟ್‌ಗಳನ್ನು ವಕ್ಫ್ ಎಂದು ಘೋಷಿಸಲಾಗುತ್ತಿದೆ ಈ ವಿಷಯವು ಗಮನಾರ್ಹ ಸಾರ್ವಜನಿಕ ಪರಿಣಾಮಗಳನ್ನು ಬೀರುತ್ತದೆ. ಹೀಗಾಗಿ ಈ ಬಗ್ಗೆ ಯಾವುದೇ ಮಧ್ಯಂತರ ನಿರ್ಧಾರಕ್ಕೆ ಕೋರ್ಟ್ ಬರಬಾರದು, ಕೋರ್ಟ್ ಆತುರದ ಮಧ್ಯಂತರ ಆದೇಶ ಹೊರಡಿಸಬಾರದು. ಮಧ್ಯಂತರ ತಡೆ ನೀಡುವುದು ಅತ್ಯಂತ ಕಠಿಣ ಹೆಜ್ಜೆಯಾಗಲಿದೆ, ಈ ವಿಷಯಕ್ಕೆ ಆಳವಾದ ಚರ್ಚೆಯ ಅಗತ್ಯವಿದೆ ಈ ವಿಚಾರವನ್ನು ಆತುರದಿಂದ ನಿರ್ಧರಿಸಲು ಸಾಧ್ಯವಿಲ್ಲ,

ಈ ಬಗ್ಗೆ ಹೆಚ್ಚಿನ ದಾಖಲೆ ಕೇಂದ್ರ ಸರಕಾರ ಸಲ್ಲಿಸಲಿದೆ, ಪ್ರಾಥಮಿಕ ಪ್ರತಿಕ್ರಿಯೆಯನ್ನು ಸಲ್ಲಿಸಲು ಒಂದು ವಾರದ ಸಮಯ ಬೇಕು ಎಂದು ಮನವಿ ಮಾಡಿದರು.

ವಾದ ಆಲಿಸಿದ ಪೀಠ, ಮುಂದಿನ ವಿಚಾರಣೆಯವರೆಗೆ ವಕ್ಫ್ ಮಂಡಳಿಗೆ ಮುಸ್ಲಿಂ ಅಥಾವ ಮುಸ್ಲಿಮೇತರರನ್ನು ನೇಮಕ ಮಾಡುವಂತಿಲ್ಲ ಮತ್ತು ವಕ್ಫ್ ಆಸ್ತಿ ವಿಚಾರದಲ್ಲಿ ಯಥಾಸ್ಥಿತಿ ಕಾಪಾಡಬೇಕು ಎಂದು ಹೇಳಿತು. ಸಿಂಧುತ್ವ ಪ್ರಶ್ನಿಸಿದ ಅರ್ಜಿಗಳಿಗೆ ಪ್ರತಿಕ್ರಿಯಿಸಲು ಕೇಂದ್ರ ಸರ್ಕಾರಕ್ಕೆ 7 ದಿನಗಳ ಕಾಲಾವಕಾಶ ನೀಡಿತು, ಅರ್ಜಿದಾರರು 5 ದಿನಗಳಲ್ಲಿ ಕೇಂದ್ರದ ಉತ್ತರಕ್ಕೆ ಮರು ಪ್ರತಿಕ್ರಿಯೆ ಸಲ್ಲಿಸಬಹುದು ಎಂದು ಹೇಳಿತು.

ಇದೇ ವೇಳೆ ಇಷ್ಟು ಅರ್ಜಿಗಳನ್ನು ನಿಭಾಯಿಸುವುದು ಅಸಾಧ್ಯ. ಕೇವಲ 5 ಅರ್ಜಿಗಳನ್ನು ಮಾತ್ರ ಆಲಿಸಲಾಗುವುದು. ಯಾವ ಐದು ಅರ್ಜಿಗಳನ್ನು ವಿಚಾರಣೆ ನಡೆಸಬೇಕು ಎಂಬುದನ್ನು ನೀವೇ ಆಯ್ಕೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಸುಪ್ರೀಂಕೋರ್ಟ್ ಮಧ್ಯಂತರ ಆದೇಶದ ಬಳಿಕ ಮುಂದಿನ ವಿಚಾರಣೆಯವರೆಗೆ 'ವಕ್ಫ್ ಬೈ ಡೀಡ್' ಮತ್ತು 'ಬಳಕೆದಾರರಿಂದ ವಕ್ಫ್' ಅನ್ನು ಡಿನೋಟಿಫೈ ಮಾಡುವುದಿಲ್ಲ ಎಂದು ಕೇಂದ್ರ ಸರ್ಕಾರ ಪರ ತುಷಾರ್ ಮೆಹ್ತಾ ಸುಪ್ರೀಂ ಕೋರ್ಟ್‌ಗೆ ಭರವಸೆ ನೀಡಿದರು.



ನವದೆಹಲಿಯಲ್ಲಿ ಗುರುವಾರ ದಾವೂದಿ ಬೊಹ್ರಾ ಸಮುದಾಯದ ನಿಯೋಗದೊಂದಿಗೆ ಪ್ರಧಾನಮಂತ್ರಿ ಸಭೆ ನಡೆಸಿದರು.

# ಭೂಕಬಳಿಕೆ ಪ್ರಕರಣ: 3ನೇ ದಿನವೂ ಇ.ಡಿ ಯಿಂದ ವಾದ್ರಾಗೆ ಗ್ರಿಲ್




**ನವದೆಹಲಿ, ಏ.17:** ಹರಿಯಾಣದಲ್ಲಿ ನಡೆದಿದೆ ಎನ್ನಲಾದ ಭೂಕಬಳಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಗುರುವಾರ ಸತತ ಮೂರನೇ ದಿನವೂ ಉದ್ಯಮಿ ರಾಬರ್ಟ್ ವಾದ್ರಾ ಜಾರಿ ನಿರ್ದೇಶನಾಲಯ (ಇಡಿ) ಮುಂದೆ ವಿಚಾರಣೆಗೆ ಹಾಜರಾದರು. ಅವರ ಪತ್ನಿ ಮತ್ತು ವಯನಾಡ್ ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ ಅವರೊಂದಿಗೆ ಇದ್ದರು. ಮಾಧ್ಯಮಗಳೊಂದಿಗೆ ಮಾತನಾಡಿದ ವಾದ್ರಾ, "ಇವು 2019 ರಲ್ಲಿ ನನಗೆ ಕೇಳಲಾದ ಪ್ರಶ್ನೆಗಳೇ, ಮತ್ತು ನಾನು ಈಗಾಗಲೇ ಎಲ್ಲಾ ಉತ್ತರಗಳನ್ನು ಒದಗಿಸಿದ್ದೇನೆ. ಇಲ್ಲಿ ಹೊಸದೇನೂ ಇಲ್ಲ." ಸರ್ಕಾರ ಕೇಂದ್ರ ಸಂಸ್ಥೆಗಳನ್ನು ದುರುಪಯೋಗಪಡಿಸಿಕೊಳ್ಳುತ್ತಿದೆ ಎಂದು ಆರೋಪಿಸಿದ ಅವರು, "ಸರ್ಕಾರವು ತನ್ನ ಅಭಿಯಾನಗಳನ್ನು ನಡೆಸುವುದು ಹೀಗೆ - ಏಜೆನ್ಸಿಗಳನ್ನು ದುರುಪಯೋಗಪಡಿಸಿಕೊಳ್ಳುವ ಮೂಲಕ. ಆದರೆ ಅದನ್ನು ಸಹಿಸಿಕೊಳ್ಳುವ ಶಕ್ತಿ ನಮಗಿದೆ ಮತ್ತು ನಾವು ಬಲವಾಗಿ ನಿಲ್ಲುತ್ತೇವೆ" ಎಂದು ಹೇಳಿದರು.

# ಸಿಎಂ ಸಿದ್ದರಾಮಯ್ಯ ನಿಮ್ಮ ಸಾಧನೆ ಏನು? ವಿಜಯೇಂದ್ರ ಪ್ರಶ್ನೆ

**ಬೆಂಗಳೂರು ಏ.17:** ಸಿದ್ದರಾಮಯ್ಯನವರೇ ನೀವು ಮುಖ್ಯಮಂತ್ರಿ ಸ್ಥಾನದಲ್ಲಿ ಬಡವರ, ದಲಿತರ, ರೈತರ ಕಣ್ಣೀರು ಒರೆಸಿದ್ದೀರಾ ಅಭಿವೃದ್ಧಿ ಕೆಲಸ ಮಾಡಿದ್ದೀರಾ? ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ, ಅವರು ಪ್ರಶ್ನಿಸಿದ್ದಾರೆ. ಇಲ್ಲಿ ಇಂದು ಜನಾಕ್ರೋಶ ಯಾತ್ರೆಯ ಸಂದರ್ಭದಲ್ಲಿ ಸರಕಾರದ ವಿರುದ್ಧ ಬಾರುಕೋಲು ಪ್ರದರ್ಶಿಸಿದ ಅವರು ಬಳಿಕ ಸಸಿಗೆ ನೀರೆರೆದರು. ನಂತರ ಸಾರ್ವಜನಿಕ ಸಭೆಯಲ್ಲಿ ಮಾತನಾಡಿದ ಅವರು, ಜನಾಕ್ರೋಶ ಯಾತ್ರೆಯ ಮೊದಲ ಹಂತ ಯಶಸ್ವಿಯಾಗಿ ಮುಗಿದಿದೆ ಎಂದು ಹೇಳಿದರು. ಮಾನ್ಯ ಸಿದ್ದರಾಮಯ್ಯನವರೇ, ನೀವು ಮುಖ್ಯಮಂತ್ರಿಗಳಾದ ಬಳಿಕ ರೈತರ ಆತ್ಮಹತ್ಯೆ ಹೆಚ್ಚಾಗಿದೆ. ಹಿಂದೂ ಹೆಣ್ಮಕ್ಕಳ ಮೇಲೆ ಅಪಮಾನ, ಲವ್ ಜಿಹಾದ್ ಹೆಚ್ಚಾಗಿದೆ. ಗೋಹತ್ಯೆಗಳು ಜಾಸ್ತಿ ಆಗಿದೆ. ಅದಕ್ಕಾಗಿ ಮುಂದಿನ ದಿನಗಳಲ್ಲಿ ಜನರು ನಿಮ್ಮನ್ನು ನೆನಪಿಸಿಕೊಳ್ಳಬೇಕೇ ಎಂದು ಕೇಳಿದರು.

ಹಿಂದೆ ಯಡಿಯೂರಪ್ಪನವರ ಬಿಜೆಪಿ ಸರಕಾರ ಇದ್ದಾಗ ರೈತರು ತಮ್ಮ ಹೊಲಕ್ಕೆ ಟ್ರಾನ್ಸ್‌ಫಾರ್ಮರ್ ಹಾಕಿಸಲು 25 ಸಾವಿರ ಕಟ್ಟಿದ್ದರೆ ಸಾಕಾಗಿತ್ತು. ಆದರೆ, ರೈತಪರ ಮೊಸಳೆ ಕಣ್ಣೀರು ಹಾಕುವ ಸಿದ್ದರಾಮಯ್ಯನವರ ಸರಕಾರದಲ್ಲಿ ಎರಡೂವರೆಯಿಂದ 3 ಲಕ್ಷ ರೂ. ಕಟ್ಟಬೇಕಿದೆ ಎಂದು ಟೀಕಿಸಿದರು.

ಹಿಂದೆ 5 ವರ್ಷ ನೀವು ಸಿಎಂ ಆಗಿದ್ದಾಗ



ಏನು ಸಾಧನೆ ಮಾಡಿದ್ದೀರಿ ಸಿದ್ದರಾಮಯ್ಯನವರೇ ಎಂದು ಕೇಳಿದರು. ಹಿಂದಿನ ಬಾರಿ ವೀರಶೈವ ಧರ್ಮ ಎಂದು ರಾಜ್ಯದಲ್ಲಿ ಬೆಂಕಿ ಹಚ್ಚುವ ಕೆಲಸ ಮಾಡಿದ್ದೀರಲ್ಲವೇ ಎಂದು ಆಕ್ಷೇಪಿಸಿದರು. ಅದಕ್ಕಾಗಿ ರಾಜ್ಯದ ಜನ ನಿಮ್ಮನ್ನು ನೆನಪಿಟ್ಟುಕೊಳ್ಳಬೇಕೇ ಎಂದರು.

ಮುಸಲ್ಮಾನರಿಗೆ ಸರಕಾರಿ ಕಾಮಗಾರಿಯಲ್ಲಿ ಶೇ 4ರಷ್ಟು ಮೀಸಲಾತಿ ಕೊಡುತ್ತಿದ್ದೀರಿ. ಯಾರಪ್ಪನ ದುಡ್ಡು ಸ್ವಾಮಿ ಎಂದು ಪ್ರಶ್ನೆಯನ್ನು ಮುಂದಿಟ್ಟರು. ಮುಸಲ್ಮಾನರ ಹೆಣ್ಮಕ್ಕಳಿಗೆ ಮದುವೆಗೆ 50 ಸಾವಿರ ಕೊಡುತ್ತಾರಂತೆ. ಹಿಂದೂಗಳಲ್ಲಿ ಬಡವರಿಲ್ಲವೇ? ಮುಸಲ್ಮಾನ ಯುವಜನರು ವಿದೇಶಕ್ಕೆ ಉನ್ನತ ಶಿಕ್ಷಣ ಪಡೆಯಲು ಹೋಗುವುದಾದರೆ 30 ಲಕ್ಷ ನೀಡುವುದಾಗಿ ಹೇಳಿದ್ದೀರಿ. ಹಿಂದೂಗಳಲ್ಲಿ ಬಡವರಿಲ್ಲವೇ ಹಾಗಿದ್ದರೆ ಎಂದು ಪ್ರಶ್ನಿಸಿದರು. ಹಿಂದೂಗಳಿಗೆ ಯಾತಕ್ಕೋಸ್ಕರ ಅಪಮಾನ ಮಾಡುತ್ತಿದ್ದೀರಿ ಎಂದು ಕೇಳಿದರು.

ರಾಜ್ಯದಲ್ಲಿ ಯಾವುದೇ ಲೋಕಸಭಾ, ವಿಧಾನಸಭಾ ಚುನಾವಣೆ ಇಲ್ಲ. ಆದರೂ, ನಾವು ಜನಾಕ್ರೋಶ ಯಾತ್ರೆ ಹಮ್ಮಿಕೊಂಡಿದ್ದೇವೆ. ಅಭಿವೃದ್ಧಿ ಕೆಲಸ, ಸರ್ವತೋಮುಖ ಅಭಿವೃದ್ಧಿಯ ಭರವಸೆ ನೀಡಿ ಕಾಂಗ್ರೆಸ್ಸಿನವರು ಅಧಿಕಾರಕ್ಕೆ ಬಂದವರು. ಆದರೆ, ಸಿದ್ದರಾಮಯ್ಯನವರ ನೇತೃತ್ವದ ಜನವಿರೋಧಿ, ರೈತ ವಿರೋಧಿ, ಹಿಂದೂ ವಿರೋಧಿ ಸರಕಾರ ಇದೆ. 50ಕ್ಕೂ ಜನೋಪಯೋಗಿ ವಸ್ತುಗಳ ಬೆಲೆ ಏರಿಸಿದ್ದಾರೆ ಎಂದು ಟೀಕಿಸಿದರು. ಪರಿಶಿಷ್ಟ ಜಾತಿ, ಜನಾಂಗದ 38 ಸಾವಿರ ಕೋಟಿ ಹಣವನ್ನು ದುರುಪಯೋಗ ಮಾಡಿಕೊಂಡಿದೆ. ಅಲ್ಪಸಂಖ್ಯಾತರ ತುಷ್ಟೀಕರಣ ಹೆಚ್ಚಾಗಿದೆ ಎಂದು ಆಕ್ಷೇಪಿಸಿದರು.

ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಜಗದೀಶ ಶೆಟ್ಟರ್, ಮಾಜಿ ಉಪಮುಖ್ಯಮಂತ್ರಿ ಮತ್ತು ಸಂಸದ ಗೋವಿಂದ ಕಾರಜೋಳ, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಸಂಸದ ಪಿ.ಸಿ. ಗದ್ದಿಗೌಡರ್, ಮಾಜಿ ಸಚಿವ ಬಿ. ಶ್ರೀರಾಮುಲು, ರಾಜ್ಯಸಭಾ ಸದಸ್ಯ ನಾರಾಯಣಸಾ ಕೆ. ಭಾಂಡಗೆ, ವಿಧಾನಪರಿಷತ್ ವಿಪಕ್ಷ ಮುಖ್ಯ ಸಚೇತಕ ಎನ್. ರವಿಕುಮಾರ್, ವಿಧಾನಪರಿಷತ್ ಸದಸ್ಯ ಹನುಮಂತ ನಿರಾಣಿ, ಪಿ.ಎಚ್.ಪೂಜಾರ, ಶಾಸಕ ಜಗದೀಶ್ ಗುಡಗಂಟಿ, ಮಾಜಿ ಶಾಸಕರಾದ ವೀರಣ್ಣ ಚರಂತಿಮಠ, ದೊಡ್ಡನಗೌಡ ಜಿ. ಪಾಟೀಲ್, ರೈತ ಮೋರ್ಚಾ ರಾಜ್ಯ ಅಧ್ಯಕ್ಷ ಮತ್ತು ಮಾಜಿ ಶಾಸಕ ಎ.ಹೆಚ್. ಪಾಟೀಲ್ ನಡಹಳ್ಳಿ, ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ. ರಾಜೀವ್, ಬಾಗಲಕೋಟೆ ಜಿಲ್ಲಾಧ್ಯಕ್ಷ ಶಾಂತಗೌಡ ಪಾಟೀಲ್, ರಾಜ್ಯ ಪದಾಧಿಕಾರಿಗಳು, ಜಿಲ್ಲಾ ಪದಾಧಿಕಾರಿಗಳು, ಮಂಡಲ ಅಧ್ಯಕ್ಷರು ಮತ್ತು ಪಕ್ಷದ ಮುಖಂಡರು ಉಪಸ್ಥಿತರಿದ್ದರು.

# 3ನೇ ದಿನಕ್ಕೆ ಲಾರಿ ಮುಷ್ಕರ: ಕ್ರಮದ ಸುಳಿವು ನೀಡಿದ ಸಚಿವ ರಾಮಲಿಂಗಾರೆಡ್ಡಿ

ಕಲಬುರಗಿ, ಏ 17: ರಾಜ್ಯದಲ್ಲಿ ಲಾರಿ ಮುಷ್ಕರ್ ಮೂರನೇ ದಿನಕ್ಕೆ ಕಾಲಿಟ್ಟಿದ್ದು, ಇನ್ನೊಂದು ದಿನ ನೋಡಿ ಕಟ್ಟುನಿಟ್ಟಿನ ಕ್ರಮ ಆರಂಭಿಸುವ ಸುಳಿವನ್ನು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ನೀಡಿದರು. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಷ್ಕರದ ಹಿಂದೆ ರಾಜಕೀಯ ಅಡಗಿದೆ. ಕೇಂದ್ರ ಸರ್ಕಾರವನ್ನು ದೂಷಿಸದ ಲಾರಿ ಮಾಲಿಕರು ರಾಜ್ಯ ಸರ್ಕಾರವನ್ನು ಮಾತ್ರ ದೂಷಿಸುತ್ತಿದ್ದಾರೆ ಎಂದರು. ಲಾರಿ ಮಾಲೀಕರೊಂದಿಗೆ ಈಗಾಗಲೇ ನಾವು ಮಾತುಕತೆ ನಡೆಸಿದ್ದೇವೆ. ರಾಜ್ಯದಲ್ಲಿ ಡೀಸೆಲ್ ಬೆಲೆ ಇಳಿಕೆ ಮತ್ತು ಟೋಲ್ ತೆಗೆಯಬೇಕು ಎಂಬುದು ಅವರ ಪ್ರಮುಖ ಬೇಡಿಕೆಯಾಗಿದೆ. ನಮ್ಮ ರಾಜ್ಯದಲ್ಲಿ ಮಾತ್ರ ಟೋಲ್ ತೆಗೆದರೆ ಸಾಕೇ? ಕೇಂದ್ರ ಸರ್ಕಾರವೂ ಟೋಲ್ ತೆರವು ಮಾಡಬೇಕಲ್ಲವೇ? ಎಂದು ಪ್ರಶ್ನಿಸಿದರು. ಕೇಂದ್ರವು ನಿರಂತರವಾಗಿ ಡೀಸೆಲ್ ಬೆಲೆಯನ್ನು ಹೆಚ್ಚಿಸುತ್ತಿದೆ.



ಆದರೆ ಆ ಸಮಯದಲ್ಲ ಲಾರಿ ಮಾಲೀಕರು ಯಾವುದೇ ಹೋರಾಟ ನಡೆಸಲಿಲ್ಲ, ಕೇಂದ್ರ ಸರ್ಕಾರ ಇಂಧನ ಬೆಲೆ ಏರಿಸಿದಾಗ ಸುಮ್ಮನಿದ್ದ ಲಾರಿ ಮಾಲೀಕರು ಈಗ ಮುಷ್ಕರ ನಡೆಸುತ್ತಿರುವುದಕ್ಕೆ ಕಾರಣವೇನು? ನೀವೇ ಯೋಚಿಸಿ ಎಂದು ಸಚಿವರು ಹೇಳಿದರು.

ಮುಷ್ಕರ ನಿರತ ಲಾರಿ ಮಾಲೀಕರ ಜೊತೆಗಿನ ಸಿಎಂ ಸಂಧಾನ ಮಾತುಕತೆ ವಿಫಲ:

ನಾಳೆಯಿಂದ ಪ್ರತಿಭಟನೆ ತೀವ್ರ ಲಾರಿ ಮುಷ್ಕರದಿಂದ ಹಾಲು, ದಿನಸಿ ಮತ್ತು ಔಷಧಿಗಳಂತಹ ದೈನಂದಿನ ಅಗತ್ಯ ವಸ್ತುಗಳ ಸಾಗಣೆಯ ಮೇಲೆ ಯಾವುದೇ ಪರಿಣಾಮ ಬೀರಿಲ್ಲ. ಇನ್ನೊಂದು ದಿನ ಕಳೆಯಲಿ, ಟ್ರಕ್ ಚಾಲಕರು ಮುಷ್ಕರವನ್ನು ಹಿಂತೆಗೆದುಕೊಳ್ಳುವ ವಿಶ್ವಾಸವಿದೆ ಎಂದು ಅವರು ಹೇಳಿದರು. ಈ ಮಧ್ಯೆ ಸಚಿವರು ಪ್ರಸ್ತಾಪಿಸಿದ ಎಲ್ಲಾ ಅಂಶಗಳನ್ನು ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಚರ್ಚಿಸಲಾಗಿದೆ. ನಮ್ಮ ಮುಷ್ಕರ ಮುಂದುವರಿದಿದೆ.

ನಾಳೆ ಏನಾದರೂ ಸರ್ಕಾರದಿಂದ ಪ್ರತಿಕ್ರಿಯೆ ಬರುವ ವಿಶ್ವಾಸದಲ್ಲಿದ್ದೇವೆ ಎಂದು ರಾಜ್ಯ ಲಾರಿ ಮಾಲೀಕರು ಮತ್ತು ಏಜೆಂಟರ ಸಂಘದ ಕಾರ್ಯದರ್ಶಿ ಸೋಮ ಸುಂದರಂ ಬಾಲನ್ ಹೇಳಿದ್ದಾರೆ.

# ನೀರಾವರಿ ತಜ್ಞ-ಕರ್ನಾಟಕ್ಕೆ ನ್ಯಾಯ ದೊರಕಿಸಿಕೊಟ್ಟ ಖ್ಯಾತ ಸುಪ್ರೀಂ ಕೋರ್ಟ್ ವಕೀಲ ಶರತ್ ಜವಳಿ ನಿಧನ



ಬೆಂಗಳೂರು, ಏ. 17: ಕಳೆದ ಆರು ದಶಕಗಳ ವರೆಗೆ ಅವಿಶ್ರಾಂತವಾಗಿ ಕಾನೂನು ಮತ್ತು ಶೈಕ್ಷಣಿಕ ಕ್ಷೇತ್ರದಲ್ಲಿ ಮಹತ್ತರ ಸೇವೆ ಸಲ್ಲಿಸಿದ ಖ್ಯಾತ ಸುಪ್ರೀಂ ಕೋರ್ಟ್ ನ್ಯಾಯವಾದಿ ಶರತ್ ಜವಳಿ ಅವರು ನಿಧನರಾದರು. ಕರ್ನಾಟಕವಂತೂ ಅವರ ಸೇವೆಯನ್ನು ಮರೆಯುವಂತಿಲ್ಲ. ಸುಪ್ರೀಂ ಕೋರ್ಟ್‌ನಲ್ಲಿ ಕರ್ನಾಟಕದ ಕೃಷ್ಣಾ ಮತ್ತು ಕಾವೇರಿ ಜಲವಿವಾದ ಕುರಿತು ಸಮರ್ಥವಾಗಿ ವಾದ ಮಂಡಿಸಿ ರಾಜ್ಯಕ್ಕೆ ನ್ಯಾಯ ದೊರಕಿಸಿದ ನೀರಾವರಿ ತಜ್ಞ ಮಹಾನುಭಾವರು ದಿವಂಗತ ಜವಳಿ ಅವರು.

ಬಾಂಬೆ ಕರ್ನಾಟಕವೆಂದು ಕರೆಯುವ ಉತ್ತರ ಕರ್ನಾಟಕದ ಧಾರವಾಡ ಕಾನೂನು ಪದವೀಧರರಾದ ಜವಳಿ ಅವರು, ಪ್ರಸಿದ್ಧ ಮತ್ತು ವಿದ್ಯಾವಂತ ಕೃಷಿ ಕುಟುಂಬದಿಂದ ಬಂದವರು. ಉತ್ತಮ ವಾಗ್ಮಿಯಾಗಿದ್ದರು. ಅವರ ತಾಯಿ, ಪಂಜಾಬ್‌ನ ರಾಜ್ಯಪಾಲರು ಮತ್ತು ಸ್ವತಂತ್ರ ಭಾರತದಲ್ಲಿ ಅಗ್ರಗಣ್ಯ ಶಿಕ್ಷಣ ತಜ್ಞರಾಗಿದ್ದ ಡಾ. ಡಿ.ಸಿ. ಪಾವಟೆ ಅವರ ಕುಟುಂಬದಿಂದ ಬಂದವರು. ಧಾರವಾಡದ ಕೆಇ ಮಂಡಳಿಯಲ್ಲಿ ಆರಂಭಿಕ ಶಾಲಾ ಶಿಕ್ಷಣದ ನಂತರ, ಜವಳಿ ಅಜ್ಮೀರ್‌ನ ಮೇಯೋ ಕಾಲೇಜಿನ ಬೋರ್ಡಿಂಗ್ ಶಾಲೆಯಲ್ಲಿ ಅಭ್ಯಾಸ ಮಾಡಿದವರು. ಮೇಯೋ ಪರಂಪರೆಯನ್ನು ಪಡೆದ ಅವರು, ಆಂಧ್ರಪ್ರ ದೇಶದ ರಾಜಾ ಪುಂಗನೂರ್ ಅವರ ಮಗಳು ಶಾಲಿನಿ ಅವರನ್ನು ವಿವಾಹವಾದರು. ದಂಪತಿಗೆ ಅಮೆರಿಕದಲ್ಲಿ ನೆಲೆಸಿರುವ ಅನುಪಮಾ ಎಂಬ ಮಗಳು ಮತ್ತು ದೆಹಲಿಯಲ್ಲಿ ಬ್ಯಾರಿಸ್ಟರ್ ಮತ್ತು ಅಭ್ಯಾಸ ಮಾಡಿರುವ ಖ್ಯಾತ ವಕೀಲರಾಗಿರುವ ಕಿರೀಟ್ ಜವಳಿ ಎಂಬ ಮಗನಿದ್ದಾರೆ. ದೂರದ ದಕ್ಷಿಣದ ಕರ್ನಾಟಕದ ವಕೀಲರಿಗೆ, 1980 ರ ಮೊದಲು ಸುಪ್ರೀಂ ಕೋರ್ಟ್‌ನಲ್ಲಿ ಪ್ರಾಕ್ಟೀಸ್ ಮಾಡಲು ನವದೆಹಲಿಗೆ ಯಾತ್ರೆ ಮಾಡುವುದು ಒಂದು ಸಾಹಸಮಯವಾಗಿತ್ತು. ಬೆಂಗಳೂರಿನಲ್ಲಿ ಒಂದು ಬಂಗಲೆಯನ್ನು ಹೊಂದಿರುವ ಹೊರತಾಗಿಯೂ, ಜವಳಿ ದೆಹಲಿಗೆ ತೆರಳಿದರು. ಕರ್ನಾಟಕದಿಂದ ಸುಪ್ರೀಂ ಕೋರ್ಟ್ ಬಾರ್‌ಗೆ ಬಂದ ಮೊದಲ ವ್ಯಕ್ತಿ ಜವಳಿಯವರಾಗಿದ್ದರು. ವಕೀಲಿ ವೃತ್ತಿಯಲ್ಲಿ ಗಣ್ಯ ವ್ಯಕ್ತಿಗಳು ಪ್ರಾಮುಖ್ಯತೆ ಪಡೆದಾಗ, ಜವಳಿ ಅವರು ಎಸ್.ವಿ. ಗುಪ್ತ (ಆಗ ಸಾಲಿಸಿಟರ್ ಜನರಲ್ ಮತ್ತು ನಂತರ ಭಾರತದ ಅಟಾರ್ನಿ ಜನರಲ್) ಅವರ ಕಚೇರಿಯಲ್ಲಿಯೂ ಕೆಲಸ ಮಾಡಿದರು. ಉತ್ತರ ಪ್ರದೇಶದ ಸ್ಪೀಕರ್ ಕೇಶವ್‌ಕುಮಾರ್ ಅಲಹಾಬಾದ್ ಹೈಕೋರ್ಟ್‌ನ ನ್ಯಾಯಾಧೀಶರನ್ನು ಸವಲತ್ತು ಉಲ್ಲಂಘನೆಗಾಗಿ ಸಮನ್ಸ್ ಜಾರಿ ಮಾಡಿದ ನಿರ್ಧಾರದ ವಿರುದ್ಧ ಐತಿಹಾಸಿಕ ರಾಷ್ಟ್ರಪತಿಗಳ ಉಲ್ಲೇಖದಿಂದ ಹಿಡಿದು ಸೂಕ್ಷ್ಮ ಸಾಂವಿಧಾನಿಕ ವಿಷಯಗಳಲ್ಲಿ ಮಾನ್ಯತೆ ಪಡೆಯಲು ಪ್ರಯತ್ನಿಸಿದವರು ಜವಳಿಯವರು.

# ಹೊಸ ಶಿಕ್ಷಣ ನೀತಿಗೆ ಮಹಾರಾಷ್ಟ್ರ ಸರ್ಕಾರ ಅನುಮೋದನೆ: ಹಿಂದಿ ಕಡ್ಡಾಯ

**ಮುಂಬೈ, ಏ. 17:** 2025–26ರ ಶೈಕ್ಷಣಿಕ ವರ್ಷದಿಂದ ಪ್ರಾರಂಭವಾಗುವ ರಾಷ್ಟ್ರೀಯ ಶಿಕ್ಷಣ ನೀತಿ (ಎನ್‌ಇಪಿ) 2020 ಅನ್ನು ಜಾರಿಗೆ ತರಲು ಮಹಾರಾಷ್ಟ್ರ ಸರ್ಕಾರ ವಿವರವಾದ ಯೋಜನೆಯನ್ನು ಪ್ರಕಟಿಸಿದೆ. ಈ ಯೋಜನೆಯ ಪ್ರಮುಖ ಅಂಶವೆಂದರೆ, ಮರಾಠಿ ಮತ್ತು ಇಂಗ್ಲಿಷ್ ಮಾಧ್ಯಮ ಶಾಲೆಗಳಲ್ಲಿ 1 ರಿಂದ 5ನೇ ತರಗತಿಯ ವಿದ್ಯಾರ್ಥಿಗಳಿಗೆ ಹಿಂದಿಯನ್ನು ಕಡ್ಡಾಯ ಮೂರನೇ ಭಾಷೆಯಾಗಿ ಪರಿಚಯಿಸಲಾಗುತ್ತಿದೆ.

ಎನ್‌ಇಪಿ 2020 ರ ಅಡಿಯಲ್ಲಿ ಹೊಸ ಪಠ್ಯಕ್ರಮವು ಹಂತ ಹಂತವಾಗಿ ವೇಳಾಪಟ್ಟಿಯನ್ನು ಜಾರಿ ಮಾಡಲಾಗುತ್ತದೆ. 2025–26 ಶೈಕ್ಷಣಿಕ ವರ್ಷದಲ್ಲಿ 1 ನೇ ತರಗತಿಯಿಂದ ಪ್ರಾರಂಭವಾಗಿ 2028–29 ರ ವೇಳೆಗೆ ಎಲ್ಲಾ ಶ್ರೇಣಿಗಳಿಗೆ ವಿಸ್ತರಿಸಲಾಗುತ್ತದೆ. ಭಾಷಾ ನೀತಿಯ ಭಾಗವಾಗಿ, ಆರಂಭಿಕ ದರ್ಜೆಯ ವಿದ್ಯಾರ್ಥಿಗಳಿಗೆ ಹಿಂದಿಯನ್ನು ಕಡ್ಡಾಯ ಮೂರನೇ ಭಾಷೆಯಾಗಿ ಪರಿಚಯಿಸಲಾಗುವುದು. ಈ ಪರಿವರ್ತನೆಯನ್ನು ಬೆಂಬಲಿಸಲು, ರಾಜ್ಯ ಸರ್ಕಾರವು 2025 ರ ವೇಳೆಗೆ 80%



ಶಿಕ್ಷಕರಿಗೆ ಹೊಸ ಶಿಕ್ಷಣ ವಿಧಾನಗಳು ಮತ್ತು ಡಿಜಿಟಲ್ ಪರಿಕರಗಳಲ್ಲಿ ತರಬೇತಿ ನೀಡಲು ಯೋಜಿಸಿದೆ. ಹೊಸ ನೀತಿಯಡಿಯಲ್ಲಿ, ಮಹಾರಾಷ್ಟ್ರವು 5+3+3+4 ಶೈಕ್ಷಣಿಕ ರಚನೆಯನ್ನು ಅಳವಡಿಸಿಕೊಳ್ಳಲಿದೆ, ಪಠ್ಯಕ್ರಮ ಅಭಿವೃದ್ಧಿಯನ್ನು ಎಸ್ಸಿಇಆರ್ಟಿ ಮತ್ತು ಬಾಲಭಾರತಿ ಸ್ಥಳೀಯವಾಗಿ ನಿರ್ವಹಿಸುತ್ತದೆ. ಎನ್‌ಇಪಿ 2020 ಹೊಸ ಪಠ್ಯಕ್ರಮದ ಅಡಿಯಲ್ಲಿ ಪರಿಚಯಿಸಿದ 5+3+3+4 ಶೈಕ್ಷಣಿಕ ರಚನೆಯು ಶಾಲಾ ಶಿಕ್ಷಣವನ್ನು ನಾಲ್ಕು ಹಂತಗಳಾಗಿ ವಿಂಗಡಿಸುತ್ತದೆ: ಮೂಲಭೂತ ಹಂತ, ಪೂರ್ವಸಿದ್ಧತಾ ಹಂತ, ಮಧ್ಯಮ ಹಂತ ಮತ್ತು ಮಾಧ್ಯಮಿಕ ಹಂತವಾಗಿ.ಈ ಹೊಸ ನೀತಿಯು ಹಿಂದಿನ 10+2+3 ವ್ಯವಸ್ಥೆಯನ್ನು 5+3+3+4 ಸ್ವರೂಪಕ್ಕೆ ಪುನರ್ರಚಿಸುತ್ತದೆ. ಇದು ಮೂಲಭೂತ ಹಂತದಿಂದ ಉನ್ನತ ಮಟ್ಟದವರೆಗೆ ಶಿಕ್ಷಣವನ್ನು ಒಳಗೊಂಡಿದೆ. ಈ ನೀತಿಯನ್ನು ರಾಜ್ಯದಲ್ಲಿ ಕ್ರಮೇಣ ಜಾರಿಗೆ ತರಲಾಗುತ್ತಿದೆ. ಇದು ಐದು ಸ್ತಂಭಗಳ ಮೇಲೆ ನಿರ್ಮಿಸಲಾಗಿದೆ: ಪ್ರವೇಶ, ಸಮಾನತೆ, ಗುಣಮಟ್ಟ, ಕೈಗೆಟುಕುವಿಕೆ ಮತ್ತು ಹೊಣೆಗಾರಿಕೆ. 2030 ರ ವೇಳೆಗೆ ಸಾಧಿಸಬೇಕಾದ ಸುಸ್ಥಿರ ಅಭಿವೃದ್ಧಿ ಗುರಿಗಳೊಂದಿಗೆ ಹೊಂದಿಕೆಯಾಗುತ್ತದೆ ಎಂದು ರಾಜ್ಯ ಶಿಕ್ಷಣ ಇಲಾಖೆಯ ಉಪ ಕಾರ್ಯದರ್ಶಿ ತುಷಾರ್ ಮಹಾಜನ್ ನೋಟಿಸ್‌ನಲ್ಲಿ ತಿಳಿಸಿದ್ದಾರೆ. ಶಾಲಾ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ರಾಜ್ಯ ಸ್ಟೀರಿಂಗ್ ಸಮಿತಿ ಸೇರಿದಂತೆ ಹಂತ ಹಂತದ ಅನುಷ್ಠಾನಕ್ಕಾಗಿ ಮಹಾರಾಷ್ಟ್ರ ಸರ್ಕಾರವು ಹಲವಾರು ಸಮಿತಿಗಳನ್ನು ರಚಿಸಿದೆ ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

# ಎಸ್ಪಿಯ ಪಿಡಿಎ ಅಭಿಯಾನ ರಾಜಕೀಯಕ್ಕಾಗಿ ದಲಿತರ ಶೋಷಣೆ: ಮಾಯಾವತಿ

**ಲಖನೌ, ಏ. 17:** ಬಹುಜನ ಸಮಾಜ ಪಕ್ಷದ ಮುಖ್ಯಸ್ಥೆ ಮಾಯಾವತಿ ಸಮಾಜವಾದಿ ಪಕ್ಷದ (ಎಸ್ಪಿ) ಪಿಡಿಎ ಅಭಿಯಾನದ ಮೇಲೆ ತೀವ್ರ ದಾಳಿ ನಡೆಸಿದ್ದು, ಪಕ್ಷವು ರಾಜಕೀಯ ಲಾಭಕ್ಕಾಗಿ ದಲಿತರನ್ನು ಶೋಷಿಸುತ್ತಿದೆ ಎಂದು ಆರೋಪಿಸಿದ್ದಾರೆ. ಗುರುವಾರ ಎಕ್ಸ್‌ನಲ್ಲಿ ಸರಣಿ ಪೋಸ್ಟ್‌ನಲ್ಲಿ, ಬಿಎಸ್ಪಿ ನಾಯಕಿ ಸಮಾಜವಾದಿ ಪಕ್ಷವು ಇತರ ಪಕ್ಷಗಳಂತೆ ದಲಿತರನ್ನು ರಾಜಕೀಯ ಸಾಧನಗಳಾಗಿ ಬಳಸಿಕೊಂಡು ಉದ್ವಿಗ್ನತೆ ಮತ್ತು ಹಿಂಸಾಚಾರವನ್ನು ಪ್ರಚೋದಿಸಲು ಪ್ರಯತ್ನಿಸುತ್ತಿದೆ ಎಂದು ಹೇಳಿದರು.

ಅವರು ಹಿಂದಿಯಲ್ಲಿ ಪೋಸ್ಟ್ ಮಾಡಿ ಅವರು, ಇತರ ಪಕ್ಷಗಳಂತೆ, ಎಸ್ಪಿ ಕೂಡ ಪಕ್ಷದ ಜನರನ್ನು, ವಿಶೇಷವಾಗಿ ದಲಿತರನ್ನು ಮುಂದಿಟ್ಟುಕೊಂಡು ಉದ್ವಿಗ್ನತೆ ಮತ್ತು ಹಿಂಸಾಚಾರದ ವಾತಾವರಣವನ್ನು ಸೃಷ್ಟಿಸುತ್ತಿದೆ ಮತ್ತು ಅದರ ವಿವಾದಾತ್ಮಕ ಹೇಳಿಕೆಗಳು, ಆರೋಪಗಳು ಮತ್ತು ಪ್ರತಿ–ಆರೋಪಗಳು ಮತ್ತು ಕಾರ್ಯಕ್ರಮಗಳು ಇತ್ಯಾದಿಗಳು ಅವರ ತೀವ್ರ ಸಂಕುಚಿತ ಸ್ವಾರ್ಥದ ರಾಜಕೀಯವೆಂದು ತೋರುತ್ತದೆ ಎಂದಿದ್ದಾರೆ. ಸಮಾಜವಾದಿಯ ರಾಜಕೀಯ ತಂತ್ರಗಳ ವಿರುದ್ಧ ದಲಿತರು, ಒಬಿಸಿಗಳು ಮತ್ತು ಮುಸ್ಲಿಮರನ್ನು ಅವರು ಎಚ್ಚರಿಸಿದರು, ಆ ಪಕ್ಷವು ದಲಿತ ಮತಗಳನ್ನು ಪಡೆಯಲು ಯಾವುದೇ ಮಟ್ಟಕ್ಕೆ ಹೋಗಬಹುದು ಎಂದು ಹೇಳಿದರು. ದಲಿತ ಮತಗಳನ್ನು ಪಡೆಯಲು ಎಸ್ಪಿ ಯಾವುದೇ ಹಂತಕ್ಕೂ ಹೋಗಬಹುದು. ಆದ್ದರಿಂದ, ದಲಿತರು, ಇತರ ಹಿಂದುಳಿದ ವರ್ಗಗಳು ಮತ್ತು ಮುಸ್ಲಿಂ ಸಮುದಾಯವು ಅವರ ಆಕ್ರಮಣಕಾರಿ ಪ್ರಚೋದನೆಗಳಿಂದ ಪ್ರಭಾವಿತರಾಗಬಾರದು ಮತ್ತು ಈ ಪಕ್ಷದ ರಾಜಕೀಯ ತಂತ್ರಗಳಿಗೆ ಬಲಿಯಾಗಬಾರದು ಎಂದು ಅವರು ಬರೆದಿದ್ದಾರೆ. ಸಮಾಜವಾದಿ ಪಕ್ಷವು ಇತರರ ಇತಿಹಾಸದ ಬಗ್ಗೆ ಕಾಮೆಂಟ್ ಮಾಡುವುದನ್ನು ನಿಲ್ಲಿಸಬೇಕು ಎಂದು ಬಿಎಸ್ಪಿ ಮುಖ್ಯಸ್ಥೆ ಹೇಳಿದರು. ಅದು ಇತರರ ಇತಿಹಾಸದ ಬಗ್ಗೆ ಕಾಮೆಂಟ್ ಮಾಡುವ ಬದಲು, ಅಂತಹ ಪಕ್ಷಗಳೊಂದಿಗೆ ಸಂಬಂಧ ಹೊಂದಿರುವ ಅವಕಾಶವಾದಿ ದಲಿತರು ತಮ್ಮ ಸಮಾಜದ ಸಂತರು, ಗುರುಗಳು ಮತ್ತು ಮಹಾನ್ ಪುರುಷರ ಒಳ್ಳೆಯತನ ಮತ್ತು ಹೋರಾಟಗಳ ಬಗ್ಗೆ ಹೇಳಿದರೆ ಉತ್ತಮ, ಏಕೆಂದರೆ ಈ ಜನರು ಏನನ್ನಾದರೂ ಪಡೆಯಲು ಅರ್ಹರಾಗಿದ್ದಾರೆ ಎಂದು ಸಲಹೆ ನೀಡಿದ್ದಾರೆ.

ಉತ್ತರಪ್ರದೇಶದ ನಾಲ್ಕು ಬಾರಿಯ ಮಾಜಿ ಮುಖ್ಯಮಂತ್ರಿಯಾಗಿರುವ ಅವರು, ಅಖಿಲೇಶ್ ಯಾದವ್ ಅವರ ಪಕ್ಷದ ಮೇಲೆ ದಾಳಿ ಮಾಡಿದ್ದಾರೆ. ರಾಜ್ಯದಲ್ಲಿ ಹಿಂದುಳಿದ ವರ್ಗಗಳು, ದಲಿತರು ಮತ್ತು ಅಲ್ಪಸಂಖ್ಯಾತರಲ್ಲಿ ಬೆಂಬಲವನ್ನು ಕ್ರೋಢೀಕರಿಸಲು ಎಸ್ಪಿ ಮಾಡಿದ ಪ್ರಯತ್ನಗಳ ನಂತರ ಅವರು ಈ ದಾಳಿಯನ್ನು ಮಾಡಿದ್ದಾರೆ. ಇತ್ತೀಚಿನ ಪಿಡಿಎ ಅಭಿಯಾನದ ನೆಪದಲ್ಲಿ, ಎಸ್ಪಿ ರಾಜ್ಯದಲ್ಲಿ ತನ್ನ ಸ್ಥಾನವನ್ನು ಗಟ್ಟಿಗೊಳಿಸಲು ಮತ್ತು ಬಿಜೆಪಿಯನ್ನು ಎದುರಿಸಲು ಈ ಗುಂಪುಗಳ ಮೇಲೆ ಕೇಂದ್ರೀಕರಿಸಿದೆ. ಅಂಬೇಡ್ಕರ್ ಅವರ ಜನ್ಮ ದಿನಾಚರಣೆಯ ಸಂದರ್ಭದಲ್ಲಿ ಸಮಾಜವಾದಿ ಪಕ್ಷದ ಮುಖ್ಯಸ್ಥರು ಮಾಡಿದ ದೀರ್ಘ ಪೋಸ್ಟ್‌ನಲ್ಲಿ ಇದು ಸ್ಪಷ್ಟವಾಗಿದೆ. ಪಿಡಿಎ (ಪಿಚ್ಡಾ, ದಲಿತ, ಅಲ್ಪಸಂಖ್ಯಾಕ್ ಅಥವಾ ಹಿಂದುಳಿದವರು) ಒಗ್ಗಟ್ಟು ಮಾತ್ರ ಸಂವಿಧಾನ ಮತ್ತು ಮೀಸಲಾತಿಯನ್ನು ಉಳಿಸಬಹುದು ಎಂದು ಅಖಿಲೇಶ್ ಯಾದವ್ ಹೇಳಿದ್ದಾರೆ ಎಂದು ಮಾಯಾವತಿ ಗುಡುಗಿದರು.

ಅಖಿಲೇಶ್ ಅವರು ಹಿಂದಿಯಲ್ಲಿ ನಮ್ಮ ಸ್ವಾಭಿಮಾನದ ಪ್ರಜ್ಞೆಯನ್ನು ಬಲಪಡಿಸೋಣ ಮತ್ತು ಸಾಮಾಜಿಕ ನ್ಯಾಯದ ನಿಯಮವನ್ನು ಸ್ಥಾಪಿಸಲು ಒಂದಾಗೋಣ ಮತ್ತು ಬಾಬಾ ಸಾಹೇಬ್ ಅವರ ಕೊಡುಗೆ ಮತ್ತು ಪರಂಪರೆ ಸಂವಿಧಾನ ಮತ್ತು ಮೀಸಲಾತಿಯನ್ನು ಉಳಿಸಲು ಪಿಡಿಎಯ ಚಳುವಳಿಗೆ ಹೊಸ ಶಕ್ತಿಯನ್ನು ನೀಡೋಣ ಮತ್ತು ಸಂವಿಧಾನಕ್ಕೆ ಜೀವ ನೀಡುವವನು ಮತ್ತು ಸಂವಿಧಾನವು ನಮಗೆ ಗುರಾಣಿ ಎಂದು ಪುನರುಚ್ಚರಿಸೋಣ ಮತ್ತು ಸಂವಿಧಾನವು ಸುರಕ್ಷಿತವಾಗಿರುವಂತೆ, ನಮ್ಮ ಗೌರವ, ಗೌರವ, ಸ್ವಾಭಿಮಾನ ಮತ್ತು ಹಕ್ಕುಗಳು ಸುರಕ್ಷಿತವಾಗಿ ಉಳಿಯುತ್ತವೆ ಎಂದು ಬರೆದಿದ್ದಾರೆ.



ಸ್ವಾಭಿಮಾನದ ಅಡಿಯಲ್ಲಿ, ನಮ್ಮ ಸ್ವಯಂ ಏಕತೆಯ ಮೌಲ್ಯವನ್ನು ನಮ್ಮ ಸೌಹಾರ್ದಯುತ, ಸಮಾಜವಾದಿ, ಜಾತ್ಯತೀತ, ಪ್ರಜಾಪ್ರಭುತ್ವ ಮಾನದಂಡಗಳು ಮತ್ತು ಮೌಲ್ಯಗಳೊಂದಿಗೆ ಮತ್ತು ಪಿಡಿಎ ರೂಪದಲ್ಲಿ ಈ ಏಕತೆಯ ಪರಿವರ್ತನೆ ಶಕ್ತಿಯನ್ನು ನಾವು ಅರ್ಥಮಾಡಿಕೊಂಡಿದ್ದೇವೆ. ಸ್ವಾಭಿಮಾನದ ಮೂಲಕ ಮಾತ್ರ ಪಿಡಿಎ ಸಮಾಜದ ಜನರು ತಮ್ಮ ನಿರ್ಣಾಯಕ ಶಕ್ತಿಯನ್ನು ಪಡೆಯಲು ಮತ್ತು ದಬ್ಬಾಳಿಕೆ ಮತ್ತು ಶೋಷಣೆಯಿಂದ ಮುಕ್ತರಾಗಲು ಮತ್ತು ಸ್ವಾಭಿಮಾನದಿಂದ ಬದುಕುವ ಹಕ್ಕನ್ನು ಪಡೆಯಲು ಮತ್ತು ಸಂವಿಧಾನ ವಿರೋಧಿ ಶಕ್ತಿಗಳಿಗೆ ಸಾಂವಿಧಾನಿಕ ಉತ್ತರವನ್ನು ನೀಡಲು ಸಾಧ್ಯವಾಗುತ್ತದೆ. ಕಆಂಯ ಏಕತೆ ಮಾತ್ರ ಸಂವಿಧಾನ ಮತ್ತು ಮೀಸಲಾತಿಯನ್ನು ಉಳಿಸುತ್ತದೆ, ಪಿಡಿಎಯ ಏಕತೆ ಮಾತ್ರ ಸುವರ್ಣ ಭವಿಷ್ಯವನ್ನು ಸೃಷ್ಟಿಸುತ್ತದೆ. ನಮ್ಮ ಸ್ವಾಭಿಮಾನ ಮತ್ತು ಸ್ವಾಭಿಮಾನದ ಈ ಹೋರಾಟವನ್ನು ಆಚರಣೆಯನ್ನಾಗಿ ಪರಿವರ್ತಿಸೋಣ ಎಂದು ಎಸ್ಪಿ ಮುಖ್ಯಸ್ಥರು ತಮ್ಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

# ಔರಂಗಜೇಬ್ ಸಮಾಧಿ ರಕ್ಷಣೆ ಕೋರಿ ವಿಶ್ವಸಂಸ್ಥೆಗೆ ಮೊಘಲ್ ವಂಶಸ್ಥರ ಪತ್ರ

**ಹೈದರಾಬಾದ್, ಏ. 17:** ಕೊನೆಯ ಮೊಘಲ್ ಚಕ್ರವರ್ತಿ ಬಹದ್ದೂರ್ ಷಾ ಜಾಫರ್ ಅವರ ವಂಶಸ್ಥರು ಎಂದು ಹೇಳಿಕೊಳ್ಳುವ ಯಾಕೂಬ್ ಹಬೀಬುದ್ದೀನ್ ಟ್ಯೂಸಿ, ಶಂಭಾಜಿ ನಗರದಲ್ಲಿರುವ ಔರಂಗಜೇಬನ ಸಮಾಧಿಯ ರಕ್ಷಣೆಯನ್ನು ಖಚಿತಪಡಿಸಿಕೊಳ್ಳುವಂತೆ ಕೋರಿ ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಅವರಿಗೆ ಪತ್ರ ಬರೆದಿದ್ದಾರೆ.

ಮಹಾರಾಷ್ಟ್ರದ ಛತ್ರಪತಿ ಸಂಭಾಜಿನಗರ ಜಿಲ್ಲೆಯ (ಈ ಹಿಂದಿನ ಔರಂಗಾಬಾದ್ ಜಿಲ್ಲೆ) ಕುಲದಾಬಾದ್‌ನಲ್ಲಿರುವ ಔರಂಗಜೇಬನ ಸಮಾಧಿಯನ್ನು ತೆಗೆದುಹಾಕುವಂತೆ ಒತ್ತಾಯಿಸಿ ನಡೆದ ರ್ಯಾಲಿಯ ಸಂದರ್ಭದಲ್ಲಿ ನಾಗ್ಪುರದಲ್ಲಿ ಹಿಂಸಾಚಾರ ಭುಗಿಲೆದ್ದ ಸುಮಾರು ಒಂದು ತಿಂಗಳ ನಂತರ ಈ ಬೇಡಿಕೆ ಬಂದಿದೆ.

ಮೊಘಲ್ ಚಕ್ರವರ್ತಿಯ ಸಮಾಧಿ ಇರುವ ವಕ್ಫ್ ಆಸ್ತಿಯ ಮುತವಲ್ಲಿ (ಮೇಲ್ವಿಚಾರಕ) ಎಂದು ಹೇಳಿಕೊಳ್ಳುವ ರಾಜಕುಮಾರ ಯಾಕೂಬ್, ಸಮಾಧಿಯನ್ನು ರಾಷ್ಟ್ರೀಯ ಮಹತ್ವದ ಸ್ಮಾರಕ ಎಂದು ಘೋಷಿಸಲಾಗಿದೆ ಮತ್ತು ಪ್ರಾಚೀನ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳು ಮತ್ತು ಅವಶೇಷಗಳ ಕಾಯ್ದೆ 1958ರ ಅಡಿಯಲ್ಲಿ ರಕ್ಷಿಸಲಾಗಿದೆ ಎಂದು ಹೇಳುತ್ತಾರೆ.

ಈ ಕಾಯ್ದೆಯ ನಿಬಂಧನೆಗಳ ಪ್ರಕಾರ, ಸಂರಕ್ಷಿತ ಸ್ಮಾರಕದಲ್ಲಿ ಅಥವಾ ಅದರ ಬಳಿ ಯಾವುದೇ ಅನಧಿಕೃತ ನಿರ್ಮಾಣ, ಬದಲಾವಣೆ, ನಾಶ ಅಥವಾ ಉತ್ಖನನವನ್ನು ಕೈಗೊಳ್ಳಲಾಗುವುದಿಲ್ಲ ಮತ್ತು ಅಂತಹ ಯಾವುದೇ ಚಟುವಟಿಕೆಯನ್ನು ಕಾನೂನುಬಾಹಿರ ಮತ್ತು ಕಾನೂನಿನಡಿಯಲ್ಲಿ ಶಿಕ್ಷಾರ್ಹವೆಂದು ಪರಿಗಣಿಸಲಾಗುತ್ತದೆ ಎಂದು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿಗೆ ಬರೆದ ಪತ್ರದಲ್ಲಿ ಹೇಳಲಾಗಿದೆ. ಸಮಾಧಿಯ ಸ್ಥಿತಿಯನ್ನು ಅವರು ಖಂಡಿಸಿದರು ಮತ್ತು ಅದನ್ನು ರಕ್ಷಿಸಲು ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಬೇಕು ಎಂದು ಹೇಳಿದರು.


ಚಲನಚಿತ್ರಗಳಲ್ಲಿ, ಮಾಧ್ಯಮಗಳಲ್ಲಿ ಮತ್ತು ಸಾಮಾಜಿಕ ವೇದಿಕೆಗಳ ಮೂಲಕ ಐತಿಹಾಸಿಕ ಸಂಗತಿಗಳನ್ನು ತಪ್ಪಾಗಿ ನಿರೂಪಿಸುವುದರಿಂದ ಸಾರ್ವಜನಿಕ ಭಾವನೆಗಳನ್ನು ಕೆರಳಿಸಲು ಸಾಧ್ಯವಾಯಿತು, ಇದರ ಪರಿಣಾಮವಾಗಿ ಅನಗತ್ಯ ಪ್ರತಿಭಟನೆಗಳು, ದ್ವೇಷ ಅಭಿಯಾನಗಳು ಮತ್ತು ಪ್ರತಿಕೃತಿಗಳನ್ನು ಸುಡುವಂತಹ ಸಾಂಕೇತಿಕ ಆಕ್ರಮಣಕಾರಿ ಕೃತ್ಯಗಳು ನಡೆದಿವೆ? ಎಂದು ಅವರು ಪತ್ರದಲ್ಲಿ ತಿಳಿಸಿದ್ದಾರೆ. ಪ್ರಸ್ತುತ ಮತ್ತು ಭವಿಷ್ಯದ ಪೀಳಿಗೆಯ ಪ್ರಯೋಜನಕ್ಕಾಗಿ ಸಾಂಸ್ಕೃತಿಕ ಪರಂಪರೆಯನ್ನು ರಕ್ಷಿಸುವ ಮತ್ತು ಸಂರಕ್ಷಿಸುವ ಬಾಧ್ಯತೆಯನ್ನು ಅಂತರರಾಷ್ಟ್ರೀಯ ಕಾನೂನು ವಿಧಿಸುತ್ತದೆ ಎಂದು ಅವರು ಒತ್ತಿ ಹೇಳಿದರು.

ಭಾರತವು 1972ರ ವಿಶ್ವ ಸಾಂಸ್ಕೃತಿಕ ಮತ್ತು ನೈಸರ್ಗಿಕ ಪರಂಪರೆಯ ರಕ್ಷಣೆಗೆ ಸಂಬಂಧಿಸಿದ ಯುನೆಸ್ಕೋ ಸಮಾವೇಶಕ್ಕೆ ಸಹಿ ಹಾಕಿರುವುದನ್ನು ಪತ್ರವು ಉಲ್ಲೇಖಿಸಿದೆ ಮತ್ತು ಅಂತಹ ಸ್ಮಾರಕಗಳ ಯಾವುದೇ ನಾಶ, ನಿರ್ಲಕ್ಷ್ಯ ಅಥವಾ ಕಾನೂನುಬಾಹಿರ ಬದಲಾವಣೆಯು ಅಂತರರಾಷ್ಟ್ರೀಯ ಬಾಧ್ಯತೆಗಳ ಉಲ್ಲಂಘನೆಗೆ ಸಮಾನವಾಗಿರುತ್ತದೆ ಎಂದು ಪತ್ರವು ಹೇಳಿದೆ. ಈ ವಿಷಯವನ್ನು ಗಮನದಲ್ಲಿಟ್ಟುಕೊಂಡು ಔರಂಗಜೇಬ್ ಸಮಾಧಿಗೆ ?ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಕಾನೂನುಗಳಿಗೆ ಅನುಸಾರವಾಗಿ ಸಂಪೂರ್ಣ ಕಾನೂನು ರಕ್ಷಣೆ, ಭದ್ರತೆ ಮತ್ತು ಸಂರಕ್ಷಣೆ



ಒದಗಿಸುವಂತೆ ಕೇಂದ್ರ ಸರ್ಕಾರ ಮತ್ತು ಂಖಿ ಗೆ ನಿರ್ದೇಶನ ನೀಡಬೇಕೆಂದು ಅವರು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಕಚೇರಿಗೆ ಒತ್ತಾಯಿಸಿದ್ದಾರೆ. ಮಾರ್ಚ್ 17ರಂದು ನಾಗ್ಪುರದಲ್ಲಿ ಹಿಂಸಾಚಾರ ಭುಗಿಲೆದ್ದಿತು. ಕೆಲವು ಗುಂಪುಗಳು ಔರಂಗಜೇಬ್ ಸಮಾಧಿಯನ್ನು ತೆಗೆದುಹಾಕುವಂತೆ ಒತ್ತಾಯಿಸಿದ್ದವು, ಆಂದೋಲನದ ಸಮಯದಲ್ಲಿ ಒಂದು ಸಮುದಾಯದ ಪವಿತ್ರ ಪುಸ್ತಕವನ್ನು ಸುಟ್ಟುಹಾಕಲಾಗಿದೆ ಎಂಬ ವದಂತಿಗಳ ನಡುವೆ ಪೊಲೀಸರ ಮೇಲೆ ಕಲ್ಲುಗಳನ್ನು ಎಸೆಯಲಾಯಿತು. ಅಂದಿನಿಂದ, ಒಟ್ಟು 92 ಜನರನ್ನು ಬಂಧಿಸಲಾಗಿದೆ.

# ಪೋಷಕರ ವಿರೋಧಿಸಿ ವಿವಾಹವಾಗುವವರಿಗೆ ಪೊಲೀಸ್ ರಕ್ಷಣೆ ಹಕ್ಕಲ್ಲ: ಹೈಕೋರ್ಟ್ ಸ್ಪಷ್ಟನೆ



**ಅಲಹಾಬಾದ್, ಏ. 17:** ತಮ್ಮ ಪೋಷಕರ ಇಚ್ಛೆಗೆ ವಿರುದ್ಧವಾಗಿ ಸ್ವಂತ ಇಚ್ಛೆಯಿಂದ ವಿವಾಹವಾಗುವ ದಂಪತಿಗಳು ತಮ್ಮ ಜೀವ ಮತ್ತು ಸ್ವಾತಂತ್ರ್ಯಕ್ಕೆ ನಿಜವಾದ ಬೆದರಿಕೆ ಗ್ರಹಿಕೆ ಇಲ್ಲದಿದ್ದರೆ ಪೊಲೀಸ್ ರಕ್ಷಣೆಯನ್ನು ಹಕ್ಕಿನ ವಿಷಯವೆಂದು ಹೇಳಿಕೊಳ್ಳಲು ಸಾಧ್ಯವಿಲ್ಲ ಎಂದು ಅಲಹಾಬಾದ್ ಹೈಕೋರ್ಟ್ ಹೇಳಿದೆ. ರಕ್ಷಣೆ ಕೋರಿ ದಂಪತಿಗಳು ಸಲ್ಲಿಸಿದ ಅರ್ಜಿಯನ್ನು ತೀರ್ಮಾನಿಸುವಾಗ ನ್ಯಾಯಾಲಯವು ಈ ತೀರ್ಪು ನೀಡಿದೆ. ನ್ಯಾಯಾಲಯವು ಅರ್ಹ ಪ್ರಕರಣದಲ್ಲಿ ದಂಪತಿಗಳಿಗೆ ಭದ್ರತೆಯನ್ನು ಒದಗಿಸಬಹುದು. ಆದರೆ, ಯಾವುದೇ ಬೆದರಿಕೆ ಗ್ರಹಿಕೆ ಇಲ್ಲದಿದ್ದರೆ, ಅಂತಹ ದಂಪತಿಗಳು ಪರಸ್ಪರ ಬೆಂಬಲಿಸಲು ಮತ್ತು ಸಮಾಜವನ್ನು ಎದುರಿಸಲು ಕಲಿಯಬೇಕು ಎಂದು ಅದು ಹೇಳಿದೆ. ಶ್ರೇಯಾ ಕೇಸರ್ವಾನಿ ಮತ್ತು ಅವರ ಪತಿ, ಪೊಲೀಸ್ ರಕ್ಷಣೆ ಕೋರಿ, ಪ್ರತಿವಾದಿಗಳು ತಮ್ಮ ಶಾಂತಿಯುತ ವೈವಾಹಿಕ ಜೀವನದಲ್ಲಿ ಹಸ್ತಕ್ಷೇಪ ಮಾಡದಂತೆ ನಿರ್ದೇಶನವನ್ನು ಕೋರಿ ಸಲ್ಲಿಸಿದ ರಿಟ್ ಅರ್ಜಿಯನ್ನು ಆಲಿಸುವಾಗ ನ್ಯಾಯಮೂರ್ತಿ ಸೌರಭ್ ಶ್ರೀವಾಸ್ತವ ಈ ಅಭಿಪ್ರಾಯವನ್ನು ವ್ಯಕ್ತಪಡಿಸಿದರು.


ವಾದಗಳನ್ನು ಪರಿಶೀಲಿಸಿದ ನಂತರ, ಅರ್ಜಿದಾರರಿಗೆ ಯಾವುದೇ ಗಂಭೀರ ಬೆದರಿಕೆ ಗ್ರಹಿಕೆ ಇಲ್ಲ ಎಂದು ಗಮನಿಸಿ ನ್ಯಾಯಾಲಯವು ಅವರ ರಿಟ್ ಅರ್ಜಿಯನ್ನು ವಿಲೇವಾರಿ ಮಾಡಿತು. ಲತಾ ಸಿಂಗ್ ಗಿ/ ಉತ್ತರ ಪ್ರದೇಶ ರಾಜ್ಯ ಪ್ರಕರಣ ಮತ್ತು ಮತ್ತೊಂದು ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ನೀಡಿದ ತೀರ್ಪಿನ ಹಿನ್ನೆಲೆಯಲ್ಲಿ ಅವರಿಗೆ ಪೊಲೀಸ್ ರಕ್ಷಣೆ ಒದಗಿಸಲು ಯಾವುದೇ ಆದೇಶ ಹೊರಡಿಸುವ ಅಗತ್ಯವಿಲ್ಲ, ನ್ಯಾಯಾಲಯವು ತಮ್ಮ ಸ್ವಂತ ಇಚ್ಛೆಯಂತೆ ಮದುವೆಯಾದ ಜೋಡಿಗೆ ನ್ಯಾಯಾಲಯಗಳು ರಕ್ಷಣೆ ನೀಡಲು ಉದ್ದೇಶಿಸಿಲ್ಲ ಎಂದು ಅಭಿಪ್ರಾಯಪಟ್ಟಿದೆ. ಅರ್ಜಿದಾರರ ಜೀವನ ಮತ್ತು ಸ್ವಾತಂತ್ರ್ಯ ಅಪಾಯದಲ್ಲಿದೆ ಎಂದು ತೀರ್ಮಾನಿಸಲು ಯಾವುದೇ ವಸ್ತು ಅಥವಾ ಕಾರಣವಿಲ್ಲ ಎಂದು ನ್ಯಾಯಾಲಯ ಗಮನಿಸಿದೆ. ?ಖಾಸಗಿ ಪ್ರತಿವಾದಿಗಳು (ಅರ್ಜಿದಾರರಲ್ಲಿ ಯಾರೊಬ್ಬರ ಸಂಬಂಧಿಕರು) ಅರ್ಜಿದಾರರಿಗೆ ದೈಹಿಕ ಅಥವಾ ಮಾನಸಿಕ ಹಲ್ಲೆ ನಡೆಸುವ ಸಾಧ್ಯತೆಯಿದೆ ಎಂದು ಸಾಬೀತುಪಡಿಸಲು ಯಾವುದೇ ಪುರಾವೆಗಳಿಲ್ಲ ಎಂದು ನ್ಯಾಯಾಲಯ ಗಮನಿಸಿದೆ.

ಇದಲ್ಲದೆ, ಖಾಸಗಿ ಪ್ರತಿವಾದಿಗಳ ಆಪಾದಿತ ಕಾನೂನುಬಾಹಿರ ನಡವಳಿಕೆಯ ವಿರುದ್ಧ ಯಾವುದೇ ಎಫ್‌ಐಆರ್ ದಾಖಲಿಸಲು ಅರ್ಜಿದಾರರು ಸಂಬಂಧಪಟ್ಟ ಪೊಲೀಸ್ ಅಧಿಕಾರಿಗಳಿಗೆ ಮಾಹಿತಿಯ ರೂಪದಲ್ಲಿ ನಿರ್ದಿಷ್ಟ ಅರ್ಜಿಯನ್ನು ಸಲ್ಲಿಸಿಲ್ಲ ಎಂದು ನ್ಯಾಯಾಲಯ ಗಮನಿಸಿದೆ. ಆದರೂ, ಅರ್ಜಿದಾರರು ಈಗಾಗಲೇ ಚಿತ್ರಕೂಟ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿ (ಎಸ್ಪಿ) ಅವರಿಗೆ ಮನವಿ ಸಲ್ಲಿಸಿದ್ದಾರೆ ಎಂದು ಗಮನಿಸಿದ ನ್ಯಾಯಾಲಯ, ಸಂಬಂಧಪಟ್ಟ ಪೊಲೀಸರು ನಿಜವಾದ ಬೆದರಿಕೆಯ ಗ್ರಹಿಕೆಯನ್ನು ಕಂಡುಕೊಂಡರೆ, ಅವರು ಕಾನೂನಿನ ಪ್ರಕಾರ ಅಗತ್ಯವಿರುವ ಎಲ್ಲವನ್ನೂ ಮಾಡುತ್ತಾರೆ? ಎಂದು ಹೇಳಿದೆ.

ಈ ಹಿನ್ನೆಲೆಯಲ್ಲಿ, ಯಾವುದೇ ವ್ಯಕ್ತಿ ಅವರ ಮೇಲೆ ಕೆಟ್ಟದಾಗಿ ವರ್ತಿಸಿದರೆ ಅಥವಾ ಅವರ ಮೇಲೆ ದೌರ್ಜನ್ಯ ಎಸಗಿದರೆ, ನ್ಯಾಯಾಲಯಗಳು ಮತ್ತು ಪೊಲೀಸ್ ಅಧಿಕಾರಿಗಳು ಅವರ ರಕ್ಷಣೆಗೆ ಬರುತ್ತಾರೆ ಎಂದು ನ್ಯಾಯಾಲಯ ಒತ್ತಿ ಹೇಳಿದೆ.

# ವಾಕ್–ಶ್ರವಣದೋಷವುಳ್ಳ 11 ವರ್ಷದ ಬಾಲಕಿ ಮೇಲೆ ಅತ್ಯಾಚಾರ, ಚಿತ್ರಹಿಂಸೆ

**ಲಖನೌ, ಏ. 17:** ಉತ್ತರ ಪ್ರದೇಶದ ರಾಂಪುರ ಜಿಲ್ಲೆಯಲ್ಲಿ 11 ವರ್ಷದ ವಾಕ್ ಮತ್ತು ಶ್ರವಣ ದೋಷವುಳ್ಳ ಬಾಲಕಿಯ ಮೇಲೆ ಕ್ರೂರವಾಗಿ ಅತ್ಯಾಚಾರ ಮಾಡಲಾಗಿದೆ. ಆಕೆ ಪ್ರಜ್ಞಾಹೀನಳಾಗಿ ಗಂಭೀರ ಗಾಯಗಳಿಂದ ಪತ್ತೆಯಾಗಿದ್ದಾಳೆ. ಬಂಧನದ ಸಮಯದಲ್ಲಿ ಕಾಲಿಗೆ ಗುಂಡು ಹಾರಿಸುವ ಮೂಲಕ ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ. ಮಂಗಳವಾರ ಸಂಜೆಯಿಂದ ಬಾಲಕಿ ಕಾಣೆ ಯಾಗಿದ್ದಳು, ಕುಟುಂಬ ಸದಸ್ಯರು ಆಕೆಗಾಗಿ ಹುಡುಕುತ್ತಿದ್ದರು. ನಿನ್ನೆ ಬೆಳಿಗ್ಗೆ, ಆಕೆ ಹೊಲದಲ್ಲಿ ಬೆತ್ತಲೆಯಾಗಿ ಗಾಯಗೊಂಡಿದ್ದು ಪತ್ತೆಯಾಗಿತ್ತು.



ಆಕೆಯನ್ನು ಹತ್ತಿರದ ಆಸ್ಪತ್ರೆಗೆ ಕರೆದೊಯ್ಯಲಾಯಿತು, ಹೆಚ್ಚಿನ ಚಿಕಿತ್ಸೆಗಾಗಿ ಆಕೆಯನ್ನು ಮೀರತ್‌ಗೆ ಕರೆದೊಯ್ಯಲಾಯಿತು. ಅಪ್ರಾಪ್ತ ವಯಸ್ಕಳ ಮೇಲಿನ ಅತ್ಯಾಚಾರ ಆರೋಪದಡಿಯಲ್ಲಿ ಮತ್ತು ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ (ಪೋಕ್ಸೊ) ಕಾಯ್ದೆಯ ಸಂಬಂಧಿತ ವಿಭಾಗಗಳ ಅಡಿಯಲ್ಲಿ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ. ದೌರ್ಜನ್ಯ ನಡೆದ ಪ್ರದೇಶದಲ್ಲಿನ ಸಿಸಿಟಿವಿ ಕ್ಯಾಮರಾಗಳ ದೃಶ್ಯಾವಳಿಗಳನ್ನು ಪರಿಶೀಲಿಸಿ, ಅದೇ ಗ್ರಾಮದ ನಿವಾಸಿ ಡಾನ್ ಸಿಂಗ್ (24) ಎಂಬಾತನನ್ನು ಶಂಕಿತ ಎಂದು ಗುರುತಿಸಿದ್ದಾರೆ. ಪೊಲೀಸರು ಆತನನ್ನು ವಶಕ್ಕೆ ಪಡೆಯಲು ಪ್ರಯತ್ನಿಸಿದಾಗ, ಆತ ಪೊಲೀಸರ ಮೇಲೆಯೇ ಗುಂಡು ಹಾರಿಸಿದ್ದಾನೆ, ಪ್ರತಿದಾಳಿಯಲ್ಲಿ ಗಾಯಗೊಂಡಿದ್ದಾನೆ.

ಇದು ಒಬ್ಬರು ಅಥವಾ ಹೆಚ್ಚಿನ ವ್ಯಕ್ತಿಗಳಿಂದ ನಡೆದ ಅತ್ಯಾಚಾರದ ಸ್ಪಷ್ಟ ಪ್ರಕರಣವಾಗಿದೆ. ಏಕೆಂದರೆ, ಆಕೆಯ ಖಾಸಗಿ ಭಾಗಗಳಲ್ಲಿ ಅನೇಕ ಗಾಯಗಳಾಗಿದ್ದವು. ಆಕೆಯ ಮುಖಕ್ಕೆ ಮೊಂಡಾದ ವಸ್ತುವಿನಿಂದ ಹೊಡೆದಿದ್ದು, ಅದು ಊದಿಕೊಂಡಿತ್ತು. ಆಕೆ ಭಯಭೀತಳಾಗಿದ್ದಳು ಮತ್ತು ಏನನ್ನೂ ವಿವರಿಸಲು ಸಾಧ್ಯವಾಗುತ್ತಿರಲಿಲ್ಲ. ಇದು ನಾನು ನೋಡಿದ ಅತ್ಯಂತ ಭಯಾನಕ ಲೈಂಗಿಕ ಅಪರಾಧಗಳಲ್ಲಿ ಒಂದಾಗಿದೆ ಎಂದು ಬಾಲಕಿಯ ವೈದ್ಯಕೀಯ ಪರೀಕ್ಷೆ ನಡೆಸಿದ ಡಾ. ಅಂಜು ಸಿಂಗ್ ಹೇಳಿದ್ದಾರೆ. ಆರೋಪಿಯ ವಿರುದ್ಧ ನಮ್ಮಲ್ಲಿ ಎಲೆಕ್ಟ್ರಾನಿಕ್ ಪುರಾವೆಗಳಿವೆ. ಬಾಲಕಿಗೆ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಅವರು ಹೇಳಿದರು. ಸಿಸಿಟಿವಿ ದೃಶ್ಯಾವಳಿಗಳಲ್ಲಿ ಆರೋಪಿಯು ಬಾಲಕಿಯ ಮನೆಯ ಹೊರಗೆ ಮಾತನಾಡುತ್ತಿರುವುದು ಕಂಡುಬಂದಿದೆ ಎಂದು ಹಿರಿಯ ಅಧಿಕಾರಿ ಹೇಳಿದರು.

# ಸೊಸೆಯ ವಿರುದ್ಧ ಅತ್ತೆ ಕೌಟುಂಬಿಕ ಹಿಂಸಾಚಾರ ಪ್ರಕರಣ ದಾಖಲಿಸಬಹುದು ; ಅಲಾಹಾಬಾದ್ ಹೈಕೋರ್ಟ್

ಅಲಾಹಾಬಾದ್: ಕೌಟುಂಬಿಕ ಹಿಂಸಾಚಾರದಿಂದ ಮಹಿಳೆಯರ ರಕ್ಷಣೆ ಕಾಯಿದೆ– 2005ರ ಅಡಿಯಲ್ಲಿ ಸೊಸೆಯ ವಿರುದ್ಧ ಅತ್ತೆ ಕೌಟುಂಬಿಕ ಹಿಂಸಾಚಾರ ಪ್ರಕರಣ ದಾಖಲಿಸಬಹುದು ಎಂದು ಅಲಾಹಾಬಾದ್ ಹೈಕೋರ್ಟ್ ಈಚೆಗೆ ತೀರ್ಪು ನೀಡಿದೆ. ಅತ್ತೆ ಸಲ್ಲಿಸಿದ್ದ ದೂರಿನ ಹಿನ್ನೆಲೆಯಲ್ಲಿ ಸೊಸೆ ಮತ್ತು ಅವರ ಕುಟುಂಬ ಸದಸ್ಯರಿಗೆ ಸಮನ್ಸ್ ಜಾರಿ ಮಾಡಿದ್ದ ವಿಚಾರಣಾ ನ್ಯಾಯಾಲಯದ ಆದೇಶವನ್ನು ನ್ಯಾಯಮೂರ್ತಿ ಅಲೋಕ್ ಮಾಥುರ್ ಎತ್ತಿಹಿಡಿದಿದ್ದಾರೆ. ಕಾಯಿದೆಯ ಸೆಕ್ಷನ್ 12ನ್ನು ಪರಿಶೀಲಿಸಿದ ನ್ಯಾಯಾಲಯ ಈ ಸೆಕ್ಷನ್ ಅಡಿಯಲ್ಲಿ ಮನೆಯಲ್ಲಿನ ಕೌಟುಂಬಿಕ ಸಂಬಂಧದಲ್ಲಿರುವ ಯಾವುದೇ ನೊಂದ ಮಹಿಳೆ ಪರಿಹಾರ ಕೋರಿ ಅರ್ಜಿ ಸಲ್ಲಿಸಬಹುದು ಎಂದು ಅಭಿಪ್ರಾಯಪಟ್ಟಿತು. ಜೊತೆಗೆ ಅತ್ತೆ ಅಂತಹ ಪ್ರಕರಣ ದಾಖಲಿಸಲು ಸಾಧ್ಯವಿಲ್ಲ ಎಂಬ ವಾದವನ್ನು ತಿರಸ್ಕರಿಸಿತು. ಸೊಸೆ ಅಥವಾ ಕುಟುಂಬದ ಯಾವುದೇ ಸದಸ್ಯರು ಅತ್ತೆಗೆ ಕಿರುಕುಳ ಅಥವಾ ದೈಹಿಕ ಇಲ್ಲವೇ ಮಾನಸಿಕ ಹಿಂಸೆ ನೀಡಿದರೆ, ಖಂಡಿತವಾಗಿಯೂ ಅವರನ್ನು ಸಂತ್ರಸ್ತ ವ್ಯಕ್ತಿಯ ವ್ಯಾಪ್ತಿಗೆ ತರಬಹುದು ಮತ್ತು 2005 ರ ಕೌಟುಂಬಿಕ ಹಿಂಸಾಚಾರದಿಂದ ಮಹಿಳೆಯರ ರಕ್ಷಣೆ ಕಾಯಿದೆಯ ಸೆಕ್ಷನ್ 12ರ ಅಡಿಯಲ್ಲಿ ಅರ್ಜಿಯನ್ನು ನಿರ್ವಹಿಸುವ ಹಕ್ಕು ಅವರಿಗಿದೆ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ. 2005ರಲ್ಲಿ ಜಾರಿಗೆ ತಂದ ಕಾಯಿದೆ ಕೌಟುಂಬಿಕ ಹಿಂಸಾಚಾರಕ್ಕೆ ಒಳಗಾದ ಮಹಿಳೆಯರಿಗೆ ಪ್ರಯೋಜನಕಾರಿ ಕಾನೂನು ಆಗಿದ್ದು, ಕಾನೂನಿನ ಅನ್ವಯಿಂಕತೆಂಯಂನ್ನು ಮೊಟಕುಗೊಳಿಸಲು ಸಾಧ್ಯವಿಲ್ಲ ಬದಲಿಗೆ ಅದನ್ನು ಉದಾರವಾಗಿ ಅರ್ಥೈಸಿಕೊಳ್ಳಬೇಕು ಎಂದು ಅದು ಹೇಳಿದೆ. ಕಾಯಿದೆಯ ವಿವಿಧ ಸೆಕ್ಷನ್ಗಳನ್ನು ಒಗ್ಗೂಡಿಸಿ ಸಹವಾಚನ ಮಾಡಿದಾಗ ಸಂತ್ರಸ್ತ ವ್ಯಕ್ತಿ ಯಾವುದೇ ಕುಟುಂಬದ ಮಹಿಳೆ ಎಂಬುದು ತಿಳಿಯುತ್ತದೆ. ಪ್ರಸ್ತುತ ಪ್ರಕರಣದಲ್ಲಿ ಸಂತ್ರಸ್ತ ಮಹಿಳೆ ಅತ್ತೆಯಾಗಿದ್ದು. ಸೊಸೆಯೊಟ್ಟಿಗೆ ವಾಸಿಸುತ್ತಿದ್ದಾರೆ. ಆದ್ದರಿಂದ ಕಾಯಿದೆಯ ಸೆಕ್ಷನ್ 12ರ ಅಡಿಯಲ್ಲಿ ಅರ್ಜಿ ಸಲ್ಲಿಸುವ ಹಕ್ಕು ಅವರಿಗೆ ಇದೆ ಎಂದು ನ್ಯಾಯಾಲಯ ನುಡಿಯಿತು. ಅಂತೆಯೇ ವಿಚಾರಣಾ ನ್ಯಾಯಾಲಯ ಹೊರಡಿಸಿದ ಸಮನ್ಸ್ ಪ್ರಶ್ನಿಸಿದ್ದ ಅರ್ಜಿಯನ್ನು ಅದು ತಿರಸ್ಕರಿಸಿತು.




ರಾಜಸ್ಥಾನದ ಜೈಸಲ್ಮೇರ್ ಬಳಿಯಿರುವ ಪೋಖ್ರಾನ್‌ನಲ್ಲಿ 100 ಮೇಕ್ ಇನ್ ಇಂಡಿಯಾ ಮಾಡ್ಯುಲರ್‌ಗಳೊಂದಿಗೆ ನಿರ್ಮಿಸಲಾದ 1.3 ಗೀಗಾವ್ಯಾಟ್ ಸೌರಯೋಜನೆಯನ್ನು ಗುರುವಾರ ಕೇಂದ್ರ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಅವರು ಉದ್ಘಾಟಿಸಿದರು. ಮುಖ್ಯಮಂತ್ರಿ ಭಜನ್‌ಲಾಲ್ ಶರ್ಮಾ ಜೊತೆಯಲ್ಲಿದ್ದರು

# ಮುರ್ಷಿದಾಬಾದ್ ಹಿಂಸಾಚಾರಕ್ಕೆ ಬಿಜೆಪಿಯೇ ಕಾರಣ: ದೀದಿ ಕಿಡಿ


**ಕೋಲ್ಕತ್ತಾ, ಏ. 17:** ವಕ್ಫ್ ತಿದ್ದುಪಡಿ ಕಾಯ್ದೆಯ ಹಿನ್ನೆಲೆಯಲ್ಲಿ ಪಶ್ಚಿಮ ಬಂಗಾಳದ ಮುರ್ಷಿದಾಬಾದ್‌ನಲ್ಲಿ ಇತ್ತೀಚೆಗೆ ನಡೆದ ಕೋಮು ಹಿಂಸಾಚಾರವು ಪೂರ್ವ ಯೋಜಿತವಾಗಿದ್ದು, ಭಾರತೀಯ ಜನತಾ ಪಕ್ಷ (ಬಿಜೆಪಿ), ಕೆಲವು ಕೇಂದ್ರ ಸಂಸ್ಥೆಗಳು ಮತ್ತು ಗಡಿ ಭದ್ರತಾ ಪಡೆಗಳೊಳಗಿನ ಕೆಲವು ಅಂಶಗಳಿಂದ ಈ ಗಲಭೆಗೆ ಉತ್ತೇಜನ ನೀಡಿವೆ ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಬುಧವಾರ ಸ್ಫೋಟಕ ಆರೋಪ ಮಾಡಿದ್ದಾರೆ. ಕೋಲ್ಕತ್ತಾದಲ್ಲಿ ಮುಸ್ಲಿಂ ಧಾರ್ಮಿಕ ನಾಯಕರೊಂದಿಗಿನ ಸಭೆಯನ್ನುದ್ದೇಶಿಸಿ ಮಾತನಾಡಿದ ಬ್ಯಾನರ್ಜಿ, ಪಶ್ಚಿಮ ಬಂಗಾಳದ ಕೆಲವು ಭಾಗಗಳಲ್ಲಿ ಅಶಾಂತಿ ಉಂಟಾಗುವುದಕ್ಕೆ ಮುಂಚಿತವಾಗಿ ಬಾಂಗ್ಲಾದೇಶದಿಂದ ಗಡಿಯಾಚೆಗಿನ ಒಳನುಸುಳುವಿಕೆಗೆ ಅವಕಾಶ ನೀಡುವ ಮೂಲಕ ಬಿಜೆಪಿ ಉದ್ವಿಗ್ನತೆಯನ್ನು ಸೃಷ್ಟಿಸುತ್ತಿದೆ ಎಂದು ಆರೋಪಿಸಿದರು.



ಮುರ್ಷಿದಾಬಾದ್ ಅಶಾಂತಿಯಲ್ಲಿ ಗಡಿಯಾಚೆಗಿನ ಅಂಶಗಳ ಪಾತ್ರವನ್ನು ಪ್ರತಿಪಾದಿಸುವ ಸುದ್ದಿಗಳನ್ನು ನಾನು ಓದಿದ್ದೇನೆ. ಗಡಿಯನ್ನು ಕಾಯುವುದು ಬಿಎಸ್‌ಎಫ್ ಪಾತ್ರವಲ್ಲವೇ ಬಿಎಸ್‌ಎಫ್ ಗೃಹ ಸಚಿವಾಲಯದ (ಎಂಎಚ್‌ಎ) ಅಡಿಯಲ್ಲಿದೆ. ರಾಜ್ಯ ಸರ್ಕಾರ ಅಂತರರಾಷ್ಟ್ರೀಯ ಗಡಿಯನ್ನು ಕಾಯುವುದಿಲ್ಲ. ಕೇಂದ್ರ ಸರ್ಕಾರ ಜವಾಬ್ದಾರಿಯಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ. ಹಿಂಸಾಚಾರದ ಸಮಯದಲ್ಲಿ ಕಲ್ಲು ತೂರಲು ಸ್ಥಳೀಯ ಯುವಕರಿಗೆ ಹಣವನ್ನು ಪಾವತಿಸುವ ಮೂಲಕ ಬಿಎಸ್‌ಎಫ್ ಗಡಿ ಪ್ರದೇಶಗಳಲ್ಲಿ ಯಾರಿಗೆ ಹಣಕಾಸು ಒದಗಿಸಿದೆ ಎಂಬುದನ್ನು ನಾನು ಕಂಡುಹಿಡಿಯುತ್ತೇನೆ ಎಂದು ಸಿಎಂ ಹೇಳಿದರು. ಹೊರಗಿನ ಬಿಜೆಪಿ ಗೂಂಡಾಗಳು ಸ್ಥಳದಿಂದ ಪಲಾಯನ ಮಾಡುವ ಮೊದಲು ಬಂದು ಅವ್ಯವಸ್ಥೆ ಸೃಷ್ಟಿಸಲು ಏಕೆ ಅವಕಾಶ ನೀಡಿದರು ಹೊಣೆಗಾರಿಕೆಯನ್ನು ಸರಿಪಡಿಸಬೇಕು. ಅವರು ಹಿಂದೂಗಳು ಮತ್ತು ಮುಸ್ಲಿಮರನ್ನು ಧ್ರುವೀಕರಿಸಿ ವಿಭಜಿಸಲು ಬಯಸುತ್ತಾರೆ.

ಅವರು ತಮ್ಮ ಜುಮ್ಲಾ ಸರ್ಕಾರವನ್ನು ಬಯಸುತ್ತಾರೆ. ದೇಶವನ್ನು ವಿಭಜಿಸಬೇಡಿ, ಬದಲಾಗಿ ಅದನ್ನು ಒಗ್ಗೂಡಿಸಿ ಎಂದು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು. ಹೊಸ ಕಾಯ್ದೆಯ ವಿರುದ್ಧ ಹರುಹಾಯ್ದ ಬ್ಯಾನರ್ಜಿ, ವಕ್ಫ್ (ತಿದ್ದುಪಡಿ) ಕಾಯ್ದೆಯನ್ನು ಜಾರಿಗೆ ತರದಂತೆ ಪ್ರಧಾನಿ ನರೇಂದ್ರ ಮೋದಿಯವರನ್ನು ಒತ್ತಾಯಿಸಿದರು, ಇದು ದೇಶವನ್ನು ವಿಭಜಿಸುತ್ತದೆ ಎಂದು ಎಚ್ಚರಿಸಿದರು.

ಅಮಿತ್ ಶಾ ಅವರ ಮೇಲೆ ನಿಗಾ ಇಡುವಂತೆ ನಾನು ಪ್ರಧಾನಿಯನ್ನು ವಿನಂತಿಸುತ್ತೇನೆ. ಅವರು ತಮ್ಮ ರಾಜಕೀಯ ಹಿತಾಸಕ್ತಿಗಳನ್ನು ಪೂರೈಸಲು ದೇಶಕ್ಕೆ ಹೆಚ್ಚು ಹಾನಿ ಮಾಡುತ್ತಿದ್ದಾರೆ. ಅವರು (ಅಮಿತ್ ಶಾ) ಏಕೆ ಇಷ್ಟು ಆತುರದಲ್ಲಿದ್ದಾರೆ ಅವರು ಎಂದಿಗೂ ಪ್ರಧಾನಿಯಾಗುವುದಿಲ್ಲ, ಮೋದಿಯವರು ಅಧಿಕಾರದಿಂದ ತೆರಳಿದ ನಂತರ ಅವರು ಏನು ಮಾಡುತ್ತಾರೆ ತಮ್ಮ ಗೃಹ ಸಚಿವರು ಕೇಂದ್ರ ಸಂಸ್ಥೆಗಳನ್ನು ಹೇಗೆ ದುರುಪಯೋಗಪಡಿಸಿಕೊಳ್ಳುತ್ತಿದ್ದಾರೆ ಎಂಬುದನ್ನು ಪ್ರಧಾನಿ ನೋಡಬೇಕು. ಪ್ರಧಾನಿ ಅವರನ್ನು ನಿಯಂತ್ರಿಸಬೇಕು ಎಂದು ಬ್ಯಾನರ್ಜಿ ಹೇಳಿದರು. ವಿಶಾಲ ವಿರೋಧ ಪಕ್ಷಗಳ ಒಕ್ಕೂಟವಾದ ಇಂಡಿಯಾ ಬಣಕ್ಕೆ ಮನವಿ ಮಾಡಿದ ಬ್ಯಾನರ್ಜಿ, ಇತ್ತೀಚೆಗೆ ಜಾರಿಗೆ ತಂದ ವಕ್ಫ್ ತಿದ್ದುಪಡಿ ಕಾಯ್ದೆಯ ವಿರುದ್ಧ ಒಗ್ಗಟ್ಟಿನ ಪ್ರತಿರೋಧವನ್ನು ಕೋರಿದರು. ನಿಮ್ಮ ಮೂಲಕ ನಾನು ಇಂಡಿಯಾ ಮೈತ್ರಿಕೂಟಕ್ಕೆ ಮನವಿ ಮಾಡುತ್ತೇನೆ. ಇದನ್ನು ಧೈರ್ಯದಿಂದ ಒಗ್ಗೂಡಿ ಹೋರಾಡೋಣ. ಇದು ಕೇವಲ ವೈಯಕ್ತಿಕ ಸಮಸ್ಯೆಯಲ್ಲ; ಇದು ಎಲ್ಲರ ಮೇಲೆ ಪರಿಣಾಮ ಬೀರುತ್ತದೆ. ಇಂದು, ಅವರು ಒಂದು ಗುಂಪನ್ನು ಗುರಿಯಾಗಿಸಿಕೊಂಡಿದ್ದಾರೆ. ನಾಳೆ, ಅದು ಇನ್ನೊಂದು ಗುಂಪಾಗಬಹುದು. ಇದರ ನಂತರ, ಅವರು ಏಕರೂಪ ನಾಗರಿಕ ಸಂಹಿತೆಯನ್ನು ತರುವ ಬಗ್ಗೆಯೂ ಮಾತನಾಡುತ್ತಿದ್ದಾರೆ ಎಂದು ಅವರು ಹೇಳಿದರು.



# ನಕಲಿ ವೈದ್ಯರ ವಿರುದ್ಧ ಕ್ರಮ ಕೈಗೊಳ್ಳಿ: ಸರ್ಕಾರಕ್ಕೆ ಹೈಕೋರ್ಟ್ ಸೂಚನೆ




**ಬೆಂಗಳೂರು, ಏ.17–** 'ನಕಲಿ ವೈದ್ಯರಿಂದ ಹಳ್ಳಿಗಳ ಮುಗ್ಧ ಜನರ ಜೀವ ಅಪಾಯದಲ್ಲಿದೆ' ಎಂದು ತೀವ್ರ ಆತಂಕ ವ್ಯಕ್ತಪಡಿಸಿರುವ ಕರ್ನಾಟಕ ಹೈಕೋರ್ಟ್, 'ರಾಜ್ಯಾದ್ಯಂತ ಇರುವ ನಕಲಿ ವೈದ್ಯರ ವಿರುದ್ಧ ಕ್ರಮ ಕೈಗೊಳ್ಳಲು ಕೂಡಲೇ ಮುಂದಾಗಬೇಕು' ಎಂದು ರಾಜ್ಯ ಸರ್ಕಾರಕ್ಕೆ ಈಚೆಗೆ ಖಡಕ್ ತಾಕೀತು ಮಾಡಿದೆ. ಖಾಸಗಿ ವೈದ್ಯಕೀಯ ವೃತ್ತಿ ನಡೆಸಲು ಕೋರಿರುವ ಅರ್ಜಿಯನ್ನು ಪರಿಗಣಿಸುವಂತೆ ಮಂಡ್ಯ ಜಿಲ್ಲಾಧಿಕಾರಿಗೆ ನಿರ್ದೇಶಿಸಬೇಕು ಎಂದು ಕೋರಿ ಕೆ ಆರ್ ಪೇಟೆ ತಾಲ್ಲೂಕು ಬೂಕನಕೆರೆ ಹೋಬಳಿಯ ಎ.ಎ.ಮುರಳೀಧರ ಸ್ವಾಮಿ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರ ಏಕಸದಸ್ಯ ಪೀಠ ವಜಾಗೊಳಿಸಿತು.

'ವೈದ್ಯಕೀಯ ಕ್ಷೇತ್ರದಲ್ಲಿ ಅರ್ಹತೆ ಇಲ್ಲದ ವ್ಯಕ್ತಿಗಳು ನಡೆಸುತ್ತಿರುವ ಕ್ಲಿನಿಕ್‌ಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು. ಈ ದಿಸೆಯಲ್ಲಿ ಅನುವಾಗುವಂತೆ ಈ ಆದೇಶದ ಪ್ರತಿಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಾರ್ಯದರ್ಶಿಗೆ ರವಾನಿಸಬೇಕು' ಎಂದು ಪೀಠ ಹೈಕೋರ್ಟ್ ರಿಜಿಸ್ಟ್ರಾರ್ ನಿರ್ದೇಶಿಸಿದೆ. ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳ ವರದಿಯನ್ನು ಸಲ್ಲಿಸುವಂತೆಯೂ ಪೀಠ ನಿರ್ದೇಶಿಸಿದೆ.

**'ವೈದ್ಯಕೀಯ ಕ್ಷೇತ್ರದಲ್ಲಿ ಅರ್ಹತೆ ಇಲ್ಲದ ವ್ಯಕ್ತಿಗಳು ನಡೆಸುತ್ತಿರುವ ಕ್ಲಿನಿಕ್‌ಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು. ಈ ದಿಸೆಯಲ್ಲಿ ಅನುವಾಗುವಂತೆ ಈ ಆದೇಶದ ಪ್ರತಿಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಾರ್ಯದರ್ಶಿಗೆ ರವಾನಿಸಬೇಕು'**

'ಅರ್ಜಿದಾರರು ಕೇವಲ ಎಸ್ಎಸ್ಎಲ್‌ಸಿವರೆಗೆ ಓದಿದ್ದಾರೆ. ಭಾರತೀಯ ಪರ್ಯಾಯ ಔಷಧ ಮಂಡಳಿ ನೀಡಿದೆ ಎಂಬ ಪ್ರಮಾಣ ಪತ್ರ ಹೊಂದಿದ್ದಾರೆ. ಆಯುರ್ವೇದ, ಅಲೋಪತಿ ಅಥವಾ ಯುನಾನಿ ಸೇರಿದಂತೆ ಯಾವುದೇ ವಿಭಾಗದಲ್ಲಿ ಸೂಕ್ತ ಶೈಕ್ಷಣಿಕ ಅರ್ಹತೆ ಹೊಂದಿಲ್ಲ. ಆದರೂ ವೈದ್ಯ ಪದ್ಧತಿ ಅನುಸರಿಸುತ್ತಿದ್ದಾರೆ. ಇದನ್ನೆಲ್ಲಾ ಗಮನಿಸಿದರೆ ತಮ್ಮನ್ನು ತಾವು ವೈದ್ಯರೆಂದು ಬಿಂಬಿಸಿಕೊಳ್ಳುವ ಸ್ವಘೋಷಿತ ನಕಲಿ ವೈದ್ಯರು, ದೂರದ ಪ್ರದೇಶಗಳಲ್ಲಿ ಚಿಕಿತ್ಸಾಲಯಗಳನ್ನು ತೆರೆದು ಜನರನ್ನು ವಂಚಿಸುತ್ತಿರುವುದು ವೇದ್ಯವಾಗುತ್ತದೆ' ಎಂದು ಪೀಠ ಕಳವಳ ವ್ಯಕ್ತಪಡಿಸಿದೆ.



ನೀಮಚ್‌ನ ಸಿಆರ್‌ಪಿಎಫ್ ಗ್ರೂಪ್ ಸೆಂಟರ್ ಪರೇಡ್ ಮೈದಾನದಲ್ಲಿ ಗುರುವಾರ ಸಿಆರ್‌ಪಿಎಫ್‌ನ 86ನೇ ಸಂಸ್ಥಾಪನಾ ದಿನದಂದು ಸೈನಿಕರನ್ನು ಉದ್ದೇಶಿಸಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಮಾತನಾಡಿದರು.

# ದಿನನಿತ್ಯದ ಅಗತ್ಯ ವಸ್ತುಗಳಿಗೆ ಅಭಾವ ರಾಜ್ಯಾದ್ಯಂತ ನಿಲ್ಲದ ಲಾರಿ ಮುಷ್ಕರ



**ಬೆಂಗಳೂರು ಏ.17–** ಡೀಸೆಲ್ ಬೆಲೆ ಏರಿಕೆ ವಿರೋಧಿಸಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ನಡೆಸುತ್ತಿರುವ ಲಾರಿ ಮುಷ್ಕರ 3ನೇ ದಿನಕ್ಕೆ ಕಾಲಿಟ್ಟಿದ್ದು ಸರಕು ಸಾಗಾಟದಲ್ಲಿ ಭಾರಿ ವ್ಯತ್ಯಯ ಕಂಡುಬಂದಿದ್ದು ಅಗತ್ಯ ವಸ್ತುಗಳ ಅಭಾವ ತಲೆದೋರಿದೆ. ಲಾರಿಗಳ ಅನಿರ್ದಿಷ್ಟಾವಧಿ ಮುಷ್ಕರದಿಂದ ರೈತರು, ವರ್ತಕರು ವಿವಿಧ ಉದ್ಯಮಿ ಗಳು ಸಂಕಷ್ಟಕ್ಕೆ ಈಡಾಗುವಂತಾಗಿದೆ.

ಹೊರ ರಾಜ್ಯಗಳಿಂದ ಬರುವ ಹಣ್ಣು, ತರಕಾರಿ, ಸೊಪ್ಪು,ದಿನನಿತ್ಯದ ಪದಾರ್ಥಗಳ ಮೇಲೆ ಭಾರಿ ಪರಿಣಾಮ ಬೀರಿದೆ. ಸರಕು ಸಾಗಣಿಕೆ ವಾಹನಗಳು ಸಂಪೂರ್ಣ ಸ್ಥಗಿತಗೊಂಡಿರುವುದರಿಂದ ಹಳ್ಳಿಗಳಿಂದ ಹಣ್ಣು, ತರಕಾರಿ ಮತ್ತಿತರ ವಸ್ತುಗಳು ಸಾಗಾಟವಾಗದೆ ಕೊಳೆಯತೊಡಗಿವೆ. ಎಲ್ಪಿಜಿ ಗ್ಯಾಸ್, ಗೃಹ ಬಳಕೆ ಗ್ಯಾಸ್, ಸೇರಿದಂತೆ ಅನೇಕ ಬಗೆಯ ಸರಕು ಸಾಗಾಣಿಕೆಯಲ್ಲಿ ವ್ಯತ್ಯಯವಾಗಿದೆ.

ಮುಷ್ಕರದಿಂದ ಮನೆ ನಿರ್ಮಾಣ ಕಾಮಗಾರಿಯ ಮೇಲೆ ವ್ಯತಿರಿಕ್ತ ಪರಿಣಾಮ ಬೀರಿದೆ. ಅಕ್ಕಿ,ಬೇಳೆ,ಎಣ್ಣೆ ಸೇರಿದಂತೆ ದಿನನಿತ್ಯ ಪದಾರ್ಥಗಳ ವಹಿವಾಟಿನ ಮೇಲೂ ಮುಷ್ಕರದ ಬಿಸಿ ತಟ್ಟಿದೆ.ಅಗತ್ಯ ವಸ್ತುಗಳ ಲಭ್ಯತೆ, ಇಂಧನ ಪೂರೈಕೆಯಲ್ಲಿ ಕೊರತೆ ಉಂಟಾಗುವ ಆತಂಕ ಎದುರಾಗಿದೆ.

ಡೀಸೆಲ್ ಹಾಗೂ ಟೋಲ್ ದರ ಇಳಿಕೆ ಮಾಡುವಂತೆ ಲಾರಿ ಮಾಲೀಕರು ಸರ್ಕಾರಕ್ಕೆ ಮನವಿ ಮಾಡಿ ಮುಖ್ಯಮಂತ್ರಿಯೊಂದಿಗೆ ಮಾತುಕತೆ ನಡೆಸಿದರೂ ಸಹ ಸರ್ಕಾರದಿಂದ ಯಾವುದೇ ಭರವಸೆ ಸಿಗದ ಹಿನ್ನೆಲೆಯಲ್ಲಿ ಲಾರಿ ಮಾಲೀಕರು ರಾಜ್ಯಾದ್ಯಂತ ಮುಷ್ಕರವನ್ನು ಮುಂದುವರೆಸಿದ್ದಾರೆ. ಪರಿಣಾಮ ರಾಜ್ಯದಲ್ಲಿ ಜನಸಾಮಾನ್ಯರ ಜೀವನದ ಮೇಲೆ ಗೂಡ್ಸ್ ಮುಷ್ಕರದ ಬಿಸಿ ತಟ್ಟಲಿದೆ.

ಲಾರಿ ಮುಷ್ಕರದ ಬಿಸಿ ನೆರೆಯ ಆಂಧ್ರಪ್ರದೇಶ, ತಮಿಳುನಾಡು,ಕೇರಳ ಹಾಗೂ ಗೋವಾ ರಾಜ್ಯಗಳಿಗೂ ತಟ್ಟಿದೆ. ಹೊರ ರಾಜ್ಯಗಳಿಂದ ಬರುತ್ತಿರುವ ಹಣ್ಣು, ತರಕಾರಿ, ವಿವಿಧ ಬಗೆಯ ಪದಾರ್ಥಗಳು ಸ್ಥಗಿತಗೊಂಡು ರೈತರು,ವರ್ತಕರು ಸಂಕಷ್ಟಕ್ಕೆ ಸಿಲುಕಿದ್ದಾರೆ.ಇಂದು ಮಧ್ಯಾಹ್ನ ಲಾರಿ ಮಾಲೀಕರು ಮತ್ತು ಏಜೆಂಟರ ಸಂಘದ ಅಧ್ಯಕ್ಷ ಜಿ.ಆರ್.ಷಣುಗಪ್ಪ ಮತ್ತು ಪದಾಧಿಕಾರಿಗಳು, ಸಾರಿಗೆ ಸಚಿವ ರಾಮಲಿಂಗ ರೆಡ್ಡಿ ರವರಿಗೆ ಮತ್ತೊಂದು ಸುತ್ತಿನ ಮಾತುಕತೆ ನಡೆಸಲಿದ್ದಾರೆ. ಬೇಡಿಕೆ ಈಡೇರದಿದ್ದರೆ ಹೋರಾಟವನ್ನು ತೀವ್ರಗೊಳಿಸುವ ಎಚ್ಚರಿಕೆ ನೀಡಿದ್ದಾರೆ.

ಗೂಡ್ಸ್ ವಾಹನಗಳು ಟ್ರಕ್ ಸೇರಿ 6 ಲಕ್ಷಕ್ಕೂ ಹೆಚ್ಚು ವಾಹನಗಳು ರಸ್ತೆಗೆ ಇಳಿದಿಲ್ಲ. ಚಾಲಕರು ಕ್ಲೀನರ್ ಅವಲಂಬಿತರು ಸೇರಿ ಲಕ್ಷಾಂತರ ಜನ ಲಾರಿಗಳನ್ನು ನಂಬಿ ಬದುಕುತ್ತಿದ್ದಾರೆ. ಸರ್ಕಾರ ಪದೇ ಪದೇ ಡೀಸೆಲ್ ದರ, ಟೋಲ್ ದರ ಹೆಚ್ಚಿಸುವುದು ಎಷ್ಟು ಸಮಂಜಸ ಅಲ್ಲದೆ ಟೋಲ್‌ಗಳಲ್ಲಿ ಆರ್‌ಟಿಓ ಅಧಿಕಾರಿಗಳ ಅನಗತ್ಯ ಕಿರುಕುಳ ತಪ್ಪಿಸಬೇಕೆಂದು ಲಾರಿ ಮಾಲೀಕರು ಒತ್ತಾಯಿಸಿದ್ದಾರೆ.

# ಡಾಗ್ ಬ್ರೀಡರ್ ಸತೀಶ್ ಮನೆಗೆ ಐಡಿ ರೇಡ್



**ಬೆಂಗಳೂರು ಏ.17–** ವಿಶ್ವದ ಅತಿ ದುಬಾರಿ ನಾಯಿ ಒಡೆಯ, ಡಾಗ್ ಬ್ರೀಡರ್ ಸತೀಶ್ ಮನೆ ಬೇಲೆ ಜಾರಿ ನಿರ್ದೇಶನಲಾಯದ– ಇಡಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

50 ಕೋಟಿ ರೂಪಾಯಿ ಕೊಟ್ಟು ವಿಶ್ವದ ಅತಿ ದುಬಾರಿ ಬೆಲೆಯ ಶ್ವಾನವನ್ನು ಖರೀದಿ ಮಾಡಿದ್ದೇನೆ ಎಂದು ಹೇಳಿಕೊಂಡಿದ್ದ ಸತೀಶ್, ಅವರ ಬೆಂಗಳೂರಿನ ನಿವಾಸದ ಮೇಲೆ ಇಡಿ ಅಧಿಕಾರಿಗಳು ದಾಳಿ ನಡೆಸಿ, ಪರಿಶೀಲನೆ ನಡೆಸಿದ್ದಾರೆ.

ಸತೀಶ್ ವಿರುದ್ಧ ಪ್ರಕರಣ ದಾಖಲಾದ ಹಿನ್ನೆಲೆಯಲ್ಲಿ ಇಂದು ಇಡಿ ದಾಳಿ ನಡೆಸಿದೆ.

ಈ ವೇಳೆ 50 ಕೋಟಿ ರೂಪಾಯಿ ಕೊಟ್ಟು ಸತೀಶ್ ನಾಯಿ ಖರೀದಿ ಮಾಡಿದ್ದು ಸುಳ್ಳು ಎಂಬುದು ಗೊತ್ತಾಗಿದೆ. ಕಾಡುತೋಳ ಮತ್ತು ಕಕೇಶಿಯನ್ ಶೆಫರ್ಡ್ ತಳಿಯ ಕ್ರಾಸ್ ಬ್ರೀಡ್ ಅವರ ಬಳಿ ಇರುವ ಶ್ವಾನ ಎಂದು ತಿಳಿದುಬಂದಿದೆ. ಕ್ಯಾಡಾಬೊಮ್ಸ್ ಹೇಡರ್ ಹೆಸರಿನ ಕಕೇಶಿಯನ್ ಶೆಫರ್ಡ್ ಬರೋಬ್ಬರಿ 100 ಕೆಜಿ ತೂಕವಿದೆ. ನೋಡಲು ಸಿಂಹದಂತೆ ಕಾಣುವ ಈಶ್ವಾನದ ತಲೆಯ ಗಾತ್ರ 38 ಇಂಚು, ಭುಜಗಳು 34 ಇಂಚುಗಳಿವೆ. ಶ್ವಾನದ ಕಾಲುಗಳು 2 ಲೀಟರ್ ಜ್ಯೂಸ್ ಬಾಟಲಿ ಗಾತ್ರದಷ್ಟು ದೊಡ್ಡದಾಗಿದೆ. ಕ್ಯಾಸ್ಪಿಯನ್ ಮತ್ತು ಕಪ್ಪು ಸಮುದ್ರ ಮಧ್ಯೆ ಇರುವ ಕಕೇಷ್ಯಾ ಪ್ರಾಂತ್ಯದ ಬಳಿ ಇರುವ ಕಕೇಷಯನ್ ಶಫರ್ಡ್ ಶ್ವಾನಗಳನ್ನು ಜಾನುವಾರುಗಳ ರಕ್ಷಣೆಗೆ ಸಾಕುತ್ತಾರೆ. ಈ ತಳಿಯ ಶ್ವಾನ ಜಾರ್ಜಿಯಾ, ಅರ್ಮೇನಿಯಾ, ಅಜೆರ್ಬೈಜಾನ್, ಒಸ್ಸೆಟಿಯಾ, ಸರ್ಕಾಸಿಯಾ, ಟರ್ಕಿ, ರಷ್ಯಾ ದೇಶಗಳಲ್ಲಿ ಕಂಡುಬರುತ್ತವೆ. ಭಾರತದಲ್ಲಿ ಈ ತಳಿಯ ನಾಯಿಗಳು ನೋಡಲು ಸಿಗುವುದು ಅಪರೂಪ ಎಂದು ಈ ಹಿಂದೆ ಸತೀಶ್ ಸಾಮಾಜಿಕ ಜಾಲತಾಣಗಳಲ್ಲಿ ಹೇಳಿಕೊಂಡಿದ್ದರು.

# ಕೇಂದ್ರ ಸರ್ಕಾರದ ಬೆಲೆ ಏರಿಕೆ ನೀತಿ ವಿರೋಧಿಸಿ ಸುರ್ಜೇವಾಲ ಕಿಡಿ

**ಬೆಂಗಳೂರು ಏ.17–** ಕೇಂದ್ರ ಬಿಜೆಪಿ ಸರ್ಕಾರದ ಬೆಲೆ ಏರಿಕೆ ನೀತಿಯಿಂದ ಜನಸಾಮಾನ್ಯರು ತತ್ತರಿಸಿ ಹೋಗಿದ್ದಾರೆ. ಕೇಂದ್ರದಲ್ಲಿ ಬಿಜೆಪಿ ಜಾಲಿ ಜಾಲಿ, ಜನಸಾಮಾನ್ಯರ ಜೇಬು ಖಾಲಿ ಖಾಲಿ, ನಗರ, ಗ್ರಾಮ ಪ್ರದೇಶದ ಎಲ್ಲಾ ಜನರು ಬಸವಳಿದು ಹೋಗಿದ್ದಾರೆ. ಎಂದು ಎಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣಧೀರ್ ಸಿಂಗ್ ಸುರ್ಜೆವಾಲ ಹೇಳಿದರು.

ಫ್ರೀಡಂ ಪಾರ್ಕ್ ನಲ್ಲಿ ಕೇಂದ್ರ ಸರ್ಕಾರದ ವಿರುದ್ಧ ರಾಜ ಕಾಂಗ್ರೆಸ್ ನಡೆಸಿದ ಪ್ರತಿಭಟನೆ ಹೋರಾಟದಲ್ಲಿ ಮಾತನಾಡಿದ ಅವರು. ಕೇಂದ್ರ ಸರ್ಕಾರ ಪೆಟ್ರೋಲ್, ಡೀಸೆಲ್ ಬೆಲೆಯನ್ನು 2 ರೂಪಾಯಿ, ಅಡುಗೆ ಸಿಲಿಂಡರ್ ಬೆಲೆ 50 ರೂಪಾಯಿ ಜಾಸ್ತಿ ಮಾಡಿ ಬರೆ ಹಾಕಿದೆ. ಜನವರಿ 1ನೇ ತಾರೀಕು 2014ರಲ್ಲಿ ಗ್ಯಾಸ್ ಸಿಲಿಂಡರ್ ಬೆಲೆ ರೂ. 414 ಇತ್ತು. ಆದರೆ ಇಂದು ದುಪ್ಪಟ್ಟಾಗಿದೆ. ಬೆಂಗಳೂರಿನಲ್ಲಿ ರೂ. 855 ಆಗಿದೆ. ಕಾಂಗ್ರೆಸ್ ಸರ್ಕಾರದ ವೇಳೆಯಲ್ಲಿ ಏಕೆ ಸಿಲಿಂಡರ್ ಬೆಲೆ ಕಡಿಮೆಯಿತ್ತು ಎಂದರೆ ನಮ್ಮ ಸರ್ಕಾರ ಸುಮಾರು ರೂ.52 ಸಾವಿರ ಕೋಟಿಯನ್ನು ಸಬ್ಸಿಡಿ ಎಂದು ನೀಡುತ್ತಿತ್ತು ಎಂದರು.

ಬಿಜೆಪಿ ಸರ್ಕಾರ ಸಬ್ಸಿಡಿಯನ್ನು ರೂ.10 ಸಾವಿರ ಕೋಟಿಗೆ ಇಳಿಸಿತು. ಈ ಕಾರಣಕ್ಕೆ ಬೆಲೆ ಏರಿಕೆಯಾಗಿದೆ. ಇದು ಪ್ರಧಾನಿ ಮೋದಿ ಅವರ ಸಾಧನೆ. ಮೋದಿ ಸರ್ಕಾರ ಗ್ಯಾಸ್ ಸಿಲಿಂಡರ್ ಬೆಲೆಯನ್ನು 50 ರೂಪಾಯಿ ಹೆಚ್ಚಳ ಮಾಡಿದ ಕಾರಣಕ್ಕೆ ರೂ.9.5 ಸಾವಿರ ಕೋಟಿಗೂ ಹೆಚ್ಚು ಹಣವನ್ನು ಬಡವರಿಂದ, ಕೂಲಿ ಕಾರ್ಮಿಕರಿಂದ, ಜನಸಾಮಾನ್ಯರಿಂದ ಲೂಟಿ ಮಾಡುತ್ತಿದೆ. 181 ಕೋಟಿ ಸಿಲಿಂಡರ್ ಗಳು ಪ್ರತಿವರ್ಷ ಮಾರಾಟವಾಗುತ್ತವೆ.ಪ್ರತಿ ಸಿಲಿಂಡರ್ ಮೇಲೆ 50 ರೂಪಾಯಿ ಹೆಚ್ಚಳ ಮಾಡಿದರೆ ಎಷ್ಟು ಲೂಟಿ ಮಾಡುತ್ತಿರಬಹುದು ಎಂಬುದನ್ನು ನೀವು ಊಹಿಸಿ. ಕರ್ನಾಟಕದಲ್ಲಿ ಪ್ರತಿವರ್ಷ 10 ಕೋಟಿ 36 ಲಕ್ಷ ಸಿಲಿಂಡರ್ ಗಳು ಮಾರಾಟವಾಗುತ್ತವೆ. ಬೆಲೆಹೆಚ್ಚಳದಿಂದ ಪ್ರತಿವರ್ಷ ರೂ.500 ಕೋಟಿ ಹಣ ಕನ್ನಡಿಗರ ಮೇಲೆ ಬೀಳುತ್ತಿದೆ ಎಂದರು.

ಕಳೆದ 10 ವರ್ಷಗಳಲ್ಲಿ ಮೋದಿ ಸರ್ಕಾರ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆಯಿಂದ ಸುಮಾರು 34 ಲಕ್ಷ ಕೋಟಿ ಹಣವನ್ನು ಲೂಟಿ ಮಾಡಿದೆ. ಕೇಂದ್ರ ಸರ್ಕಾರ ಅಬಕಾರಿ ಸುಂಕವನ್ನು ಪೆಟ್ರೋಲ್, ಡೀಸೆಲ್ ಮೇಲೆ ಹಾಕುತ್ತಿದೆ. ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿ ಇದ್ದಾಗ ಡೀಸೆಲ್ ಮೇಲಿನ ಅಬಕಾರಿ ಸುಂಕ ರೂ.3.14 ಪೈಸೆ ಮಾತ್ರ ಸಂಗ್ರಹ ಮಾಡುತ್ತಿತ್ತು. ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣ ಇದನ್ನು ರೂ.15. 80 ಪೈಸೆ ಹೆಚ್ಚು ಮಾಡಿ ಸುಲಿಗೆ ಮಾಡಲಾಗುತ್ತಿದೆ. ಆಟೋ ರಿಕ್ಷಾ ಡ್ರೈವರ್ ಗಳು, ಟ್ರಕ್ ಚಾಲಕರು ಈ ಹಣವನ್ನು ಲೂಟಿ ಮಾಡಲಾಗುತ್ತಿದೆ.




ಪೆಟ್ರೋಲ್ ಮೇಲಿನ ಅಬಕಾರಿ ಸುಂಕ ರೂ.9.20 ಪೈಸೆ ಮಾತ್ರ. ಮೋದಿ ಸರ್ಕಾರ ಇದನ್ನು ರೂ.19.90 ಪೈಸೆಗೆ ಜಾಸ್ತಿ ಮಾಡಿದೆ. ಪ್ರತಿ ಬಾರಿಯೂ ನೀವು ನಿಮ್ಮ ಬೈಕ್, ಕಾರನ್ನು ಓಡಿಸಿದಾಗಲೂ ಪ್ರತಿಲೀಟರ್‌ಗೆ 20 ರೂಪಾಯಿಯನ್ನು ಕೇಂದ್ರ ಸರ್ಕಾರಕ್ಕೆ ನೀಡುತ್ತೀರಿ. ಯುಪಿಯ ಸರ್ಕಾರದ ಅವಧಿಯಲ್ಲಿ ಕಚ್ಚಾ ತೈಲದ ಬೆಲೆ 108 ಡಾಲರ್ ಇತ್ತು. ಇಂದು 66 ಡಾಲರ್ ಆಗಿದೆ. ಆದರೂ ಬೆಲೆಯನ್ನು ಇಳಿಕೆ ಮಾಡುತ್ತಿಲ್ಲ. ಎಂದು ಟೀಕಿಸಿದರು. ಕರ್ನಾಟಕವೊಂದರಲ್ಲೇ 690 ಕೋಟಿ ಲೀಟರ್ ಪೆಟ್ರೋಲ್ ಅನ್ನು ಬಳಕೆ ಮಾಡಲಾಗುತ್ತಿದೆ. ರೈತರು, ಟ್ರಕ್ ಮಾಲೀಕರು ಪ್ರತಿವರ್ಷ 1613 ಕೋಟಿ ಡೀಸೆಲ್ ಅನ್ನು ಬಳಕೆ ಮಾಡಲಾಗುತ್ತಿದೆ.

ಎರಡು ರೂಪಾಯಿ ಹೆಚ್ಚಳ ಮಾಡಿರುವ ಕಾರಣಕ್ಕೆ ರೂ.4,453 ಸಾವಿರ ಕೋಟಿ ಹಣವನ್ನು ಜನರ ಜೇಬಿನಿಂದ ಲೂಟಿ ಮಾಡಲಾಗುತ್ತಿದೆ. ಗ್ಯಾಸ್ ಹಾಗೂ ತೈಲ ಬೆಲೆ ಏರಿಕೆಯಿಂದ ಒಟ್ಟು ರೂ. 5,090 ಸಾವಿರ ಕೋಟಿ ಲೂಟಿ ಮಾಡಲಾಗುತ್ತಿದೆ. ದೇಶದ ಜಿಡಿಪಿ ಜಾಸ್ತಿಯಾಗುತ್ತಿಲ್ಲ. ಆದರೆ ಬೆಲೆ ಏರಿಕೆ ಮಾತ್ರ ಜಾಸ್ತಿಯಾಗುತ್ತಿದೆ. ದೇಶದ ಜನರು ರೂ.50 ಸಾವಿರ ಕೋಟಿ ಹಣವನ್ನು ಹೆಚ್ಚುವರಿಯಾಗಿ ನೀಡುತ್ತಿದ್ದಾರೆ. ಇದರಲ್ಲಿ ನಮ್ಮ ಕನ್ನಡಿಗರ ಪಾಲು 5 ಸಾವಿರ ಕೋಟಿ. ಬಿಜೆಪಿ, ಜೆಡಿಎಸ್ ಸಂಸದರು ಯಾವ ನೈತಿಕತೆ ಇಟ್ಟುಕೊಂಡು ಸಚಿವ ಸ್ಥಾನ ಅನುಭವಿಸುತ್ತಾ ಇದ್ದಾರೆ.

ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಮೂಲಕ 53 ಸಾವಿರ ಕೋಟಿ ನೀಡುತ್ತಾ ಇದ್ದೇವೆ. ಇದರಿಂದ 5 ಸಾವಿರ ಕೋಟಿಯನ್ನು ಕೇಂದ್ರ ಸರ್ಕಾರ ಕದಿಯುತ್ತಿದೆ. ಕೇಂದ್ರ ಸರ್ಕಾರ ಬೆಲೆ ಏರಿಕೆಯನ್ನು ವಾಪಸ್ ಪಡೆಯಬೇಕು ಎಂದು ಒತ್ತಾಯಿಸಿದರು.

# ಸರ್ಕಾರಿ ಪಿಯು ಕಾಲೇಜಿನ ಕೇಂದ್ರಕ್ಕೆ ಎಚ್.ಪ್ರಸನ್ನ ಭೇಟಿ



**ಬೆಂಗಳೂರು ಏ.17–**ಸಾಮಾನ್ಯ ಪ್ರವೇಶ ಪರೀಕ್ಷೆ (ಸಿಇಟಿ) ನಡೆಯುತ್ತಿರುವ ಬೆಂಗಳೂರಿನ ಮಲ್ಲೇಶ್ವರದ 18ನೇ ಅಡ್ಡರಸ್ತೆಯ ಸರ್ಕಾರಿ ಪಿಯು ಕಾಲೇಜಿನ ಕೇಂದ್ರಕ್ಕೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ಅವರು ಇಂದು ಖುದ್ದು ಭೇಟಿ ನೀಡಿ ಪರಿಶೀಲಿಸಿದರು.

ಕೆಇಎ ಅಭಿವೃದ್ಧಿಪಡಿಸಿರುವ ಹಾಗೂ ಇದೇ ಮೊದಲ ಬಾರಿಗೆ ಜಾರಿಗೆ ತಂದಿರುವ ಕ್ಯೂಆರ್ ಕೋಡ್ ಮೂಲಕ ಮುಖ ಚಹರೆ ಪತ್ತೆ ವ್ಯವಸ್ಥೆಯನ್ನು ಪರಿಶೀಲಿಸಿದರು. ಸ್ವತಃ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ವಿದ್ಯಾರ್ಥಿಗಳ ಭಾವಚಿತ್ರ ತೆಗೆದು ನೈಜತೆ ಪರಿಶೀಲಿಸಿದರು. ಇಂದು ಬೆಳಿಗ್ಗೆಯಿಂದಲೇ ಈ ವ್ಯವಸ್ಥೆ ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸಿದ್ದು, ಎಲ್ಲ ಅಭ್ಯರ್ಥಿಗಳ ನೈಜತೆಯನ್ನು ಇದರ ಮೂಲಕವೇ ಪರಿಶೀಲಿಸಿ, ಅಭ್ಯರ್ಥಿಗಳನ್ನು ಒಳಗೆ ಬಿಡಲಾಗಿದೆ ಎಂದು ಎಚ್.ಪ್ರಸನ್ನ ತಿಳಿಸಿದರು.ಈ ಸಂದರ್ಭದಲ್ಲಿ ಕೆಇಎ ಆಡಳಿತಾಧಿಕಾರಿ ಇಸ್ಲಾವುದ್ದೀನ್ ಗದ್ಯಾಳ ಅವರು ಕೂಡ ಹಾಜರಿದ್ದರು.

ಮೊದಲ ದಿನವಾದ ನಿನ್ನೆ ಸಾಮಾನ್ಯ ಪ್ರವೇಶ ಪರೀಕ್ಷೆಯು ಎಲ್ಲ 775 ಕೇಂದ್ರಗಳಲ್ಲಿ ಸುಸೂತ್ರವಾಗಿ ನಡೆಯಿತು. ಪ್ರವೇಶ ಪತ್ರ ಡೌನ್ ಲೋಡ್ ಮಾಡಿಕೊಂಡಿದ್ದ ಒಟ್ಟು 3,21,895 ವಿದ್ಯಾರ್ಥಿಗಳ ಪೈಕಿ 3,11,777 ಮಂದಿ (ಶೇ. 94.20ರಷ್ಟು) ಪರೀಕ್ಷೆಗೆ ಹಾಜರಾಗಿದ್ದರು.

ಬೆಳಗಿನ ಅವಧಿಯಲ್ಲಿ ನಡೆದ ಭೌತವಿಜ್ಞಾನ ಪತ್ರಿಕೆಗಿಂತ ಮಧ್ಯಾಹ್ನ ನಡೆದ ರಸಾಯನವಿಜ್ಞಾನ ಪತ್ರಿಕೆಯನ್ನು 183 ಮಂದಿ ಹೆಚ್ಚಿಗೆ ಬರೆದಿದ್ದಾರೆ ಎಂದು ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಇಂದು ಬೆಳಗಿನ ಅವಧಿಯಲ್ಲಿ ಗಣಿತ ಪರೀಕ್ಷೆ ನಡೆದಿದ್ದು, ಮಧ್ಯಾಹ್ನ ಜೀವವಿಜ್ಞಾನ ಪತ್ರಿಕೆಯ ಪರೀಕ್ಷೆ ನಡೆಯಿತು.

# ಜಾತಿಗಣತಿ ಮಾಡುವ ಅಧಿಕಾರ ರಾಜ್ಯ ಸರ್ಕಾರಕ್ಕೆ ಇಲ್ಲ: ಎ.ಮಂಜು ಸವಾಲು



**ಬೆಂಗಳೂರು ಏ.17–**ರಾಜ್ಯದಲ್ಲಿ ಸದ್ಯ ಜಾತಿಗಣತಿ ಜಟಾಪಟಿ ನಡೆಯುತ್ತಿದ್ದು, ಕೆಲ ಕಾಂಗ್ರೆಸ್ ನಾಯಕರು ಕೂಡ ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ಈ ನಡುವೆ ಜೆಡಿಎಸ್ ಶಾಸಕ ಎ.ಮಂಜು ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಚಾಲೆಂಜ್ ಮಾಡಿದ್ದಾರೆ.

ನಗರದಲ್ಲಿ ಮಾಧ್ಯಮವೊಂದರ ಜೊತೆ ಮಾತನಾಡಿದ ಅವರು, ಜಾತಿ ಜನಗಣತಿ ಮಾಡುವ ಅಧಿಕಾರ ರಾಜ್ಯ ಸರ್ಕಾರಕ್ಕೆ ಇಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನನಗೆ ಜಾತಿ ಜನಗಣತಿ ಮಾಡಲು ಅಧಿಕಾರ ಇದೆ ಎಂದು ಹೇಳಲಿ, ಆ ಕೂಡಲೇ ಶಾಸಕ ಸ್ಥಾನಕ್ಕೆ ನಾನು ರಾಜೀನಾಮೆ ಕೊಡುತ್ತೇನೆ ಎಂದರು.ಈ ಸರ್ಕಾರಕ್ಕೆ ಜಾತಿ ಜನಗಣತಿ ಮಾಡಲು ಅಧಿಕಾರ ಕೊಟ್ಟವರು ಯಾರು? ಜಾತಿ ಜನಗಣತಿ ಮಾಡಬೇಕಿದ್ದು ಕೇಂದ್ರ ಸರ್ಕಾರ. ಇದು ಜಾತಿಗಣತಿ ಅಲ್ಲ. ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ. ನನ್ನ ಮನೆಗೆ ಬಂದು ಸಮೀಕ್ಷೆಯೇ ಮಾಡಿಲ್ಲ. ಇದಕ್ಕೇನು ಹೇಳೋದು? ಜಯಪ್ರಕಾಶ್ ಹೆಗ್ಡೆ ಇದನ್ನ ಜಾತಿ ಸಮೀಕ್ಷೆ ಅಂತ ಹೇಳಲಿ ನೋಡೋಣ ಎಂದರು.ಈ ಜಾತಿ ಜನಗಣತಿ ವಿರುದ್ಧ ಬಿಜೆಪಿ, ಜೆಡಿಎಸ್, ಕಾಂಗ್ರೆಸ್ ಎಲ್ಲಾ ಒಕ್ಕಲಿಗ ಶಾಸಕರು ಪಕ್ಷಾತೀತವಾಗಿ ಧ್ವನಿ ಎತ್ತಬೇಕು. ನಮ್ಮ ಸಮುದಾಯಕ್ಕೆ ಅನ್ಯಾಯ ಆದ್ರೆ ನಾವು ಸಹಿಸಲ್ಲ. ನನಗೆ ಸಮುದಾಯದ ಮುಖ್ಯ, ಶಾಸಕ ಸ್ಥಾನ ಮುಖ್ಯ ಅಲ್ಲ. ಸಮುದಾಯಕ್ಕಾಗಿ ಶಾಸಕ ಸ್ಥಾನಕ್ಕೂ ರಾಜೀನಾಮೆ ಕೊಡೋಕೆ ಸಿದ್ಧ. ಡಿ.ಕೆ.ಶಿವಕುಮಾರ್ ಸಮುದಾಯಕ್ಕೆ ಅನ್ಯಾಯ ಮಾಡಲು ಬಿಡಬಾರದು. ಇವತ್ತಿನ ಕ್ಯಾಬಿನೆಟ್ನಲ್ಲಿ ಇದನ್ನ ಅಂಗೀಕಾರ ಮಾಡಿದ್ರೆ ಉಗ್ರ ಹೋರಾಟ ಮಾಡ್ತೀವಿ ಎಂದು ಶಾಸಕರು ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ.

# ಬಿಎಂಟಿಸಿ ಬಸ್‌ಗೆ ಅಡ್ಡಗಟ್ಟಿ ನಿಂತ ಕಾಡಾನೆಗಳು

**ಬೆಂಗಳೂರು ಏ.17–** ಇತ್ತೀಚಿನ ದಿನಗಳ ಕಾಡಾನೆಗಳು ನಾಡಿಗೆ ಬಂದು ದಾಳಿ ನಡೆಸುತ್ತಿರುವ ಘಟನೆ ಹೆಚ್ಚುತ್ತಿದೆ.

ಕಾಡಾನೆಗಳ ಹಿಂಡೊಂದು ಬಿಎಂಟಿಸಿ ಬಸ್‌ಗೆ ಅಡ್ಡಟ್ಟಿದ ಘಟನೆ ಬೆಂಗಳೂರಿನ ಕನಕಪುರ ರಸ್ತೆಯಲ್ಲಿ ನಡೆದಿದೆ. ಕನಕಪುರ ರಸ್ತೆಯ ಕಗ್ಗಲೀಪುರ ಬಳಿ ಗುಲ್ಲಹಟ್ಟಿ ಗ್ರಾಮದಲ್ಲಿ ಕಾಡಾನೆಗಳ ಹಿಂಡು ಬಿಎಂಟಿಸಿ ಬಸ್ ಗೆ ಅಡ್ಡಗಟ್ಟಿದೆ. ಕಂಗಾಲಾದ ಬಸ್ ಚಾಲಕ, ಪ್ರಯಾಣಿಕರು ಜೀವ ಭಯದಲ್ಲಿ ಕೆಲಕಾಲ ಪರದಾಡಿದ್ದಾರೆ. ರಸ್ತೆ ಮಧ್ಯೆಯೇ ಕಾಡಾನೆಯೊಂದು ಬಸ್‌ನ್ನು ಅಡ್ಡಗಟ್ಟಿ ನಿಲ್ಲಿಸಿದೆ. ಬಸ್ ಸುತ್ತ ಒಂದು ಸುತ್ತು ಹೊಡೆದಿದೆ. ಬಸ್‌ನಲ್ಲಿದ್ದ ಪ್ರಯಾಣಿಕರು ಉಸಿರು

# ಬಿಬಿಎಂಪಿ ವ್ಯಾಪ್ತಿಯಲ್ಲಿ ಕಸ ಸುರಿಯುವ ಸಂಖ್ಯೆ ಗಣನೀಯ ಇಳಿಕೆ



**ಬೆಂಗಳೂರು, ಏ.17–** ಕಳೆದ ಕೆಲವು ವರ್ಷಗಳಿಂದ ಬಿಬಿಎಂಪಿ ವ್ಯಾಪ್ತಿಯಲ್ಲಿ 'ಬ್ಲಾಕ್ ಸ್ಪಾಟ್'ಗಳ (ಎಲ್ಲೆಂದರಲ್ಲಿ ಕಸ ಸುರಿಯುವ ಜಾಗಗಳು) ಸಂಖ್ಯೆ ಗಣನೀಯ ಇಳಿಕೆಯಾಗಿದೆ.

ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಲಿಮಿಟೆಡ್ ದತ್ತಾಂಶದ ಪ್ರಕಾರ ನಗರಾದ್ಯಂತ ಬ್ಲಾಕ್ ಸ್ಪಾಟ್‌ಗಳ ಸಂಖ್ಯೆ ವರ್ಷದಿಂದ ವರ್ಷಕ್ಕೆ ಇಳಿಕೆ ಹಾದಿಯಲ್ಲಿ ಸಾಗಿರುವುದು ಕಂಡು ಬಂದಿದೆ.ಮಾರ್ಷಲ್ಗಳ ಕಣ್ಗಾವಲು ಮತ್ತು ವಾರ್ಡ್ ಮಟ್ಟದ ಮೇಲ್ವಿಚಾರಣೆ ಯಂತಹ ಕ್ರಮಗಳ ಹಿನ್ನೆಲೆ ಯಲ್ಲಿ ಕಳೆದ 6 ವರ್ಷಗಳಲ್ಲಿ ಬಿಬಿಎಂಪಿ ವ್ಯಾಪ್ತಿಯಲ್ಲಿ ಬ್ಲಾಕ್ಸ್ಪಾಟ್ಗಳ ಸಂಖ್ಯೆ ಶೇ.60ರಷ್ಟು ಕಡಿಮೆಯಾಗಿದೆ. ಈ ಹಿಂದೆ ಅಂದರೆ 2019ರಲ್ಲಿ ಬಿಬಿಎಂಪಿ ವ್ಯಾಪ್ತಿಯಲ್ಲಿ 1,920 ಬ್ಲಾಕ್ಸ್ಪಾಟ್ ಪ್ರಕರಣಗಳು ಕಂಡು ಬಂದಿದ್ದವು. 2024ರಲ್ಲಿ ಈ ಸಂಖ್ಯೆ 740ಕ್ಕೆ ಇಳಿಕೆಯಾಗಿದೆ. ಒಟ್ಟಾರೆ ಪಾಲಿಕೆ ವ್ಯಾಪ್ತಿಯಲ್ಲಿ ಎಲ್ಲೆಂದ?ರ?ಲ್ಲಿ ಕಸ ಸುರಿಯುವುದಕ್ಕೆ ಲಗಾಮು ಹಾಕುವಲ್ಲಿ ಬಿಬಿಎಂಪಿ ಯಶಸ್ವಿಯಾಗುತ್ತಿದೆ.

ರಾಜರಾಜೇಶ್ವರಿನ ನಗರ, ಯಲಹಂಕ, ದಾಸರಹಳ್ಳಿ ಮತ್ತು ಬೊಮ್ಮನಹಳ್ಳಿ ವಲಯಗಳಲ್ಲಿ ಎಲ್ಲೊಂದರಲ್ಲಿ ಕಸ ಸುರಿಯುವ ಪ್ರವೃತ್ತಿ ಮತ್ತಷ್ಟು ಕ್ಷೀಣವಾಗಿದೆ. 2019ರಲ್ಲಿದ್ದ 1,920 ಬ್ಲಾಕ್ಸ್ಪಾಟ್ ಸಂಖ್ಯೆ 2020ರಲ್ಲಿ 1,615ಕ್ಕೆ ಇಳಿದಿದೆ. ಇದು ಈ ಹಿಂದಿನ ವರ್ಷಕ್ಕೆ ತುಲನೆ ಮಾಡಿ ನೋಡಿದಾಗ ಶೇ.16ರಷ್ಟು ಇಳಿಕೆಯಾಗಿರುವುದು ಕಂಡು ಬಂದಿದೆ. 2021ರಲ್ಲಿ 1,403 ಬ್ಲಾಕ್ ಸ್ಪಾಟ್ಗಳು ದಾಖಲಾಗಿದ್ದು, ಈ ಅಂಕಿ ಅಂಶವನ್ನು 2020ಕ್ಕೆ ಹೋಲಿಕೆ ಮಾಡಿದಾಗ ಶೇ.13ರಷ್ಟು ಇಳಿಕೆಯಾಗಿ ರುವುದು ಗೊತ್ತಾಗುತ್ತದೆ.

**ಸದ್ಯ 520 ಬ್ಲಾಕ್ ಸ್ಪಾಟ್‌ಗಳು:** 2022ರಲ್ಲಿ 'ಬ್ಲಾಕ್ ಸ್ಪಾಟ್' ಪ್ರಕರಣಗಳ ಸಂಖ್ಯೆ (1,356)ಶೇ.3.4ರಷ್ಟು ಇಳಿಕೆಯಾಯಿತು. 2023ರಲ್ಲಿ(1,010) ಮತ್ತಷ್ಟು ಕುಸಿತಾಗಿದ್ದು, ಎಲ್ಲೆಂದರಲ್ಲಿ ಕಸ ಸುರಿಯುವ ಪ್ರವೃತ್ತಿಯ ಸಂಖ್ಯೆ ಶೇ.25ರಷ್ಟು ಇಳಿಕೆಯಾಗಿದೆ. ಪಾಲಿಕೆ ದತ್ತಾಂಶದಂತೆ 2024ರಲ್ಲಿ ಬ್ಲಾಕ್ ಸ್ಪಾಟ್ಗಳ ಸಂಖ್ಯೆ 740 ಇಳಿದಿದೆ. ಈ ಬಾರಿ ವಾರ್ಷಿಕ ಒಟ್ಟು 1,000ಕ್ಕಿಂತಲೂ ಕಡಿಮೆ ಪ್ರಕರಣ ದಾಖಲಾಗಬಹುದು ಎಂದು ಅಂದಾಜಿಸಲಾಗಿದೆ.

ಬಿಎಸ್‌ಡಬ್ಲ್ಯೂಎಂಎಲ್ ಪ್ರಕಾರ, ಈ ವರ್ಷದ ಏಪ್ರಿಲ್ ಅಂತ್ಯದ ವರೆಗೆ ಬಿಬಿಎಂಪಿ ವ್ಯಾಪ್ತಿ ವ್ಯಾಪ್ತಿಯಲ್ಲಿ 520 ಬ್ಲಾಕ್ ಸ್ಪಾಟ್ ಪ್ರಕರಣಗಳು ದಾಖಲಾಗಿವೆ. ಪೂರ್ವ ವಲಯದಲ್ಲಿ ಅತಿ ಕಡಿಮೆ: ಹೆಬ್ಬಾಳ, ಶಿವಾಜಿನಗರ ಮತ್ತು ಶಾಂತಿನಗರ ದಂತಹ ವಿಭಾಗಗಳನ್ನು ಒಳ ಗೊಂಡಿರುವ ಪೂರ್ವ ವಲಯದಲ್ಲಿ ಈ ಹಿಂದೆ ಅಂದರೆ 2019ರಲ್ಲಿ 362 ಬ್ಲಾಕ್ಸ್ಪಾಟ್ ಸಂಖ್ಯೆಗಳು ಕಂಡು ಬಂದಿದ್ದವು. 2024ರಲ್ಲಿ ಈ ಸಂಖ್ಯೆ 116ಕ್ಕೆ ಕುಸಿತವಾಗಿದೆ.

ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಲಿಮಿಟೆಡ್ ಅಧಿಕಾರಿಗಳು ತ್ಯಾಜ್ಯ ನಿರ್ವಹಣೆ ಸಂಬಂಧ ತೆಗೆದುಕೊಂಡಿರುವ ಪ್ರಜ್ಞಾಪೂರ್ವಕ ಪ್ರಯತ್ನಗಳು ಇದಕ್ಕೆ ಕಾರಣವಾಗಿದೆ ಎಂದು ಬಿಬಿಎಂಪಿ ಹಿರಿಯ ಅಧಿಕಾರಿಗಳು ತಿಳಿಸಿದ್ದಾರೆ. ಪೂರ್ವ, ಪಶ್ಚಿಮ, ದಕ್ಷಿಣ ಮತ್ತು ಮಹದೇವಪುರ ವಲಯಗಳಲ್ಲಿ ಗಮನಾರ್ಹ ರೀತಿಯಲ್ಲಿ ಸುಧಾರಣ ಯಾಗಿದೆ. 2009ರಲ್ಲಿ ಪೂರ್ವ ವಲಯದಲ್ಲಿ 410, ಮಹದೇವಪುರದಲ್ಲಿ 356, ಪಶ್ಚಿಮ ವಲಯದಲ್ಲಿ 362 ಮತ್ತು ದಕ್ಷಿಣ ವಲಯದಲ್ಲಿ 300 ಪ್ರಕರಣಗಳು ಕಂಡು ಬಂದಿದ್ದವು. 2024ರಲ್ಲಿ ಈ ಪ್ರಕರಣ ಮತ್ತಷ್ಟು ಕುಸಿತವಾಯಿತು. ಪೂರ್ವ ವಲಯದಲ್ಲಿ 141 ಮಹದೇವಪುರದಲ್ಲಿ 171, ಪಶ್ಚಿಮ ವಲಯದಲ್ಲಿ 116 ಮತ್ತು ದಕ್ಷಿಣದಲ್ಲಿ 105 ಪ್ರಕರಣಗಳು ದಾಖಲಾಗಿವೆ ಎಂದು ಹೇಳಿದ್ದಾರೆ. ಆರ್.ಆರ್.ನಗರ, ಯಲಹಂಕ, ದಾಸರಹಳ್ಳಿಯಲ್ಲಿ ಸುಧಾರಣೆ: ರಾಜರಾಜೇಶ್ವರಿ ನಗರ, ಯಲಹಂಕ ಮತ್ತು ದಾಸರಹಳ್ಳಿ ವಲಯದಲ್ಲಿ ಬ್ಲಾಕ್ಸ್ಪಾಟ್ ಪ್ರಕರಣ ಸಂಖ್ಯೆ ಎರಡಂಕಿಗೆ ತಲುಪಿದೆ. 2019ರಲ್ಲಿ ಆರ್.ಆರ್. ನಗರದಲ್ಲಿ 164 ಬ್ಲಾಕ್ ಸ್ಪಾಟ್ಗಳು ಇದ್ದವು. 2024ರಲ್ಲಿ ಈ ಸಂಖ್ಯೆ 53ಕ್ಕೆ ಇಳಿಕೆ?ಯಾಗಿದ್ದು, ಗಮನಾರ್ಹ ಸುಧಾರಣೆ ತೋರಿಸುತ್ತದೆ. ದಾಸರಹಳ್ಳಿ ವಲಯದಲ್ಲಿ 2019ರಲ್ಲಿ 71 ಪ್ರಕರಣಗಳಿದ್ದು, 2024ರಲ್ಲಿ ಈ ಸಂಖ್ಯೆ 22ಕ್ಕೆ ಇಳಿಕೆಯಾಗಿದೆ. ಅಂದರೆ ಈ ಪ್ರದೇಶದಲ್ಲಿ ಶೇ.69ರಷ್ಟು ಸುಧಾರಣೆ ಕಂಡು ಬಂದಿದೆ. ದಾಸರಹಳ್ಳಿಯಲ್ಲಿ ಮಾರುಕಟ್ಟೆ ಪ್ರದೇಶವಿರುವುದರಿಂದ ಬ್ಲಾಕ್ ಸ್ಪಾಟ್ಗಳು ಹೆಚ್ಚಾಗಿದ್ದವು. ಖಾಲಿ ಪ್ರದೇಶಗಳಲ್ಲಿ ಜನರು ಕಸ ಸುರಿಯುತ್ತಿದ್ದರು. ಆದರೆ ಈಗ ಆ ಭಾಗದ ಜನರಲ್ಲಿ ಅರಿವು ಬಂದಿದ್ದು ಎಲ್ಲೊಂದರಲ್ಲಿ ಕಸ ಸರಿಯುವುದ ಕಡಿಮೆ ಆಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪಶ್ಚಿಮ ವಲಯದಲ್ಲಿ 2019ರಲ್ಲಿ 410 ಬ್ಲಾಕ್‌ಸ್ಪಾಟ್‌ಗಳು ಇದ್ದವು. ಈಗ ಆ ಸಂಖ್ಯೆ 141ಕ್ಕೆ ಇಳಿದಿದೆ. ಗಾಂಧಿನಗರ, ಗೋವಿಂದ ರಾಜ ನಗರ ಮತ್ತು ರಾಜಾಜಿ ನಗರದಲ್ಲಿ ಸುಧಾರಣೆ ಕಂಡುಬಂದಿದೆ. ಬೊಮ್ಮನ ಹಳ್ಳಿ ವಲಯದಲ್ಲಿ ಕೂಡ 168 ರಿಂದ 60ಕ್ಕೆ ಕುಸಿತವಾಗಿದೆ.

# ಕರ್ನಾಟಕ ಆರ್ಯವೈಶ್ಯ ಮಹಾಸಭಾ ವತಿಯಿಂದ, ವಿವಿಧ ಮಹತ್ವಾಕಾಂಕ್ಷಿ ಸಾಮಾಜಿಕ ಯೋಜನೆಗೆ ಚಾಲನೆ



**ಬೆಂಗಳೂರು, ಏ.17–** ಕರ್ನಾಟಕ ಆರ್ಯವೈಶ್ಯ ಮಹಾಸಭಾ ಬೆಂಗಳೂರು ವತಿಯಿಂದ ಆಯೋಜಿಸಲಾಗಿರುವ ವಿವಿಧ ಮಹತ್ವಾಕಾಂಕ್ಷಿ ಸಾಮಾಜಿಕ ಯೋಜನೆಗಳ ಚಾಲನೆಯ ಉದ್ಘಾಟನಾ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಎಸ್.ಈ. ಸುಧೀಂದ್ರ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಮಂಡಳಿಯ ಅಧ್ಯಕ್ಷರು ಮಾತನಾಡುತ್ತಾ ಕರ್ನಾಟಕ ಆರ್ಯವೈಶ್ಯ ಮಹಾಸಭಾವು ಸಾಮಾಜಿಕ ಕಳಕಳಿಯುಳ್ಳ ಹಾಗೂ ಪ್ರತಿಯೊಂದು ಹಂತದಲ್ಲೂ ಆರ್ಯ ವೈಶ್ಯ ಸಮಾಜದ ಮೂಲ ಮಂತ್ರ ಸಮಾಜಮುಖಿ ಕಾರ್ಯಕ್ರಮಗಳಾಗಿದ್ದು, ಪ್ರತಿಯೊಂದು ಹಂತದಲ್ಲೂ ಹಲವಾರು ಕಾರ್ಯಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸುತ್ತಿರುವುದು ಹಾಗೂ ಈ ಎಲ್ಲಾ ಕಾರ್ಯ ಯೋಜನೆಗಳ ಉಸ್ತುವಾರಿಯೂ ಆರ್ಪಿ ರವಿಶಂಕರ್ ಅವರ ದಕ್ಷ ನಾಯಕತ್ವದಲ್ಲಿ, ಸಾಮಾಜಿಕ ಕಳಕಳಿಯೊಂದಿಗೆ ಮುನ್ನಡೆಯುತ್ತಿ ರುವುದು ಅತಿ ಸಂತೋಷ ಹಾಗೂ ಸ್ಪೂರ್ತಿದಾಯಕವಾಗಿದ್ದು ಎಲ್ಲರಿಗೂ ಇಂತಹ ಕಾರ್ಯಗಳಲ್ಲಿ ಭಾಗಿಯಾಗುವ ಆಶಾ ಭಾವನೆ ಮೂಡಿಸುವುದರಲ್ಲಿ ಸಫಲವಾಗಿದೆ ಎಂದು ಭಾವಿಸಿದ್ದೇನೆ ಎಂದು ತಿಳಿಸಿದರು. ಈ ಮೊದಲು ಅಧ್ಯಕ್ಷರು ಡಿಸೆಂಬರ್ 2024ರಲ್ಲಿ ಭಾಗವಹಿಸಿದ್ದ ಪ್ರತಿಭೋತ್ಸವ ಶೋಭಾ ಯಾತ್ರೆಯನ್ನು ಯಶಸ್ವಿಯಾಗಿ ಆಯೋಜಿಸಿದ್ದ ಕರ್ನಾಟಕ ಆರ್ಯ ವೈಶ್ಯ ಮಹಾಸಭಾದ ಎಲ್ಲ ಪದಾಧಿಕಾರಿಗಳಿಗೆ ಅಭಿನಂದಿಸಿ ಮತ್ತೊಮ್ಮೆ ಇನ್ನೊಂದು ಮಹತ್ವದ ಅತ್ಯಂತ ಅರ್ಥಪೂರ್ಣವಾಗಿ ಆಚರಿಸುತ್ತಿರುವ ವಿವಿಧ ಸಮಾಜ ಸೇವೆಗಳ ಚಾಲನಾ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿರುವುದು ನನ್ನ ಸುದೈವ ಎಂದು ತಿಳಿಸಿದರು.

ಅಧ್ಯಕ್ಷರು ಇಂದು ಕರ್ನಾಟಕ ಆರ್ಯವೈಶ್ಯ ಮಹಾಸಭಾದಿಂದ ಅನುಷ್ಠಾನ ಗೊಳಿಸಲು ಸಿದ್ಧವಾಗಿರುವ ಯೋಜನೆಗಳಿಗೆ ಚಾಲನೆ ನೀಡುತ್ತಿರುವುದು ನನ್ನ ಜೀವನದಲ್ಲಿ ಅತ್ಯಂತ ಸಂತೋಷ ಮತ್ತು ಹೆಚ್ಚಿನ ಸಮಾಜ ಸೇವೆ ಮಾಡಲು ದೊರೆತಿರುವ ಅವಕಾಶ ಎಂದು ಭಾವಿಸಿದ್ದೇನೆ ಎಂದು ತಿಳಿಸಿದರು.

ಇಂದು ಚಾಲನೆಗೊಳ್ಳುತ್ತಿರುವ ಸಮಾಜ ಸೇವೆಗಳು ಕರ್ನಾಟಕ ರಾಜ್ಯದ ದಕ್ಷ ಮುಖ್ಯಮಂತ್ರಿಗಳಾದ ಸಿದ್ದ ರಾಮಯ್ಯನವರ ಗ್ಯಾರಂಟಿ ಯೋಜನೆಗಳ ಮಾದರಿಯಲ್ಲಿಯೇ ಯಶಸ್ವಿಯಾಗಲಿವೆ ಎಂಬ ನಂಬಿಕೆ ಇದೆ ಎಂದು ಹೇಳುತ್ತಾ ವಿದ್ಯಾರ್ಥಿ ಮಿತ್ರ– ಲ್ಯಾಪ್‌ಟಾಪ್‌ಗಲಳನ್ನು ಉಚಿತವಾಗಿ ನೀಡುವ ಕಾರ್ಯಕ್ರಮವಾಗಿದ್ದು, ಮತ್ತೊಂದು ವಿದ್ಯಾರ್ಥಿ ಮಿತ್ರ ಬಡ್ಡಿ ರಹಿತ ಒಂದು ಲಕ್ಷದವರೆಗಿನ ಲೋನ್ಸ್ ಸ್ಕಾಲರ್ಶಿಪ್, ಸಂಧ್ಯಾ ಶ್ರೀ ಜೀವನಪೂರ್ತಿ ಅರ್ಹ ವಿಧವೆಯರಿಗೆ ತಿಂಗಳ ಪಿಂಚಣಿ ಯೋಜನೆ, ವಾಸವಿ ಚೇತನ– ಅರ್ಹ ವಿಕಲಚೇತನರಿಗೆ ಜೀವಮಾನಪೂರ್ತಿ ಪಿಂಚಣಿ ಯೋಜನೆ, ಅಮರ ಜ್ಯೋತಿ ಟರ್ಮ್ ಇನ್ಸೂರೆನ್ಸ್– ಅರ್ಹರಿಗೆ ಆರ್ಥಿಕ ಸಬಲತೆಯನ್ನು ನೀಡಲು ವಿಮಾ ಯೋಜನೆ, ಈ ಎಲ್ಲಾ ಕಾರ್ಯಕ್ರಮಗಳು ಸಮಾಜದ ಎಲ್ಲಾ ಅರ್ಹ ಫಲಾನುಭವಿಗಳಿಗೆ ದೊರಕಿ ದೊರಕಿ ಅವರುಗಳು ಸಮಾಜದ ಮೂಲ ವಾಹಿನಿಗೆ ಬಂದು ಮುಂದಿನ ಜೀವನವನ್ನು ಯಶಸ್ವಿಯಾಗಿ ರೂಪಿಸಿಕೊಳ್ಳಲು ದಾರಿಯಾಗಲಿ ಎಂದು ಆಶಿಸಿದರು.

ಕರ್ನಾಟಕ ಆರ್ಯವೈಶ್ಯ ಮಹಾಸಭಾದ ಇತರ ಕಾರ್ಯಕ್ರಮಗಳು ವಾಸವಿ ಪೀಠ ಆಧ್ಯಾತ್ಮಿಕದ ಕಡೆಗೆ ಕೊಂಡೊಯ್ಯಲು ಪೂರಕವಾಗಿರುವುದು, ವಾಸವಿ ವಾನ ಪ್ರಸ್ತಾಶ್ರಮ ವೈಶಾಂತ ರಂಗ ಹಲವಾರು ಕಾರ್ಯಯೋಜನೆಗಳ ರೂವಾರಿಗಳಾದ ಆರ್.ಪಿ ರವಿಶಂಕರ್ ಅವರಿಗೆ ಶುಭ ಹಾರೈಸಿ, ಇನ್ನು ಹೆಚ್ಚಿನ ಇಂತಹ ಸಾಮಾಜಿಕ ಕಾರ್ಯಗಳನ್ನು ಕೈಗೊಳ್ಳಲು ಭಗವಂತನು ಅವರಿಗೆ ಆಯುಸ್ಸು, ಆರೋಗ್ಯ ಎಲ್ಲಾ ಸಾಮರ್ಥ್ಯಗಳನ್ನು ಪರಿಪಾಲಿಸಲಿ ಕರ್ನಾಟಕ ರಾಜ್ಯ ಸರ್ಕಾರದ ಯೋಜನೆಗಳ ಮಾದರಿಯಲ್ಲಿಯೇ ಕರ್ನಾಟಕ ಆರ್ಯವೈಶ್ಯ ಮಹಾಸಭಾದ ಈ ಎಲ್ಲಾ ಯೋಜನೆಗಳು ಸಪಲವಾಗಲಿ ಎ0ದು ಆಶಿಸಿದರು.

# ಚಿನ್ನ ಕಳ್ಳಸಾಗಣೆ ಪ್ರಕರಣ: ಕಸ್ಟಮ್ಸ್ ಅಧಿಕಾರಿಗಳ ಪರಿಶೀಲನೆ

**ಬೆಂಗಳೂರು, ಏ.17:** ಕಂದಾಯ ಗುಪ್ತಚರ ನಿರ್ದೇಶನಾಲಯ (ಡಿಆರ್‌ಐ) ಅಧಿಕಾರಿಗಳು ನಡೆಸಿರುವ ಶೋಧ ಹಾಗೂ ವಶ ಕಾರ್ಯಾಚರಣೆ, ಕಸ್ಟಮ್ಸ್ ಕಾಯ್ದೆಯ ನಿಬಂಧನೆಗಳ ಉಲ್ಲಂಘನೆಯಾಗಿದೆ ಎಂದುಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಬಂಧಿತರಾಗಿರುವ ಕನ್ನಡದ ನಟಿ ರನ್ಯಾ ರಾವ್ ಅವರು ಗುರುವಾರ ಕರ್ನಾಟಕ ಹೈಕೋರ್ಟ್‌ಗೆ ತಿಳಿಸಿದ್ದಾರೆ.

ನ್ಯಾಯಮೂರ್ತಿ ಎಸ್ ವಿಶ್ವಜಿತ್ ಶೆಟ್ಟಿ ಅವರ ಮುಂದೆ ಹಾಜರಾದ ರನ್ಯಾ ಪರ ಹಿರಿಯ ವಕೀಲ ಸಂದೇಶ್ ಜೆ ಚೌಟ ಅವರು, ಯಾವುದೇ ವ್ಯಕ್ತಿಯನ್ನು ಮ್ಯಾಜಿಸ್ಟ್ರೇಟ್ ಅಥವಾ ಗೆಜೆಟೆಡ್ ಕಸ್ಟಮ್ಸ್ ಅಧಿಕಾರಿಯ ಮುಂದೆ ಹಾಜರುಪಡಿಸುವುದನ್ನು ಕಡ್ಡಾಯ ಮಾಡಿರುವ ಕಸ್ಟಮ್ಸ್ ಕಾಯ್ದೆಯ ಸೆಕ್ಷನ್ 102 ಅನ್ನು ಉಲ್ಲಂಘಿಸಿ ಶೋಧ ನಡೆಸಲಾಗಿದೆ. ಈ ಕಾಯ್ದೆಯನ್ನು ಅನುಸರಿಸುವಲ್ಲಿ ವಿಫಲವಾದ್ದಲ್ಲಿ ವಶಕ್ಕೆ ಪಡೆದೆಲ್ಲಾ ಅಮಾನ್ಯವಾಗುತ್ತದೆ ಎಂದು ವಾದಿಸಿದರು.




ಮಹಜರ್‌ನಲ್ಲಿನ ವ್ಯತ್ಯಾಸಗಳು ಮತ್ತು ಕಾರ್ಯಾಚರಣೆಯ ಮೊದಲು ನೀಡಲಾದ ಸೂಚನೆಗಳನ್ನು ಉಲ್ಲೇಖಿಸಿದ ಅವರು, ಶೋಧ ಮತ್ತು ಬಂಧನದಲ್ಲಿ ಅನುಸರಿಸಲಾದ ವಿಧಾನದಲ್ಲಿ ಕಾನೂನುಬಾಹಿರವಾಗಿದೆ ಎಂದರು.

ಶೋಧ ಮತ್ತು ಬಂಧನದ ನೇತೃತ್ವ ವಹಿಸಿದ ಅಧಿಕಾರಿಯನ್ನು ಕೇವಲ ಗೆಜೆಟೆಡ್ ಅಧಿಕಾರಿ ಎಂದು ಹೇಳಿರುವುದು ಇಡೀ ಕಾರ್ಯಾಚರಣೆಯ ಕಾನೂನುಬದ್ಧತೆಯ ಬಗ್ಗೆ ಅನುಮಾನಗಳನ್ನು ಹುಟ್ಟುಹಾಕಿದೆ. ಕಾನೂನಿನಲ್ಲಿರುವಂತೆ ಬಂಧನಕ್ಕೆ ಕಾರಣವನ್ನು ಔಪಚಾರಿಕವಾಗಿ ರನ್ಯಾ ಅವರ ಕುಟುಂಬ ಸದಸ್ಯರಿಗೆ ಲಿಖಿತವಾಗಿ ತಿಳಿಸಲಾಗಿಲ್ಲ . ರನ್ಯಾ ಅವರ ಪತಿಗೆ ದೂರವಾಣಿ ಕರೆ ಮೂಲಕ ಮಾತ್ರ ಮಾಹಿತಿ ನೀಡಿದ್ದಾರೆ ಎಂದು ನ್ಯಾಯಾಲಯದ ಗಮನಕ್ಕೆ ತಂದರು.

ವಾದಕ್ಕೆ ಪೂರಕವಾಗಿ ಎರಡು ಸುಪ್ರೀಂಕೋರ್ಟ್ ತೀರ್ಪುಗಳನ್ನು ಉಲ್ಲೇಖಿಸಿದ ಚೌಟಾ, ಕಸ್ಟಮ್ಸ್ ಆಕ್ಟ್ ಅಡಿಯ ಅಪರಾಧಗಳು ಏಳು ವರ್ಷಗಳಿಗಿಂತ ಕಡಿಮೆ ಅವಧಿಯ ಜೈಲು ಶಿಕ್ಷೆಯೊಂದಿಗೆ ದಂಡನೀಯವಾಗಿರುವುದರಿಂದ ಮ್ಯಾಜಿಸ್ಟ್ರೇಟ್ ನ್ಯಾಯಾಲಯಗಳು ಸಾಮಾನ್ಯವಾಗಿ ಜಾಮೀನಿಗೆ ಪರಿಗಣಿಸುತ್ತವೆ. ಮಹಿಳೆಯಾಗಿರುವ ರನ್ಯಾ ಈಗಾಗಲೇ 45 ದಿನಗಳ ಕಾಲ ಬಂಧನದಲ್ಲಿದ್ದಾರೆ ಎಂದು ತಿಳಿಸಿದರು.

ರನ್ಯಾ ಮತ್ತು ಆಕೆಯ ಸಹ ಆರೋಪಿ ತರುಣ್ ಕೊಂಡೂರು ರಾಜು ಅವರು ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಏಪ್ರಿಲ್ 21 ಕ್ಕೆ ಮುಂದೂಡಿದ ನ್ಯಾಯಾಲಯ, ಅದರೊಳಗೆ ತಮ್ಮ ಆಕ್ಷೇಪಣೆಗಳನ್ನು ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿದೆ.



ಬೆಂಗಳೂರಿನ ತುಮಕೂರು ರಸ್ತೆಯಲ್ಲಿರುವ ಶ್ರೀ ಶಿವಕುಮಾರ ಸ್ವಾಮಿ ಫ್ಲೈಓವರ್ ಮೇಲೆ ನಗರಕ್ಕೆ ಪ್ರವೇಶಿಸುತ್ತಿದ್ದ ಲಾರಿಯೊಂದು ಗುರುವಾರ ಬೆಂಕಿಗೆ ಆಹುತಿಯಾಗಿದ್ದು, ಸಂಚಾರ ಪೊಲೀಸರು ಲಾರಿಯನ್ನು ತೆಗೆದುಹಾಕುವವರೆಗೆ ಸಂಚಾರವನ್ನು ಬೇರೆಡೆಗೆ ತಿರುಗಿಸಲಾಗಿತ್ತು.

### ಥೇವರ್ ಸಮಾಜದವರಿಗೆ ಜಾತಿ ಪ್ರಮಾಣಪತ್ರ ನೀಡಿ

# ಶಾಸಕರು, ಅಧಿಕಾರಿಗಳ ಸಹಕಾರ ಕೋರಿ ಚಿದಾನಂದಪ್ಪಗೆ ಮನವಿ



**ಬಳ್ಳಾರಿ, ಏ.17–**ಬಳ್ಳಾರಿಯ ಥೇವರ್ ಸಮಾಜದ ಮುಖಂಡರು ಬಳ್ಳಾರಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾ ಕಚೇರಿಗೆ ಆಗಮಿಸಿ ಜಿಲ್ಲಾಧ್ಯಕ್ಷರಾದ ಚಿದಾ ನಂದಪ್ಪನವರಿಗೆ, ಮತ್ತು ಉಪಾಧ್ಯಕ್ಷರಾದ ಶ್ರೀಮತಿ ಆಶಾಲತಾ ಸೋಮಪ್ಪ, ಕುರುಗೋಡು ತಾಲ್ಲೂಕು ಅಧ್ಯಕ್ಷರಾದ ಜಿ.ಬಸವನಗೌಡ, ಹಾಗೂ ಜಿಲ್ಲಾ ಸಮಿತಿ ಸದಸ್ಯರಾದ ನಾಗೇನಹಳ್ಳಿ ಮಲ್ಲಿಕಾರ್ಜುನ ಇವರಿಗೂ ಸನ್ಮಾನಿಸಿ ಶುಭ ಹಾರೈಸಿದರು. ಹಲವಾರು ವರ್ಷಗಳಿಂದ ಬಳ್ಳಾರಿ ಜಿಲ್ಲಾ ನಗರ ಮತ್ತು ತಾಲ್ಲೂಕು ಪ್ರದೇಶದಲ್ಲಿ ವಾಸಿಸುವ ಥೇವರ್ ಸಮಾಜದ ಇವರಿಗೆ ಜಾತಿ ಪ್ರಮಾಣ ಪತ್ರ ಸಿಗುತ್ತಿಲ್ಲ. ಅದಕ್ಕಾಗಿ ಮನವಿ ಪತ್ರ ಸಲ್ಲಿಸಿ ಪ್ರಮಾಣ ಪತ್ರ ಪಡೆಯಲು ಶಾಸಕರು ಮತ್ತು ಅಧಿಕಾರಿಗಳ ಸಹಕಾರ ಕೊಡಿಸುವಂತೆ ಮನವಿ ಮಾಡಿಕೊಂಡಿದ್ದಾರೆ.

# ಕುರ್ಚಿ ಅಲ್ಲಾಡುವಾಗ ಸಿದ್ದು ಜಾತಿ ಅಸ್ತ್ರ: ರಮೇಶ್ ಜಿಗಜಿಣಗಿ

**ವಿಜಯಪುರ, ಏ.17–** ಸಿಎಂ ಸಿದ್ದರಾಮಯ್ಯ ಕುರ್ಚಿ ಅಲ್ಲಾಡುತ್ತಿದೆ. ರಾಜ್ಯದಲ್ಲಿ ಬವಲೆ ಏರಿಕೆಯಿಂದ ಜನ ಆಕ್ರೋಶಕ್ಕೀಡಾಗಿದ್ದಾರೆ. ತನ್ನ ತಪ್ಪು ಮರೆಮಾಚಲು ಜಾತಿ ಜನ ಗಣತಿ ಮುನ್ನಲೆಗೆ ತಂದಿದ್ದಾರೆ ಎಂದು ಸಂಸದ ರಮೇಶ ಜಿಗಜಿಣಗಿ ಟೀಕಿಸಿದರು.

ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಜಾತಿ ಗಣತಿ ವೈಜ್ಞಾನಿಕವಾಗಿರಬೇಕು. ಸಿದ್ದರಾಮಯ್ಯನವರ ಸರ್ಕಾರ ನಡೆಸಿದ ಜಾತಿ ಗಣತಿ ವೈಜ್ಞಾನಿಕವಾಗಿಲ್ಲ. ಹಿಂದಿನ ಬಾರಿ ಸಿಎಂ ಆಗಿರುವಾಗ ಯಾವುದೋ ದುರುದ್ದೇಶದಿಂದ ಮಾಡಿದ್ದು, ಈಗ ಅದನ್ನು ಮುನ್ನೆಲೆಗೆ ತಂದರೆ ಹೇಗೆ? ಹೀಗಾಗಿ ಅದನ್ನು ಒಪ್ಪುವ ಮಾತೇ ಇಲ್ಲ ಎಂದು ತಿಳಿಸಿದರು.

ಇಂಥ ಕೆಟ್ಟ ಸರ್ಕಾರವನ್ನು ನನ್ನ ಜೀವಮಾನದಲ್ಲಿಯೇ ನೋಡಿಲ್ಲ, ಈ ಸರ್ಕಾರ ಜನರನ್ನು ಕೊಲ್ಲುವ ಕೆಲಸ ಮಾಡುತ್ತಿದೆ, ಸ್ವಚ್ಛತಾ ವಾಹನಗಳಿಗೆ ಪೆಟ್ರೋಲ್ ಸಹ ಇಲ್ಲದಂತಹ ಅಧೋಗತಿಗೆ ತಳ್ಳಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಗೌರವ ಉಳಿಸಿಕೊಳ್ಳಲು ಜಾತಿ ಜನಗಣತಿ ಮುನ್ನಲೆಗೆ ತರದೆ ಕೂಡಲೇ ವಿಧಾನಸಭೆ ವಿಸರ್ಜಿಸಿ ಚುನಾವಣೆಗೆ ಹೋಗಬೇಕು ಎಂದು ಒತ್ತಾಯಿಸಿದರು.

ವಕ್ಫ್ ಕಾಯ್ದೆ ತಿದ್ದುಪಡಿಯಿಂದ ಸಾಮಾನ್ಯ ಮುಸ್ಲಿಂರಿಗೆ ಯಾವ ತೊಂದರೆಯೂ ಇಲ್ಲ. ಆದರೆ ವಕ್ಫ್ ಆಸ್ತಿಯನ್ನು ಕೊಳ್ಳೆ ಹೊಡೆದ ಶ್ರೀಮಂತ ಮುಸ್ಲಿಂರಿಗೆ ತೊಂದರೆಯಾಗಲಿದೆ. ಅದು ಜಮೀರ್ ಒಬ್ಬನೇ ಅಲ್ಲ ಅನೇಕರು ಈ ಆಸ್ತಿ ಕೊಳ್ಳೆ ಹೊಡೆದಿದ್ದಾರೆ. ಕೆಲವರು ಕೊಳ್ಳೆ ಹೊಡೆದು ಗೋರಿ ಸೇರಿದ್ದಾರೆ. ಮುಸ್ಲಿಂರ ಪರವಾದ ಈ ಕಾನೂನನ್ನು 75 ವರ್ಷಗಳಿಂದಲೂ ಕಾಂಗ್ರೆಸ್ ಜಾರಿ ಮಾಡಿರಲಿಲ್ಲ. ಈ ಮಹತ್ವದ ಕಾರ್ಯವನ್ನು ಬಿಜೆಪಿ ಸರ್ಕಾರ ಮಾಡಿದೆ. ಇನ್ನೂ ರಾಜ್ಯ ಸರ್ಕಾರ ಈ ಕಾಯ್ದೆ ಜಾರಿ ಮಾಡುವುದಿಲ್ಲ ಎಂದು ಹೇಳಿದೆ. ಆದರೆ ಮೋದಿ ಅವರು ಯಾವ ರೀತಿ ಜಾರಿ ಮಾಡಿಸಬೇಕು ಎಂಬುದು ಪ್ರದಾನಿ ಮೋದಿ ಅವರಿಗೆ ಗೊತ್ತಿದೆ ಎಂದರು.



ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಮಾರು ವೇಷದಲ್ಲಿ ರಾಜ್ಯ ಸಂಚರಿಸಲಿ, ಜನರ ಗುಂಪಿನಲ್ಲಿ ಅವರ ಬಗ್ಗೆ ಹಾಗೂ ಸರ್ಕಾರದ ಬಗ್ಗೆ ಏನು ಮಾತನಾಡುತ್ತಾರೋ ತಿಳಿದುಕೊಳ್ಳಲಿ. ಜನಾಕ್ರೋಶ ಅವರಿಗೆ ಅರ್ಥವಾಗುತ್ತದೆ ಎಂದರು. ರಾಜ್ಯದಲ್ಲಿ ಮಂತ್ರಿಗಳು ಮಾತ್ರ ನೆಮ್ಮದಿಯಿಂದ ಇದ್ದಾರೆ. ಕಾಂಗ್ರೆಸ್ ಶಾಸಕರು ಸಹ ನೆಮ್ಮದಿಯಿಂದ ಇಲ್ಲ. ಬಡವರ ನೆಮ್ಮದಿ ಅಧೋಗತಿಯಾಗಿದೆ. ಗುತ್ತಿಗೆ ಕಾಮಗಾರಿಗಳೇ ಇಲ್ಲ, ಆದರೂ ಅಲ್ಪಸಂಖ್ಯಾತರಿಗೆ ಗುತ್ತಿಗೆ ಕಾಮಗಾರಿಯಲ್ಲಿ ಮೀಸಲಾತಿ ಜಾರಿ ಮಾಡುವ ಮೂಲಕ ಅಲ್ಪಸಂಖ್ಯಾತರಿಗೂ ಕಾಂಗ್ರೆಸ್ ಸರ್ಕಾರ ಮೂಗಿಗೆ ತುಪ್ಪ ಸವರುವ ಕೆಲಸ ಮಾಡಿದೆ ಎಂದು ನುಡಿದರು. ಉಸಿರಾಡುವ ಗಾಳಿ ಹೊರತುಪಡಿಸಿ ಉಳಿದ ಎಲ್ಲದರ ಮೇಲೆಯೂ ರಾಜ್ಯ ಸರ್ಕಾರ ಟ್ಯಾಕ್ಸ ವಿಧಿಸಿದೆ. ಕೇಂದ್ರ ಸರ್ಕಾರ ಸಾಲ ಮಾಡುತ್ತಿದೆ ಎಂಬ ಪ್ರಶ್ನೆ ಕೇಳುವ ನೈತಿಕತೆ ಇಲ್ಲ, ಕೇಂದ್ರ ಸರ್ಕಾರ ಹೂಡಿಕೆ, ಮೂಲ ಸೌಲಭ್ಯಕ್ಕಾಗಿ ಸಾಲ ಮಾಡುತ್ತಿದೆ ಎಂದರು.

ಜನಾಕ್ರೋಶ ಯಾತ್ರೆ ವಿಜಯಪುರಕ್ಕೆ ಆಗಮಿಸಲಿದೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸೇರಿದಂತೆ ಅನೇಕ ನಾಯಕರು ಭಾಗಿಯಾಗಲಿದ್ದಾರೆ. ಅಂದು ಶ್ರೀ ಶಿವಾಜಿ ಮಹಾರಾಜರ ವೃತ್ತದಿಂದ ಯಾತ್ರೆ ನಡೆಯಲಿದ್ದು, ದರಬಾರ ಹೈಸ್ಕೂಲ್ ಮೈದಾನದಲ್ಲಿ ಬೃಹತ್ ಸಮಾವೇಶ ನಡೆಯಲಿದೆ.

# ಸಿಇಟಿ ಪರೀಕ್ಷಾ ಕೇಂದ್ರಗಳಿಗೆ ಸಿಇಓ ರಿಷಿ ಆನಂದ ಭೇಟಿ: ಪರಿಶೀಲನೆ



**ವಿಜಯಪುರ, ಏ.16–**ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ರಿಷಿ ಆನಂದ ಅವರು ಬುಧವಾರ ನಗರದ ಪಿಡಿಜೆ ಪದವಿ ಪೂರ್ವ ಕಾಲೇಜು ಹಾಗೂ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ನಡೆಯುತ್ತಿರುವ ಸಾಮಾನ್ಯ ಪ್ರವೇಶ ಪರೀಕ್ಷಾ (ಸಿಇಟಿ) ಕೇಂದ್ರಗಳಿಗೆ ಭೇಟಿ ನೀಡಿ, ಪರೀಕ್ಷಾ ವ್ಯವಸ್ಥೆ, ಪರೀಕ್ಷೆ ಕೇಂದ್ರಗಳಲ್ಲಿ ಕಲ್ಪಿಸಲಾಗಿರುವ ಮೂಲಭೂತ ಸೌಲಭ್ಯಗಳ ಕುರಿತು ಪರಿಶೀಲನೆ ನಡೆಸಿದರು.

ನಗರದ ಪಿ.ಡಿ.ಜೆ ಪಿಡಿಜೆ ಪದವಿ ಪೂರ್ವ ಕಾಲೇಜು ಮತ್ತು ಸರ್ಕಾರಿ ಮಹಿಳೆಯರ ಮತ್ತು ಪುರುಷರ ಪದವಿ ಪೂರ್ವ ಕಾಲೇಜುಗಳಿಗೆ ಸಿ.ಇ,ಟಿ ಪರೀಕ್ಷಾ ಕೇಂದ್ರಕ್ಕೆ ಭೇಟಿ ನೀಡಿದ ಅವರು, ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಗಳ ಹಾಜರಾತಿ, ಪರೀಕ್ಷಾ ಕೇಂದ್ರಗಳ ಕೊಠಡಿ, ವಿದ್ಯಾರ್ಥಿಗಳಿಗೆ ಆಸನಗಳ ವ್ಯವಸ್ಥೆ, ವಿದ್ಯುತ್ ದೀಪದ ವ್ಯವಸ್ಥೆ ಹಾಗೂ ಪರೀಕ್ಷಾ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿರುವ ಕುರಿತು ಪರಿಶೀಲನೆ ನಡೆಸಿದರು.

ಪರೀಕ್ಷಾ ಕೇಂದ್ರಗಳಲ್ಲಿ ಎಲ್ಲಾ ಕೊಠಡಿಗಳಿಗೆ ಸಿ.ಸಿ.ಟಿ.ವಿ ಅಳವಡಿಸಿರುವುದೂ ಸೇರಿದಂತೆ ಪರೀಕ್ಷಾ ಕೇಂದ್ರಗಳಿಗೆ ಪೋಲಿಸ್ ಭದ್ರತಾ ವ್ಯವಸ್ಥೆ ಮಾಡಿರುವ ಕುರಿತು ಸಮಗ್ರ ಪರಿಶೀಲನೆ ನಡೆಸಿದ ಅವರು, ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ಸಮಸ್ಯೆಯಾಗದಂತೆ ನೋಡಿಕೊಂಡು, ಅಚ್ಚುಕಟ್ಟಾಗಿ ಪರೀಕ್ಷಾ ಕಾರ್ಯ ನಿರ್ವಹಿಸಬೇಕು. ಕಡ್ಡಾಯವಾಗಿ ಕೊಠಡಿಗಳಲ್ಲಿ ವಿದ್ಯುತ್ ದೀಪದ ವ್ಯವಸ್ಥೆ, ಪ್ರಶಾಂತ ವಾತಾವರಣದಲ್ಲಿ ಆತ್ಮ ವಿಶ್ವಾಸದಿಂದ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ಸ್ನೇಹಿ ಪರೀಕ್ಷಾ ವ್ಯವಸ್ಥೆಗೆ ಅಗತ್ಯ ಕ್ರಮಕ್ಕೆ ಅವರು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರಾದ ಬಸವರಾಜ ಗಂಗನಳ್ಳಿ, ಪರೀಕ್ಷಾ ವೀಕ್ಷಕರಾದ ಎಸ್. ಎಸ್. ಅಂಗಡಿ, ಪ್ರಶ್ನೆ ಪತ್ರಿಕೆ ಪಾಲಕರಾದ ದಂದರಗಿ, ಕೊಠಡಿ ಮೇಲ್ವಿಚಾರಕರು, ಗಣಕ ಯಂತ್ರ ನಿರ್ವಾಹಕರು ಹಾಗೂ ಇತರೆ ಸಿಬ್ಬಂದಿಯವರು ಉಪಸ್ಥಿತ ರಿದ್ದರು.

### ಅಖಿಲ ಭಾರತ ಲಿಂಗಾಯತ ಪಂಚಮಸಾಲಿ

# ಟ್ರಸ್ಟ್ ಅಧ್ಯಕ್ಷರಾಗಿ ಶಾಸಕ ವಿಜಯಾನಂದ ಕಾಶಪ್ಪನವರ್ ಆಯ್ಕೆ

**ಹುಬ್ಬಳ್ಳಿ, ಏ.17–** ಬಿಜೆಪಿಯಿಂದ ಉಚ್ಚಾಟನೆಗೊಂಡ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಪರವಾಗಿ ಬ್ಯಾಟ್ ಬೀಸಿದ್ದ ಪಂಚಮಸಾಲಿ ಪೀಠದ ಜಯಮೃತ್ಯುಂಜಯ ಸ್ವಾಮೀಜಿ ಅವರ ವಿರುದ್ಧ ನೇರವಾಗಿಯೇ ಶಾಸಕ ವಿಜಯಾನಂದ ಕಾಶಪ್ಪ ನವರ್ ಗುಡುಗಿದ್ದರು. ಇದೀಗ ಮಹತ್ವದ ಬೆಳವಣಿಗೆ ಎಂಬಂತೆ ಅಖಿಲ ಭಾರತ ಲಿಂಗಾಯತ ಪಂಚಮಸಾಲಿ ಟ್ರಸ್ಟ್ ಅಧ್ಯಕ್ಷರಾಗಿ ಶಾಸಕ ವಿಜಯಾನಂದ್ ಕಾಶಪ್ಪನವರ್ ಅವರೇ ಇಂದು ಆಯ್ಕೆಯಾಗಿದ್ದಾರೆ. ಹುಬ್ಬಳ್ಳಿಯಲ್ಲಿ ಅಧ್ಯಕ್ಷರ ಆಯ್ಕೆ ಕುರಿತಾಗಿ ನಡೆದ ಸಭೆಯಲ್ಲಿ ಟ್ರಸ್ಟ್‌ದಾಧಿಕಾರಿಗಳಿಂದ ಕಾಶಪ್ಪನವರ್ ಸರ್ವಾನುಮತದಿಂದ ಆಯ್ಕೆಯಾಗಿದ್ದಾರೆ. ಈ ಬೆಳವಣಿಗೆಯು ಇತ್ತೀಚೆಗೆ ಪಂಚಾಮಸಾಲಿ ಸಮು ದಾಯದ ಸ್ವಾಮೀಜಿ ಬದಲಾವಣೆ ವಿಚಾರ, ಪಂಚಮಸಾಲಿ ಸಮುದಾಯದ ನಾಯಕರ ರಾಜಕೀಯ ವಾಕ್ಸಮರದ ಬೆಳವಣಿಗೆಗಳ ಮೇಲೆ ಮಹತ್ವದ ಪರಿಣಾಮ ಬೀರುವ ಸಾಧ್ಯತೆ ಇದೆ. ಪಂಚಮಸಾಲಿ ಪೀಠದ ಜಯಮೃತ್ಯುಂಜಯ ಸ್ವಾಮೀಜಿಯವರನ್ನು ಟ್ರಸ್ಟ್ ನೇಮಿಸಿದೆ. ಅದರ ನಿಬಂಧನೆಗಳಿಗೆ ಒಳಪಟ್ಟು ಸ್ವಾಮೀಜಿ ಸಮಾಜವನ್ನು ಸಂಘಟಿಸಬೇಕು. ಅದು ಬಿಟ್ಟು ಓರ್ವ ವ್ಯಕ್ತಿ (ಯತ್ನಾಳ್) ಹಾಗೂ ಪಕ್ಷವನ್ನು ಬೆಂಬಲಿಸಿ ನಿಲ್ಲುವುದು ಸರಿಯಲ್ಲ. ಇದು ಹೀಗೆ ಮುಂದುವರಿದರೆ ಸಮಾಜ ಕಟ್ಟುನಿಟ್ಟಿನ ಕಠಿಣ ಕ್ರಮ ಜರುಗಿಸಲಿದೆ. ಸ್ವಾಮೀಜಿ ಅವರನ್ನೇ ಬದಲಾಯಿಸುತ್ತೇವೆ ಎಂಬ ಮಾತನ್ನು ಕಾಶಪ್ಪನರ್ ಆಡಿದ್ದು ಗೊತ್ತೇ ಇದೆ.ಯತ್ನಾಳ್ ಪರ ಸ್ವಾಮೀಜಿ ಮಾತನಾಡುತ್ತಿರುವುದು ಟ್ರಸ್ಟ್ ನಿಬಂಧನೆಗಳ ವಿರುದ್ಧವಾಗಿದೆ. ಸ್ವಾಮೀಜಿಯವರು ಟ್ರಸ್ಟ್ ನಿಯಮಗಳನ್ನು ಉಲ್ಲಂಘಿಸುತ್ತಿದ್ದಾರೆ. ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷರ ಬಗ್ಗೆ ಕೀಳುಮಟ್ಟದಲ್ಲಿ ಯತ್ನಾಳ್ ಮಾತನಾಡಿದ್ದಾರೆ. ಅಂತವರ ಪರ ನಿಂತ ಸ್ವಾಮೀಜಿಗಳ ಪೀಠಕ್ಕೆ ಕುತ್ತು ಎಂಬ ಎಚ್ಚರಿಕೆಯನ್ನು ಕೆಲ ದಿನಗಳ ಹಿಂದೆಯಷ್ಟೇ ಕಾಶಪ್ಪನವರ್ ನೀಡಿದ್ದರು.



# ಆರ್‌ವೈಎಂಇಸಿಯಲ್ಲಿ ನಾಳೆ ಮಂದಾರ 2025 ವಾರ್ಷಿಕೋತ್ಸವ ಸಮಾರಂಭ– ಡಾ॥ ಟಿ.ಹನುಮಂತರೆಡ್ಡಿ




**ಬಳ್ಳಾರಿ, ಏ.17–** ಬಳ್ಳಾರಿ ನಗರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ರಾವ್ ಬಹದ್ದೂರ್ ವೈ ಮಹಾ ಬಲೇಶ್ವರಪ್ಪ ತಾಂತ್ರಿಕ ಮಹಾವಿದ್ಯಾಲಯದಲ್ಲಿ 19.04.2025 ರಂದು ಮಹಾವಿದ್ಯಾ ಲಯದಲ್ಲಿ "ಮಂದಾರ–2025" ವಾರ್ಷಿಕೋತ್ಸವ ಸಮಾರಂಭ, ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಜರಗಲಿವೆ.

ದಿನಾಂಕ 19.04.2025 ಶನಿವಾರ ಸಂಜೆ 06.00ಕ್ಕೆ ಜರುಗುವ ಶೈಕ್ಷಣಿಕ ಹಾಗೂ ಕ್ರೀಡಾ ಪುರಸ್ಕಾರ–2025 ಸಮಾರಂಭಕ್ಕೆ ವೀರಶೈವ ವಿದ್ಯಾ ವರ್ಧಕ ಸಂಘದ ಅಧ್ಯಕ್ಷರಾದ ಡಾ.ಕರ್ಣೇಕಲ್ ಮಹಾಂತೇಶ್, ಉಪಾಧ್ಯಕ್ಷರು, ವೀ.ವಿ.ಸಂಘ, ಬಳ್ಳಾರಿ. ಹಾಗೂ ಆರ್.ವೈ.ಎಂ.ಇ.ಸಿ. ಅಧ್ಯಕ್ಷರಾದ ಜಾನೇಕುಂಟೆ ಬಸವರಾಜ, ವೀ.ವಿ.ಸಂಘದ ಕಾರ್ಯದರ್ಶಿಗಳು, ಡಾ. ಅರವಿಂದ ಪಟೇಲ್ ಸಹ ಕಾರ್ಯದರ್ಶಿಗಳು ಯಾಳ್ಪಿ ಮೇಟಿ ಪಂಪನಗೌಡ, ಕೋಶಾಧಿಕಾರಿಗಳು ಬೈಲುವದ್ದಿಗೇರಿ ಯರ್ರಿಸ್ವಾಮಿ, ಆರ್.ವೈ.ಎಂ.ಇ.ಸಿ – ಆಡಳಿತ ಮಂಡಳಿ ಸದಸ್ಯರು ಪ್ರಭು ಸ್ವಾಮಿ. ಎಸ್.ಎಂ, ಬಾಡದ ಪ್ರಕಾಶ್ ಘನ ಉಪಸ್ಥಿತಿಯಲ್ಲಿ ಉದ್ಘಾಟನೆ ಸಮಾರಂಭವು ಜರುಗುವುದು. ಮುಖ್ಯ ಅತಿಥಿಗಳಾಗಿ ಬಳ್ಳಾರಿ–ಜಿಲ್ಲಾಧಿಕಾರಿಗಳಾದ ಪ್ರಶಾಂತ್ ಕುಮಾರ್ ಮಿಶ್ರಾ , ಹಾಗೂ ಡಾ.ಎ.ಚನ್ನಪ್ಪ ಕುಲ ಸಚಿವರು, ಕರ್ನಾಟಕ ವಿಶ್ವವಿದ್ಯಾ ಲಯ, ಧಾರವಾಡ, ಹಾಗೂ ಶ್ರೀನಿವಾಸ ರಾಮಾನುಜಮ್ ಕಂದುರಿ ಮುಖ್ಯ ಕಾರ್ಯಪಡೆ ವ್ಯವಾಸ್ಥಾಪಕ, ಟಿ.ಸಿ.ಎಸ್, ಬೆಂಗಳೂರು ವೀರಶೈವ ವಿದ್ಯಾ ವರ್ಧಕ ಸಂಘದ ಕಾರ್ಯಕಾರಿ ಸಮಿತಿ ಸದಸ್ಯರು, ಆಜೀವಸದಸ್ಯರು, ಇವರುಗಳ ಘನ ಉಪಸ್ಥಿತಿಯಲ್ಲಿ ಕಾರ್ಯಕ್ರಮವು ಜರುಗುವುದು, ವಿದ್ಯಾರ್ಥಿಗಳಿಗೆ ಮುಂದಿನ ಜೀವನದ ಭವಿಷ್ಯತ್ತಿಗಾಗಿ ಕೆಲವು ಸೂಕ್ತ ಸಲಹೆಗಳನ್ನು ನೀಡುವರು. ಅಲ್ಲದೇ ಬಹುಮಾನ ವಿತರಣಾ, ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗುವವು, ಪ್ರಾಂಶುಪಾಲರು, ಉಪ ಪ್ರಾಂಶು ಪಾಲರು ಹಾಗೂ ಶಿಕ್ಷಕವೃಂದ, ವಿದ್ಯಾರ್ಥಿವೃಂದದವರು, ಭಾಗವಹಿಸಲಿದ್ದಾರೆ ಎಂದು ಡಾ॥ ಟಿ.ಹನುಮಂತರೆಡ್ಡಿ ಪ್ರಾಂಶುಪಾಲರು, ಆರ್.ವೈ.ಎಂ.ಇ.ಸಿ, ಬಳ್ಳಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಾತಿಗಳ ಸ್ಥಿತಿಗತಿ ಅಧ್ಯಯನ ಸಮೀಕ್ಷಾ ವರದಿ ಜಾರಿಗೊಳಿಸಲು ಸರ್ಕಾರ ಮೀನ-ಮೇಷ ಎಣಿಸುವ ಅಗತ್ಯವಿಲ್ಲ




**ಬಳ್ಳಾರಿ, ಏ.17–** ರಾಜ್ಯದ ಎಲ್ಲಾ ಜಾತಿಗಳ ಶೈಕ್ಷಣಿಕ, ಆರ್ಥಿಕ ಮ,ತ್ತು ಸಾಮಾಜಿಕ ಸ್ಥಿತಿಗತಿಗಳನ್ನು ಅಧ್ಯಯನ ನಡೆಸಿ ತಯಾರಿಸಲಾಗಿರುವ ಸಮೀಕ್ಷಾ ವರದಿಯನ್ನು ಜಾರಿಗೊಳಿಸಲು ರಾಜ್ಯ ಸರ್ಕಾರ ಮೀನಾಮೇಶ ಎಣಿಸುವ ಅಗತ್ಯವಿಲ್ಲ. ಸುಮಾರು 161 ಕೋಟಿ ರೂ ಗಳನ್ನು ಖರ್ಚು ಮಾಡಿ ತಯಾರಿಸಿರುವ ಈ ವರದಿಯು ತಕ್ಷಣ ಫಲಪ್ರದ ಆಗಬೇಕು. ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದೆಂಬ ವಿಶ್ವಾಸ ನಮಗಿದೆ.

ಕರ್ನಾಟಕ 12ನೇ ಶತಮಾನದಲ್ಲೇ ಸಮಸಮಾಜವನ್ನು ಪ್ರತಿಪಾದಿಸಿದ ರಾಜ್ಯ. ಈ ಹಿಂದೆಯೇ ನಾಲ್ವಡಿ ಕೃಷ್ಣರಾಜ ಒಡೆಯರ್ ಕಾಲದಲ್ಲಿ ಮೈಸೂರು ಸಂಸ್ಥಾನದಲ್ಲಿ ಮೀಸಲಾತಿ ಜಾರಿ ಮಾಡಲಾಗಿತ್ತು. ದಿವಂಗತ ದೇವರಾಜ ಅರಸು ಅವರು 'ಹಾವನೂರು ಆಯೋಗ' ರಚಿಸಿ ಹಿಂದುಳಿದ ವರ್ಗಗಳ ಅಧ್ಯಯನಕ್ಕೆ ಮುನ್ನುಡಿ ಬರೆದರು. ಮಾಜಿ ಮುಖ್ಯಮಂತ್ರಿ ಎಂ.ವೀರಪ್ಪ ಮೊಯ್ಲಿ ಅವರು ಮೀಸಲಾತಿ ಮಿತಿಯನ್ನು ಶೇ. 73ಕ್ಕೆ ಏರಿಸುವ ಪ್ರಯತ್ನ ಮಾಡಿದ್ದರು.

ಹೀಗೆ ಲಾಗಾಯ್ತಿನಿಂದಲೂ ಸಾಮಾಜಿಕ ನ್ಯಾಯದ ಪರವಾಗಿರುವ ಕರ್ನಾಟಕ ಈಗ ಜಾತಿ ಜನಗಣತಿ ಅಥವಾ ರಾಜ್ಯದ ಎಲ್ಲಾ ಜಾತಿಗಳ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳನ್ನು ಅಧ್ಯಯನ ನಡೆಸಿ ಸಮೀಕ್ಷಾ ವರದಿಯನ್ನು ತಯಾರಿಸಿರುವುದು ಇಡೀ ದೇಶಕ್ಕೆ ಮಾದರಿಯಾಗಿದೆ.

# ಕಲಬುರಗಿಯಲ್ಲಿ ಇಂದು ಜನಾಕ್ರೋಶ ರ‍್ಯಾಲಿ ಮರಳು ಲೂಟಿ ಭಾಗೋಡಿ ಕಡೆ ಬಿಜೆಪಿ ನಡೆ: ಅಶೋಕ ಬಗಲಿ

**ಕಲಬುರಗಿ, ಏ.17–** ಅಕ್ರಮ ಮರಳುಗಾರಿಕೆಯನ್ನು ಖಂಡಿಸಿ ಬಿಜೆಪಿ ನಡೆ ಭಾಗೋಡಿ ಕಡೆ ಎಂಬ ಜನಾಕ್ರೋಶ ಪ್ರತಿಭಟನೆಯನ್ನು ಹಾಗೂ ರಾಜ್ಯ ಕಾಂಗ್ರೆಸ್ ಸರ್ಕಾರದ ಬೆಲೆ ಏರಿಕೆ ನೀತಿಗಳನ್ನು ಖಂಡಿಸಿ ಏಪ್ರಿಲ್ 18ರಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ನೇತೃತ್ವದಲ್ಲಿ ನಗರದಲ್ಲಿ ಜನಾಕ್ರೋಶ ರ‍್ಯಾಲಿ ಹಮ್ಮಿಕೊಳ್ಳಲಾಗಿದೆ ಎಂದು ಪಕ್ಷದ ಗ್ರಾಮಾಂತರ ಜಿಲ್ಲಾಧ್ಯಕ್ಷ ಅಶೋಕ್ ಬಗಲಿ ಹೇಳಿದರು.




ಸುದ್ದಿಗೋಷ್ಠಿಯಲ್ಲಿ,ಅಂದು ಬೆಳಿಗ್ಗೆ ನಗರದ ಜಗತ್ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಪಾದಯಾತ್ರೆ ನಡೆಸಿ, ಜಿಲ್ಲಾಧಿಕಾರಿ ಕಚೇರಿ ಮುಂಭಾಗದಲ್ಲಿ ತೆರೆದ ವಾಹನದಲ್ಲಿ ಪ್ರತಿಭಟನೆಯನ್ನುದ್ದೇಶಿಸಿ ಬಿಜೆಪಿ ರಾಜ್ಯಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಮಾತನಾಡಲಿದ್ದಾರೆ ಎಂದರು.

ಪ್ರತಿಭಟನೆಯಲ್ಲಿ ರಾಜ್ಯ ವಿಧಾನ ಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಸಚಿವ ಗೋವಿಂದ ಕಾರಜೋಳ್, ಬಿ. ಶ್ರೀರಾಮುಲು, ರಾಜ್ಯ ವಿಧಾನ ಪರಿಷತ್ ಸದಸ್ಯ ಎನ್ . ರವಿಕುಮಾರ್, ಕೆ.ಎಸ್. ನವೀನ್, ಪಿ. ರಾಜೀವ್ ಅವರೂ ಸೇರಿದಂತೆ ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ ಸಾವಿರಾರು ಕಾರ್ಯಕರ್ತರು ಭಾಗವಹಿಸಲಿದ್ದಾರೆ.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಪ್ರತಿಯೊಂದರ ವಸ್ತುಗಳ ಬೆಲೆ ಏರಿಕೆ ಮಾಡಿದ್ದು, ಹಾಲಿನ ದರ ಏರಿಕೆ, ವಿದ್ಯುತ್ ದರ, ನೊಂದಣಿ ಶುಲ್ಕ ಹೆಚ್ಚಳ, ಮರಣೋತ್ತರ ಪ್ರಮಾಣ ಪತ್ರ, ವೈದ್ಯಕೀಯ ಪ್ರಮಾಣ ಪತ್ರ, ದತ್ತು ಸ್ವೀಕಾರ ಪತ್ರ, ಡಿಜೇಲ್ ದರ ಹೆಚ್ಚಳ, ಗ್ಯಾರಂಟಿ ಯೋಜನೆಗಳಿಗಾಗಿ ಎಸ್ಸಿಪಿ ಟಿಎಸ್ಪಿ ಹಣ ದುರ್ಬಳಕೆ, ಮೂಡಾ ಹಗರಣ ಸೇರಿದಂತೆ ಹತ್ತು ಹಲವು ಕಾಂಗ್ರೆಸ್ ನೀತಿಗಳ ವಿರುದ್ಧ ನಮ್ಮ ಜನಾಕ್ರೋಶ ರ‍್ಯಾಲಿ ಹಮ್ಮಿಕೊಳ್ಳಲಾಗಿದೆ ಎಂದು ಅವರು ತಿಳಿಸಿದರು.

ಬಿಜೆಪಿ ನಡೆ ಭಾಗೋಡಿ ಕಡೆ: ಅಕ್ರಮ ಮರಳುಗಾರಿಕೆಯಿಂದ ನಲುಗಿರುವ ಜಿಲ್ಲೆಯ ಚಿತ್ತಾಪುರ ತಾಲೂಕಿನ ಕಾಗಿಣಾ ನದಿಯ ಭಾಗೋಡಿ ಪ್ರದೇಶಕ್ಕೆ ಏಪ್ರಿಲ್ ಬಿಜೆಪಿ ಜನಾಕ್ರೋಶ ರ‍್ಯಾಲಿ ತೆರಳಲಿದೆ ಎಂದು ಹೇಳಿದ ಅವರು, ಬಿಜೆಪಿ ಸರ್ಕಾರವಿದ್ದಾಗ ಪ್ರತಿಯೊಂದಕ್ಕೂ ಟೀಕೆ ಮಾಡುತ್ತಿದ್ದ ಪ್ರಿಯಾಂಕ್ ಖರ್ಗೆ ಈಗ ಉಸ್ತುವಾರಿ ಸಚಿವರಾಗಿಯೂ ತಮ್ಮದೇ ಕ್ಷೇತ್ರದಲ್ಲೇ ಅಕ್ರಮ ಮರಳುಗಾರಿಕೆ ತಡೆಯಲಿಕ್ಕಾಗುತ್ತಿಲ್ಲವೇ? ಅಥವಾ ಅವರೇ ತಮ್ಮ ಬೆಂಬಲಿಗರಿಗೆ ಕುಮ್ಮಕ್ಕು ನಿಡುತ್ತಿದ್ದಾರೆ.

ರಾಜ್ಯ ವಿಧಾನ ಪರಿಷತ್ ಮಾಜಿ ಸದಸ್ಯ ಅಮರನಾಥ್ ಪಾಟೀಲ್ ಅವರು ಮಾತನಾಡಿ, ಅಕ್ರಮ ಮರಳುಗಾರಿಕೆಯಿಂದ ನದಿಯಲ್ಲಿ 50–100 ನೂರು ಅಡಿ ಆಳ ತೆಗ್ಗು ತೋಡಿ ಮರಳು ಸಂಪೂರ್ಣ ಬರಿದು ಮಾಡಲಾಗಿದೆ. ಮರಳುಗಾರಿಕೆ ತೆಗ್ಗಿನಲ್ಲಿ ಈಚೆಗೆ ಶ್ರೀಧರ್ ಎನ್ನುವರು ಬಿದ್ದು ಮೃತಪಟ್ಟಿದ್ದಾರೆ. ನದಿಯೊಳಗೆ ರಸ್ತೆ ನಿರ್ಮಿಸಲಾಗಿದೆ. ಆದರೆ ಉಸ್ತುವಾರಿ ಇದನ್ನು ಅಕ್ರಮ ಮರಳುಗಾರಿಕೆ ಎಂಬುದನ್ನು ಮನಸ್ಪೂರ್ವಕವಗಿ ಒಪ್ಪಿಕೊಳ್ಳದಿರುವುದು ನಾಚಿಗೇಡಿತನದ ಸಂಗತಿಯಾಗಿದೆ ಎಂದು ದೂರಿದರು. ಬೆಲೆ ಏರಿಕೆಯಿಂದ ಜನ ತತ್ತರಿಸಿದರೆ, ಇತ್ತ ರಾಜ್ಯ ಸರ್ಕಾರದ ದುರಾಡಳಿತ, ವ್ಯಾಪಕ ಭ್ರಷ್ಟಾಚಾರದಿಂದ ಬೇಸತ್ತು ಹೋಗಿದ್ದಾರೆ. ಹಳ್ಳಿಗಳಲ್ಲಿ ಒಂದೇ ಒಂದು ಅಭಿವೃದ್ಧಿ ಕಾಮಗಾರಿ ನಡೆಯುತ್ತಿಲ್ಲ. ಜನ ರಾಜ್ಯ ಕಾಂಗ್ರೆಸ್ ಸರ್ಕಾರ ಯಾವಾಗ ತೊಲಗುತ್ತದೆ ಎಂದು ಹಿಡಿಶಾಪ ಹಾಕುತ್ತಿದ್ದಾರೆ. ಇದೇ ಜನಾಕ್ರೋಶವಾಗಿದೆ ಎಂದು ಅವರು ಹೇಳಿದರು.

ಗಾಳಿಯೊಂದನ್ನು ಬಿಟ್ಟರೆ ಉಳಿದೆಲ್ಲದರ ಬೆಲೆ ಹೆಚ್ಚಳ ಮಾಡಿರುವ ರಾಜ್ಯ ಸರ್ಕಾರ ಸಂಪೂರ್ಣ ವೈಫಲ್ಯ ಹೊಂದಿದ್ದು, ಇದನ್ನು ಮುಚ್ಚಿಕೊಳ್ಳಲು ಜನಗಣತಿ ವರದಿ ಮುಂದೆ ತಂದಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಹಳ್ಳಿಗಳಿಗೆ ಆಡಳಿತ ಪಕ್ಷದ ಶಾಸಕರು ಕಾಲಿಡುತ್ತಿಲ್ಲ. ಯಾವ ಕೆಲಸಕ್ಕೆಂದು ಹಳ್ಳಿಗೆ ಹೋಗೋಣ ಎಂದು ಶಾಸಕರು ಹೇಳುತ್ತಿದ್ದಾರೆ. ಒಟ್ಟಾರೆ ಆಡಳಿತ ಯಂತ್ರವೇ ಸಂಪೂರ್ಣ ಕುಸಿದಿದೆ. ಜನ ರೊಚ್ಚಿಗೆಳುತ್ತಿದ್ದಾರೆ. ಇದು ಹೀಗೆ ಮುಂದುವರೆದರೆ ತಮಗೆ ಉಳಿಗಾಲವಿಲ್ಲ ಎಂದು ತಿಳಿದುಕೊಂಡು ಜಾತಿ ಗಣತಿಯಂತಹ ಸೂಕ್ಷ್ಮವಿಷಯ ಮುಂದಕ್ಕೆ ತಂದಿದ್ದಾರೆ.

ಆದರೆ ಜನಗಣತಿ ವರದಿಗೆ ಇಡೀ ಸಮುದಾಯದಲ್ಲಿ ಅಸಮಾಧಾನ ಭುಗಿಲೆದ್ದಿದೆ. 350ಕ್ಕೂ ಹೆಚ್ಚು ಸಮುದಾಯಗಳ ಹೆಸರೇ ಇಲ್ಲ ಎಂದಾದ ಮೇಲೆ ಇದ್ಯಾವ ಜನಗಣತಿ ಎಂದು ಅವರು ಖಾರವಾಗಿ ಪ್ರಶ್ನಿಸಿದರು.


# ಮಂಡಳಿ ವಕೀಲರ ನೇಮಕಾತಿಗಾಗಿ ಅರ್ಜಿ ಆಹ್ವಾನ– ನ್ಯಾ.ರಾಜೇಶ್ ಎನ್.ಹೊಸಮನೆ



**ಬಳ್ಳಾರಿ, ಏ.17–**ಬಳ್ಳಾರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿಯಿಂದ 3 ವರ್ಷಗಳ ಅವಧಿಗೆ ಪ್ಯಾನೆಲ್ ವಕೀಲರ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ತಿಳಿಸಿದ್ದಾರೆ. ಮುಂದಿನ ಮೂರು ವರ್ಷಗಳ ಅವಧಿಗೆ (01.07.2025 ರಿಂದ 30.06.2028 ರ ವರೆಗೆ) ಪ್ಯಾನೆಲ್ ವಕೀಲರ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ರಾಜ್ಯ ಬಾರ್ ಕೌನ್ಸಿಲ್‌ನಲ್ಲಿ ನೋಂದಾಯಿಸಿ ಕೊಂಡಿರಬೇಕು. ಕಾನೂನು ಅಭ್ಯಾಸದಲ್ಲಿ ಕನಿಷ್ಠ 3 ವರ್ಷಗಳ ಅನುಭವ ಹೊಂದಿರಬೇಕು. ಮಾನ್ಯತೆವುಳ್ಳ ಅಭ್ಯಾಸ ಪ್ರಮಾಣಪತ್ರ ಹೊಂದಿರಬೇಕು. ಕ್ರಿಮಿನಲ್ ಪ್ರಕರಣ ಹೊಂದಿರಬಾರದು. ಸ್ಥಳೀಯ ಭಾಷೆಯ ಜ್ಞಾನ ಹೊಂದಿರಬೇಕು.ಅರ್ಜಿ ಸಲ್ಲಿಸಲು ಮೇ 03 ಕೊನೆಯ ದಿನವಾಗಿದೆ. ಸಂದರ್ಶನ ದಿನಾಂಕವನ್ನು ಮುಂದಿನ ದಿನಗಳಲ್ಲಿ ತಿಳಿಸಲಾಗುವುದು.

# ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಇಸ್ಲಾಮಿಕ್ ರಾಷ್ಟ್ರಕ್ಕೆ ಮೀಸಲಾತಿ ನೀಡುವ ಬೇಡಿಕೆಗೆ ಭಾರತ ಸಹಿತ ಜಿ4 ರಾಷ್ಟ್ರಗಳ ತಿರಸ್ಕಾರ

**ವಿಶ್ವಸಂಸ್ಥೆ, ಏ. 17:** ಟರ್ಕಿ, ಪಾಕಿಸ್ತಾನ, ಸೌದಿ ಅರೇಬಿಯಾಗೆ ಹಿನ್ನಡೆ ವಿಶ್ವಸಂಸ್ಥೆಯಲ್ಲಿ ಭಾರತದ ಕಾಯಂ ಪ್ರತಿನಿಧಿ ಪಿ. ಹರೀಶ್ ವಾಷಿಂಗ್ಟನ್ (ಅಮೇರಿಕಾ) ಭಾರತ ಸೇರಿದಂತೆ 'ಜಿ–4' ರಾಷ್ಟ್ರಗಳು ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಇಸ್ಲಾಮಿಕ್ ರಾಷ್ಟ್ರಕ್ಕೆ ಮೀಸಲಾತಿ ನೀಡುವ ಪ್ರಸ್ತಾಪವನ್ನು ತಿರಸ್ಕರಿಸಿವೆ. 'ಧಾರ್ಮಿಕ ಆಧಾರದ ಮೇಲೆ ಶಾಶ್ವತ ಸದಸ್ಯತ್ವ ನೀಡುವ ಪ್ರಸ್ತಾಪವು ವಿಶ್ವಸಂಸ್ಥೆಯ ನಿಯಮಗಳಿಗೆ ವಿರುದ್ಧವಾಗಿದೆ' ಎಂದು 'ಜಿ–4' ರಾಷ್ಟ್ರಗಳು ಹೇಳಿವೆ. ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಸುಧಾರಣೆಗಳನ್ನು ತರುವ ಬೇಡಿಕೆ ಬಹಳ ಸಮಯದಿಂದ ಇದೆ. 'ಜಿ–4' ರಾಷ್ಟ್ರಗಳು ಟರ್ಕಿಯ ಅಧ್ಯಕ್ಷ ರೆಸೆಪ್ ತಮ್ಮಿಪ್ ಎರ್ಡೋಗಾನ್, ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಮತ್ತು ಸೌದಿ ಅರೇಬಿಯಾದ ರಾಜಕುಮಾರ ಮೊಹಮ್ಮದ್ ಬಿನ್ ಸಲ್ಮಾನ್ ಅವರ ಇಸ್ಲಾಮಿಕ್ ರಾಷ್ಟ್ರಕ್ಕೆ ಮೀಸಲಾತಿಯನ್ನು ವಿರೋಧಿಸಿವೆ. ವಿಶ್ವಸಂಸ್ಥೆಯಲ್ಲಿ ಭಾರತದ ಕಾಯಂ ಪ್ರತಿನಿಧಿ ಪಿ. ಹರೀಶ್ ಅವರು ಏಪ್ರಿಲ್ 15 ರಂದು 'ಜಿ–4' ರಾಷ್ಟ್ರಗಳ ಪರವಾಗಿ ಮಾತನಾಡಿ, 'ಧರ್ಮದ ಆಧಾರದಲ್ಲಿ ಭದ್ರತಾ ಮಂಡಳಿಯಲ್ಲಿ ಪ್ರಾತಿನಿಧ್ಯವನ್ನು ಸ್ವೀಕರಿಸಲಾಗುವುದಿಲ್ಲ' ಎಂದು ಹೇಳಿದರು. ಹರೀಶ್ ಅವರು ಯಾರ ಹೆಸರನ್ನೂ ಉಲ್ಲೇಖಿಸದೆ, ಧಾರ್ಮಿಕ ಅಂಶವನ್ನು ತರುವುದರಿಂದ ಭದ್ರತಾ ಮಂಡಳಿಯ ಸುಧಾರಣೆಯ ಪ್ರಕ್ರಿಯೆಯು ಇನ್ನಷ್ಟು ಜಟಿಲವಾಗುತ್ತದೆ ಎಂದು ಹೇಳಿದರು. ಜಿ–4 ಅರ್ಥಪೂರ್ಣ ಸುಧಾರಣೆಗಳಿಗಾಗಿ ಕೆಲಸ ಮಾಡುವ ಶಿಫಾರಸು ಗುಂಪಾಗಿದೆ ಮತ್ತು ಯಾರನ್ನು ಶಾಶ್ವತ ಸದಸ್ಯರನ್ನಾಗಿ ಮಾಡಬೇಕು. ಎಂಬುದರ ಕುರಿತು ಯಾವುದೇ ನಿರ್ದಿಷ್ಟ ಸಲಹೆಗಳನ್ನು ನೀಡುವುದಿಲ್ಲ. ಜಿ–4 ಈ ಕೆಲಸವನ್ನು ವಿಶ್ವಸಂಸ್ಥೆಯ ಮಹಾಸಭೆಗೆ ಒಪ್ಪಿಸುತ್ತದೆ. ಮಹಾಸಭೆಯು ಭದ್ರತಾ ಮಂಡಳಿಯಲ್ಲಿ ಪ್ರಜಾಸತ್ತಾತ್ಮಕ ಆಧಾರದಲ್ಲಿ ಸುಧಾರಣೆಗಳನ್ನು ಮಾಡಬೇಕು ಮತ್ತು ಅದರಲ್ಲಿ ನೂತನ ಶಾಶ್ವತ ಸದಸ್ಯರನ್ನು ಸೇರಿಸಬೇಕು.



# ಟ್ರಂಪ್ ಪ್ರತಿಸುಂಕ: ಯುರೋಪ್ ಮೇಲಿನ ಅಮೆರಿಕ ಒತ್ತಡ ತಗ್ಗಿಸಲು ಮೆಲೊನಿ ಮಧ್ಯಸ್ಥಿಕೆ



**ವಾಷಿಂಗ್ಟನ್, ಏ. 17:** ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಇಟಲಿಯ ಪ್ರಧಾನಿ ಜಾರ್ಜಿಯಾ ಮೆಲೊನಿಗೆ ವಿಶೇಷ ಔತಣ ಕೂಟ ಆಯೋಜಿಸಿದ್ದಾರೆ. ಅಮೆರಿಕದ ಪ್ರತಿಸುಂಕದ ಬರೆಯಿಂದ ಪಾರಾಗಲು ಮೆಲೊನಿ ಅವರು ವಾಷಿಂಗ್ಟನ್ ಮತ್ತು ಯುರೋಪ್ ನಡುವೆ ಕೊಂಡಿಯಾಗಿ ಕೆಲಸ ಮಾಡಲಿದ್ದಾರೆ ಎಂದೆನ್ನಲಾಗಿದೆ. 27 ರಾಷ್ಟ್ರಗಳನ್ನೊಳಗೊಂಡ ಐರೋಪ್ಯ ಒಕ್ಕೂಟದ ಮೇಲೆ ಅಮೆರಿಕವು ಶೇ 25ರಷ್ಟು ಆಮದು ಸುಂಕ ಹೇರಿದೆ. ಇದರಲ್ಲಿ ಪ್ರಮುಖವಾಗಿ ಉಕ್ಕು, ಅಲ್ಯುಮಿನಿಯಂ ಮತ್ತು ಕಾರುಗಳು ಸೇರಿವೆ. ಇದಕ್ಕೆ ಪ್ರತಿಯಾಗಿ ಅಮೆರಿಕ ಉತ್ಪನ್ನಗಳ ಮೇಲೆ ಯುರೋಪ್‌ನಲ್ಲೂ ಸುಂಕ ಹೆಚ್ಚಳ ಮಾಡಲಾಗಿದೆ. ಇದರಿಂದ ಎರಡೂ ಕಡೆ ಒತ್ತಡ ಸೃಷ್ಟಿಯಾಗಿದೆ. ಈ ನಡುವೆ ಅಮೆರಿಕದ ಅಧ್ಯಕ್ಷರಾಗಿ ಪ್ರಮಾಣವಚನ ಸ್ವೀಕಾರ ಸಮಾರಂಭಕ್ಕೆ ಯುರೋಪಿಯನ್ ಒಕ್ಕೂಟದಲ್ಲಿ ಮೆಲೊನಿಗೆ ಮಾತ್ರ ಟ್ರಂಪ್ ಆಹ್ವಾನಿಸಿದ್ದರು. ಸದ್ಯ ಸುಂಕಕ್ಕೆ 90 ದಿನಗಳ ವಿರಾಮವನ್ನು ಅಮೆರಿಕ ನೀಡಿದೆ. ಇದರಿಂದ ಮೆಲೊನಿ ಮೇಲಿನ ಒತ್ತಡ ಒಂದಷ್ಟು ತಗ್ಗಿದೆ. ಅಮೆರಿಕದ ಉಪಾಧ್ಯಕ್ಷ ಜೆ.ಡಿ.ವೇನ್ಸ್ ಅವರು ಶುಕ್ರವಾರ ರೋಮ್‌ಗೆ ಭೇಟಿ ನೀಡುತ್ತಿದ್ದು ಅದಕ್ಕೂ ಒಂದು ದಿನ ಮುಂಚೆ ಅಮೆರಿಕವು ಮೆಲೊನಿಗೆ ಔತಣ ಕೂಟ ಆಯೋಜಿಸಿದೆ. ಗುರುವಾರ ಟ್ರಂಪ್ ಜತೆ ಮಾತುಕತೆ, ಶುಕ್ರವಾರ ವೇನ್ಸ್ ಜತೆ ಮಾತುಕತೆ ನಡೆಸುವ ಮೂಲಕ ಅಮೆರಿಕ ಮತ್ತು ಯುರೋಪ್ ನಡುವೆ ಉಂಟಾಗಿರುವ ವ್ಯಾಪಾರ ವಿರಸವನ್ನು ತಗ್ಗಿಸುವರೇ ಎಂದು ಕಾದು ನೋಡಬೇಕು. ಎಂದು ಕಾದು ನೋಡಬೇಕು.

ಗುರುವಾರ ದಿನವಿಡೀ ವಾಷಿಂಗ್ಟನ್ ನಲ್ಲಿ ಮೆಲೊನಿ ಕಳೆಯಲಿದ್ದಾರೆ. ಶ್ವೇತ ಭವನ ಬಳಿಯೇ ಇರುವ ಬ್ಲೇರ್ ಹೌಸ್ ಅತಿಥಿಗೃಹದಲ್ಲಿ ತಂಗಲಿದ್ದಾರೆ. ಟ್ರಂಪ್ ತೆರಿಗೆ ನೀತಿ ವಿರೋಧಿಸಿದ್ದ ಐರೋಪ್ಯ ಒಕ್ಕೂಟವನ್ನು ಅಮೆರಿಕದ ಪ್ರತಿಸುಂಕದಿಂದ ಹೊರಗಿಡುವುದು, ಉಕ್ರೇನ್ ಯುದ್ಧ ಕೊನೆಗಾಣಿಸಲು ರಷ್ಯಾದೊಂದಿಗೆ ಮಾತುಕತೆ ಸೇರಿದಂತೆ ಜಾರ್ಜಿಯಾ ಮೆಲೊನಿ ಅವರು ತನ್ನ ಸಿದ್ಧಾಂತ ಮತ್ತು ಟ್ರಂಪ್ ಹಾಗೂ ಐರೋಪ್ಯ ಒಕ್ಕೂಟದೊಂದಿಗಿನ ಸಂಬಂಧ ಕಾಪಾಡುವ ಗುರುತರ ಜವಾಬ್ದಾರಿಯೊಂದಿಗೆ ಹಗ್ಗದ ಮೇಲಿನ ನಡಿಗೆ ನಡೆಸಿದ್ದಾರೆ ಎಂದೇ ವಿಶ್ಲೇಷಿಸಲಾಗುತ್ತಿದೆ.

ಇಟಲಿಯ ರಫ್ತು, ಆಧಾರಿತ ಆರ್ಥಿಕತೆ ರಕ್ಷಣೆಯ ಒತ್ತಡದಲ್ಲಿ ಮೆಲೊನಿ ಇದ್ದಾರೆ. ಕಳೆದ ವರ್ಷ 45 ಶತಕೋಟಿ ಅಮೆರಿಕನ್ ಡಾಲರ್ ವಹಿವಾಟನ್ನು ಇಟಲಿ ನಡೆಸಿತ್ತು. ಇದರ ಜತೆಯಲ್ಲಿ ಐರೋಪ್ಯ ಒಕ್ಕೂಟದ 27 ರಾಷ್ಟ್ರಗಳ ಹಿತವನ್ನೂ ಕಾಯಬೇಕಾದ ಪರಿಸ್ಥಿತಿಯಲ್ಲಿದ್ದಾರೆ.

ಅಮೆರಿಕದ ಆಹ್ವಾನಿ ಸ್ವೀಕರಿಸಿ ಒಬ್ಬರೇ ಹೋಗುತ್ತಿರುವ ಮೆಲೊನಿ ಐರೋಪ್ಯ ಒಕ್ಕೂಟದಲ್ಲಿ ಬಿರುಕು ಮೂಡಿಸಬಹುದ್ದು ಎಂದು ಫ್ರಾನ್ಸ್ ಸರ್ಕಾರ ಕಳವಳ ವ್ಯಕ್ತಪಡಿಸಿದೆ. ವ್ಯಾಪಾರ ವಹಿವಾಟಿನ ಒಪ್ಪಂದದ ಹೊಣೆಗಾರಿಕೆಯೊಂದಿಗೆ ಪ್ರವಾಸ ಕೈಗೊಂಡಿರುವುದನ್ನು ಯುರೋಪಿಯನ್ ಕಮಿಷನ್ ಸ್ವಾಗತಿಸಿದೆ

# ಗಾಜಾ ಮೇಲೆ ಮತ್ತೆ ಇಸ್ರೇಲ್ ದಾಳಿ; ಒಂದೇ ಕುಟುಂಬದ 10 ಜನ ಸೇರಿ 23 ಮಂದಿ ಸಾವು




**ಗಾಜಾ ಪಟ್ಟಿ, ಏ. 17:** ಇಸ್ರೇಲ್ ಪಡೆಗಳು ಗುರುವಾರ ರಾತ್ರಿಯಿಡೀ ಗಾಜಾ ಪಟ್ಟಿಯ ಮೇಲೆ ನಡೆಸಿದ ದಾಳಿಯಲ್ಲಿ ಒಂದೇ ಕುಟುಂಬದ 10 ಜನ ಸೇರಿದಂತೆ ಕನಿಷ್ಠ 23 ಜನ ಸಾವನ್ನಪ್ಪಿದ್ದಾರೆ ಎಂದು ಸ್ಥಳೀಯ ಆರೋಗ್ಯ ಅಧಿಕಾರಿಗಳು ತಿಳಿಸಿದ್ದಾರೆ. ಏತನ್ಮಧ್ಯೆ, ಆರು ವಾರಗಳಿಂದ ಇಸ್ರೇಲ್ ವಿಧಿಸಿರುವ ಎಲ್ಲಾ ಆಹಾರ ಮತ್ತು ಇತರ ಸರಬರಾಜುಗಳ ದಿಗ್ಬಂಧನದಿಂದ ಹೆಚ್ಚುತ್ತಿರುವ ತೀವ್ರ ಪರಿಣಾಮದ ಬಗ್ಗೆ ವಿಶ್ವಸಂಸ್ಥೆ ಎಚ್ಚರಿಕೆ ನೀಡಿದೆ. ಕಳೆದ ತಿಂಗಳು ಹಮಾಸ್ ಜೊತೆಗಿನ ತನ್ನ ಕದನ ವಿರಾಮ ಕೊನೆಗೊಳಿಸಿ ಮತ್ತೆ ಬಾಂಬ್ ದಾಳಿ ನಡೆಸುತ್ತಿರುವ ಇಸ್ರೇಲ್, ಇದೀಗ ಸಂಪೂರ್ಣ ಗಾಜಾ ಪಟ್ಟಿಯನ್ನು ತನ್ನ ವಶಕ್ಕೆ ಪಡೆಯಲು ಮುಂದಾಗಿದೆ. ಇಂದು ಗಾಜಾ ಪಟ್ಟಿಯ ದಕ್ಷಿಣ ನಗರ ಖಾನ್ ಯೂನಿಸ್‌ನಲ್ಲಿ ನಡೆದ ದಾಳಿಯಲ್ಲಿ ಒಂದೇ ಕುಟುಂಬದ ಐದು ಮಕ್ಕಳು, ನಾಲ್ವರು ಮಹಿಳೆಯರು ಮತ್ತು ಒಬ್ಬ ಪುರುಷ ಸಾವನ್ನಪ್ಪಿದ್ದಾರೆ ಎಂದು ಶವಗಳನ್ನು ಸ್ವೀಕರಿಸಿದ ನಾಸರ್ ಆಸ್ಪತ್ರೆ ತಿಳಿಸಿದೆ. ಇಂಡೋನೇಷ್ಯಾ ಆಸ್ಪತ್ರೆಯ ಪ್ರಕಾರ, ಉತ್ತರ ಗಾಜಾದಲ್ಲಿ ನಡೆದ ದಾಳಿಯಲ್ಲಿ ಒಂಬತ್ತು ಮಕ್ಕಳು ಸೇರಿದಂತೆ 13 ಜನರು ಸಾವನ್ನಪ್ಪಿದ್ದಾರೆ.

## ಒಂಬತ್ತು ಜನರಿಗೆ ಗಾಯ

ನಾಗರಿಕರಿಗೆ ಹಾನಿಯಾಗುವುದನ್ನು ತಪ್ಪಿಸಲು ಇಸ್ರೇಲಿ ಮಿಲಿಟರಿ ಯತ್ನಿಸುತ್ತಿದೆ ಮತ್ತು ಅವರ ಸಾವಿಗೆ ಹಮಾಸ್ ಹೊಣೆ. ಏಕೆಂದರೆ ಅದು ವಸತಿ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿದೆ ಎಂದು ಇಸ್ರೇಲ್ ಹೇಳಿದೆ. ಔಅಊಂ ಎಂದು ಕರೆಯಲ್ಪಡುವ ವಿಶ್ವಸಂಸ್ಥೆಯ ಮಾನವೀಯ ಕಚೇರಿಯು, ಗಾಜಾದ 2 ಮಿಲಿಯನ್‌ಗಿಂತಲೂ ಹೆಚ್ಚು ಜನರು ಈಗ ಆಹಾರಕ್ಕಾಗಿ ಚಾರಿಟಿ ಅಡುಗೆಮನೆಗಳಲ್ಲಿ ಪ್ರತಿದಿನ ಉತ್ಪಾದಿಸುವ ಕೇವಲ 1 ಮಿಲಿಯನ್ ಸಿದ್ಧಪಡಿಸಿದ ಊಟವನ್ನು ಅವಲಂಬಿಸಿದ್ದಾರೆ ಎಂದು ಹೇಳಿದೆ. "2023 ರ ಅಕ್ಟೋಬರ್‌ನಲ್ಲಿ ಯುದ್ಧ ಉಲ್ಬಣಗೊಂಡ ನಂತರ ಗಾಜಾ ಪಟ್ಟಿಯು ಈಗ 18 ತಿಂಗಳುಗಳಲ್ಲಿ ಅತ್ಯಂತ ಕೆಟ್ಟ ಮಾನವೀಯ ಬಿಕ್ಕಟ್ಟನ್ನು ಎದುರಿಸುತ್ತಿದೆ" ಎಂದು ಔಅಊಂ ಹೇಳಿದೆ.

# ಕೆನಡಾ ಚುನಾವಣೆ ಟ್ರಂಪ್ ವಿಷಯವೇ ಮುಖ್ಯ: ಕಾರ್ನಿ




**ಟೊರೊಂಟೊ, ಏ. 17:** ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಯಾರು ಸಮರ್ಥವಾಗಿ ಎದುರಿಸುವರು ಎಂಬುದೇ ಈ ಬಾರಿಯ ಕೆನಡಾ ಚುನಾವಣೆಯ ಪ್ರಮುಖ ವಿಷಯವಾಗಿದೆ ಎಂದು ಕೆನಡಾದ ಪ್ರಧಾನಿ ಮಾರ್ಕ್ ಕಾರ್ನಿ ಬುಧವಾರ ಹೇಳಿದರು. ಕೆನಡಾದಲ್ಲಿ ಇದೇ 28ಕ್ಕೆ ಚುನಾವಣೆ ನಡೆಯಲಿದ್ದು, ಅದಕ್ಕೆ ಪೂರಕವಾಗಿ ನಡೆದ ಸಂವಾದದಲ್ಲಿ ಅವರು ಮಾತನಾಡಿದರು. ಇದಕ್ಕೆ ಪ್ರತಿಕ್ರಿಯಿಸಿರುವ ವಿರೋಧ ಪಕ್ಷವಾದ ಕನ್ಸರ್ವೇಟಿವ್‌ನ ನಾಯಕ ಪಿಯರೆ ಪೊಯ್ಲಿವ್ರು ಅವರು, 'ಕೆನಡಾಕ್ಕೆ ಬದಲಾವಣೆಯ ಅಗತ್ಯವಿದೆ. ಕಾರ್ನಿ ಅವರು ಹಿಂದಿನ ಪ್ರಧಾನಿ ಜಸ್ಟಿನ್ ಟ್ರುಡೊ ಅವರಂತೆಯೇ ಇದ್ದಾರೆ' ಎಂದು ಟೀಕಿಸಿದರು. 'ದಶಕದಿಂದ ಅಧಿಕಾರದಲ್ಲಿರುವ ಲಿಬರಲ್ ಪಕ್ಷ, ಚುನಾವಣೆಯ ಬಳಿಕ ಅಧಿಕಾರ ಕಳೆದುಕೊಳ್ಳಲಿದೆ' ಎಂದು ಅವರು ಹೇಳಿದರು. ಇದಕ್ಕೆ ಎದುರೇಟು ನೀಡಿದ ಕಾರ್ನಿ, 'ನಾನಾಗಲಿ, ಪೊಲಿವೆ ಅವರಾಗಲಿ ಜಸ್ಟಿನ್ ಟ್ರುಡೊ ಅಲ್ಲ. ಟ್ರಂಪ್ ಅವರನ್ನು ಯಾರು ಸಮರ್ಥವಾಗಿ ಎದುರಿಸಲಿದ್ದಾರೆ ಎಂಬುದೇ ಈ ಚುನಾವಣೆಯಲ್ಲಿ ಪ್ರಮುಖ ವಿಷಯವಾಗಿದೆ' ಎಂದರು. ಟ್ರಂಪ್ ಅವರ ಪ್ರತಿಸುಂಕ ಸಮರ ಮತ್ತು ಕೆನಡಾವನ್ನು ಅಮೆರಿಕದ 51ನೇ ರಾಜ್ಯವನ್ನಾಗಿಸುವ ಅವರ ಬೆದರಿಕೆಗಳು ಕೆನಡಾದ ಜನರನ್ನು ಕೆರಳಿಸಿದೆ.



ಕತಾರ್‌ನ ದೋಹಾದಲ್ಲಿ ನಡೆದ 17ನೇ ಎಫ್‌ಐಜಿ ಆರ್ಟಿಸ್ಟಿಕ್ ಜಿಮ್ನಾಸ್ಟಿಕ್ಸ್ ಅಪ್ಪರಾಟಸ್ ವಿಶ್ವಕಪ್‌ನ ಮಹಿಳೆಯರ ಅನ್‌ಇವೆನ್ ಬಾರ್ಸ್ ಅರ್ಹತಾ ಸುತ್ತಿನಲ್ಲಿ ಆಸ್ಟ್ರೇಲಿಯಾದ ಕೇಟ್ ಮೆಕ್‌ಡೊನಾಲ್ಡ್ ಸ್ಪರ್ಧಿಸಿದರು.

# ರಷ್ಯಾ ಒತ್ತೆಯಾಳುಗಳ ಬಿಡುಗಡೆ: ಹಮಾಸ್‌ಗೆ ಧನ್ಯವಾದ ಹೇಳಿದ ಅಧ್ಯಕ್ಷ ಪುಟಿನ್


**ಮಾಸ್ಕೋ, ಏ. 17:** ಇಸ್ರೇಲ್ ವಿರುದ್ಧ 2023ರ ಅಕ್ಟೋಬರ್‌ನಲ್ಲಿ ಆರಂಭವಾದ ಕದನದಲ್ಲಿ ಒತ್ತೆ ಇರಿಸಿಕೊಂಡಿದ್ದ ರಷ್ಯಾದ ಪ್ರಜೆಗಳನ್ನು ಹಮಾಸ್ ಬಿಡುಗಡೆ ಮಾಡಿದ್ದು, ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ಧನ್ಯವಾದ ಹೇಳಿದ್ದಾರೆ. ಬಿಡುಗಡೆಗೊಂಡ ರಷ್ಯಾ ನಾಗರಿಕರಾದ ಅಲೆಕ್ಸಾಂಡರ್ ಟ್ರುಫಾನೋವ್ ಮತ್ತು ಅವರ ಕುಟುಂಬದ ಇಬ್ಬರು ಸದಸ್ಯರನ್ನು ಪುಟಿನ್ ಬರಮಾಡಿಕೊಂಡರು ಎಂದು ಇಂಟರ್‌ಫ್ಯಾಕ್ಸ್ ಏಜೆನ್ಸಿ ತಿಳಿಸಿದೆ. 'ಪ್ಯಾಲೆಸ್ಟೀನ್ ಜನರೊಂದಿಗೆ ರಷ್ಯಾ ಸುದೀರ್ಘ ಕಾಲ ಹೊಂದಿರುವ ಸೌಹಾರ್ದ ಸಂಬಂಧ ಹೊಂದಿರುವುದರಿಂದ ನೀವು ಇಲ್ಲಿಗೆ ಸುರಕ್ಷಿತವಾಗಿ ಮರಳಿದ್ದೀರಿ. ಮಾನವೀಯ ನೆಲೆಗಟ್ಟಿನಲ್ಲಿ ರಷ್ಯಾದ ನಾಗರಿಕರನ್ನು ಬಿಡುಗಡೆ ಮಾಡಿರುವ ಹಮಾಸ್‌ನ ನಾಯಕತ್ವಕ್ಕೆ ಧನ್ಯವಾದ ಅರ್ಪಿಸುತ್ತೇನೆ' ಎಂದು ಪುಟಿನ್ ಹೇಳಿದ್ದಾರೆ. 2023ರ ಅ. 7ರಂದು ಇಸ್ರೇಲ್ ಮೇಲೆ ಹಮಾಸ್ ದಾಳಿ ನಡೆಸಿದ ನಂತರ ಆರಂಭಗೊಂಡ ಕದನದಲ್ಲಿ ಈವರೆಗೂ ಸುಮಾರು 1,200 ಜನ ಮೃತರಾಗಿದ್ದು, 251 ಜನರು ಒತ್ತೆಯಾಳುಗಳನ್ನಾಗಿ ಇರಿಸಲಾಗಿದೆ. ಇಸ್ರೇಲ್ ನಡೆಸಿದ ಪ್ರತಿದಾಳಿಯಲ್ಲಿ 50 ಸಾವಿರಕ್ಕೂ ಹೆಚ್ಚು ಪ್ಯಾಲೆಸ್ಟಿನ್ ನಾಗರಿಕರು ಮೃತಪಟ್ಟಿದ್ದಾರೆ ಎಂದು ವರದಿಯಾಗಿದೆ. ಹಮಾಸ್ ಬಿಡುಗಡೆ ಮಾಡಿದ ಟ್ರುಫಾನೋವ್ ಅವರೊಂದಿಗೆ ಅವರ ತಾಯಿ, ಅಜ್ಜಿ ಮತ್ತು ಗೆಳತಿಯೂ ಅಪಹರಣಕ್ಕೊಳಗಾಗಿದ್ದರು. ಇವರನ್ನು ಗಾಜಾ ಪಟ್ಟಿಯಲ್ಲಿ ಇರಿಸಲಾಗಿತ್ತು. ಈ ಕುಟುಂಬದ ಹಿರಿಯ ವೈಟಲಿ ಟ್ರುಫನೋವ್ ದಾಳಿಯಲ್ಲಿ ಮೃತಪಟ್ಟಿದ್ದರು. ಅಪಹರಣಗೊಂಡು 5 3



ದಿನಗಳ ನಂತರ ತಾಯಿ, ಅಜ್ಜಿ ಹಾಗೂ ಗೆಳತಿಯನ್ನು ಬಿಡುಗಡೆ ಮಾಡಲಾಗಿತ್ತು.

# 1971ರ ದೌರ್ಜನ್ಯ; ಪಾಕ್ ಕ್ಷಮೆ ಕೋರಲಿ– ಬಾಂಗ್ಲಾದೇಶ

**ಢಾಕಾ, ಏ. 17:** 1971ರ ದೌರ್ಜನ್ಯಕ್ಕೆ ಸಂಬಂಧಿಸಿದಂತೆ ಸಾರ್ವಜನಿಕವಾಗಿ ಪಾಕಿಸ್ತಾನ ಕ್ಷಮೆ ಕೋರಬೇಕು ಎಂದು ಬಾಂಗ್ಲಾದೇಶ ಒತ್ತಾಯಿಸಿದೆ. ಗುರುವಾರ ನಡೆದ ಉಭಯ ದೇಶಗಳ ವಿದೇಶಾಂಗ ಕಾರ್ಯದರ್ಶಿಗಳ ಹಂತದ ಮಾತುಕತೆ ಸಂದರ್ಭದಲ್ಲಿ 'ಐತಿಹಾಸಕವಾಗಿ ಬಗೆಹರಿಯದ ಸಮಸ್ಯೆಗಳನ್ನು' ಬಾಂಗ್ಲಾದೇಶವು ಪ್ರಸ್ತಾಪಿಸಿತು. ಪಾಕಿಸ್ತಾನ ವಿಭಜನೆಯಾಗಿ ಬಾಂಗ್ಲಾದೇಶ ಹೊಸದಾಗಿ ರಚನೆಯಾದ ಬಳಿಕ ತನಗೆ ದೊರೆಯಬೇಕಾಗಿದ್ದ ಒಟ್ಟಾರೆ ಆಸ್ತಿಯ ಮೌಲ್ಯ 4.3 ಶತಕೋಟಿ ಡಾಲರ್ (?36 ಸಾವಿರ ಕೋಟಿ) ಮೊತ್ತವನ್ನು ಸಹ ಪಾವತಿಸಬೇಕು ಎಂದು ಅದು ಒತ್ತಾಯಿಸಿದೆ. ಪಾಕಿಸ್ತಾನದ ವಿದೇಶಾಂಗ ಕಾರ್ಯದರ್ಶಿ ಜೊತೆಗೆ ಚರ್ಚೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಬಾಂಗ್ಲಾದೇಶದ ವಿದೇಶಾಂಗ ಕಾರ್ಯದರ್ಶಿ ಜಶೀಂ ಉದ್ದೀನ್, 'ಪಾಕಿಸ್ತಾನದ ಜೊತೆಗಿನ ಚರ್ಚೆ ವೇಳೆ ಐತಿಹಾಸಿಕವಾಗಿ ಬಗೆಹರಿಯದ ವಿಚಾರಗಳು ಸೇರಿದಂತೆ ಹಲವು ವಿಚಾರಗಳನ್ನು ಪ್ರಸ್ತಾಪಿಸಲಾಗಿದೆ' ಎಂದಿದ್ದಾರೆ. ಪಾಕಿಸ್ತಾನ ಮತ್ತು




ಬಾಂಗ್ಲಾದೇಶದ ಮಧ್ಯೆ ಸುಮಾರು 15 ವರ್ಷಗಳ ಬಳಿಕ ನಡೆದ ಮೊದಲ ಚರ್ಚೆ ಇದಾಗಿದೆ.

# ಫ್ರೆಂಚ್ ಓಪನ್: ಮೊದಲ ದಿನ 14 ಬಾರಿಯ ಚಾಂಪಿಯನ್ ರಫೆಲ್ ನಡಾಲ್‌ಗೆ ಗೌರವ

**ಪ್ಯಾರಿಸ್ , ಏ. 17:** ಈ ವರ್ಷದ ಫ್ರೆಂಚ್ ಓಪನ್ ಟೆನಿಸ್ ಟೂರ್ನಿಯ ಮೊದಲ ದಿನ ರಫೆಲ್ ನಡಾಲ್ ರನ್ನು ಗೌರವಿಸಲಾಗುತ್ತದೆ ಎಂದು ಸಂಘಟಕರು ಗುರುವಾರ ಪ್ರಕಟಿಸಿದರು.

38ರ ಹರೆಯದ ನಡಾಲ್ ಗೆದ್ದಿರುವ 22 ಗ್ರಾನ್ಸ್ಲಾಮ್ ಟ್ರೋಫಿಗಳ ಪೈಕಿ 14 ಟ್ರೋಫಿಗಳನ್ನು ಫ್ರೆಂಚ್ ಓಪನ್ ಒಂದರಲ್ಲೇ ಗೆದ್ದುಕೊಂಡು 'ಕ್ಲೈ ಕೋರ್ಟ್ ಕಿಂಗ್' ಆಗಿ ಹೊರಹೊಮ್ಮಿದ್ದರು. ಕಳೆದ ವರ್ಷ ಮೊದಲ ಸುತ್ತಿನಲ್ಲಿ ಅಲೆಕ್ಸಾಂಡರ್ ಝುರೆವ್ ವಿರುದ್ಧ ಸೋಲನುಭವಿಸಿ ಟೂರ್ನಿಯಿಂದ ಬೇಗನೆ ನಿರ್ಗಮಿಸಿದ್ದರು. ಆಗ ಅವರು ಇದು ತನ್ನ ಕೊನೆಯ ಪಂದ್ಯ ಎಂದು ಘೋಷಿಸಿರಲಿಲ್ಲ.

ಆದರೆ ಸ್ಪೇನ್ ಆಟಗಾರ ನವೆಂಬರ್ ನಲ್ಲಿ ಡೇವಿಸ್ ಕಪ್ ಫೈನಲ್ಸ್ ವೇಳೆ ವೃತ್ತಿಪರ ಟೆನಿಸ್ ನಿಂದ ನಿವೃತ್ತಿಯಾಗಿದ್ದರು. "ರಫಾ ತಮ್ಮ 14 ಪ್ರಶಸ್ತಿಗಳೊಂದಿಗೆ ಟೂರ್ನಮೆಂಟ್ ಇತಿಹಾಸದಲ್ಲಿ ದಾಖಲೆ ಬರೆದಿದ್ದಾರೆ. ಬಹುಶಃ ಈ ದಾಖಲೆಗೆ ಸರಿಸಾಟಿಯೇ ಇರದು. 14 ಬಾರಿ ಫ್ರೆಂಚ್ ಓಪನ್ ಪ್ರಶಸ್ತಿ ಗೆದ್ದಿರುವ ಆಟಗಾರನಿಗೆ ಮೇ 25ರಂದು ರವಿವಾರ ಗೌರವಿಸಲಾಗುತ್ತದೆ. ದಿನದ ಮೂರು ಪಂದ್ಯಗಳು ಕೊನೆಗೊಂಡ ನಂತರ ಸಮಾರಂಭ ಏರ್ಪಡಿಸಲಾಗುವುದು. ಈ ಬಾರಿ ನಡಾಲ್ ಅವರು ಆಟಗಾರನಾಗಿರುವುದಿಲ್ಲ. 2025ರ ಆವೃತ್ತಿಯಲ್ಲಿ ಅವರು ನಮ್ಮ ತಂಡದಲ್ಲಿರುತ್ತಾರೆ" ಎಂದು ಪಂದ್ಯಾವಳಿಯ ನಿರ್ದೇಶಕಿ ಅಮಲಿ ಮೌರೆಸ್ಮೊ ಪತ್ರಿಕಾಗೋಷ್ಠಿಯಲ್ಲಿ ಹೇಳಿದ್ದಾರೆ. ಈ ವರ್ಷದ ಫ್ರೆಂಚ್ ಓಪನ್ ಟೂರ್ನಿಯು ಮೇ 25ರಿಂದ ಜೂನ್ 8ರ ತನಕ ನಡೆಯಲಿದೆ. ಈ ಪಂದ್ಯಾವಳಿಯಲ್ಲಿ ಮೇರಿ ಪಿಯರ್ಸ್ ಹಾಗೂ ರಿಚರ್ಡ್ ಗ್ಯಾಸ್ಕೆಟ್ ಅವರಿಗೆ ಗೌರವ ಸಲ್ಲಿಸಲಾಗುತ್ತದೆ.



# ಐಪಿಎಲ್: ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ಮುಂಬೈಗೆ 3ನೇ ಜಯ



**ಮುಂಬೈ, ಏ. 17:** ಭರವಸೆಯ ಆಲ್‌ರೌಂಡರ್ ವಿಲ್ ಜಾಕ್ಸ್ (36 ರನ್, 14ಕ್ಕೆ 2) ಇವರ ಅಮೋಘ ಆಟದ ನೆರವಿನಿಂದ ಮುಂಬೈ ಇಂಡಿಯನ್ಸ್ 18ನೇ ಆವೃತ್ತಿಯ 33ನೇ ಪಂದ್ಯದಲ್ಲಿ 4 ವಿಕೆಟ್‌ಗಳಿಂದ ಸನ್‌ರೈಸರ್ಸ್ ಹೈದರಾಬಾದ್ ತಂಡವನ್ನು ಮಣಿಸಿ, ಪ್ರಸಕ್ತ ಲೀಗ್‌ನಲ್ಲಿ ಮೂರನೇ ಗೆಲುವು ದಾಖಲಿಸಿದೆ. ಮೊದಲ ಬ್ಯಾಟ್ ಮಾಡಿದ ಸನ್‌ರೈಸರ್ಸ್ 20 ಓವರ್‌ಗಳಲ್ಲಿ 5 ವಿಕೆಟ್‌ಗೆ 162 ರನ್ ಸೇರಿಸಿತು. ಇದಕ್ಕುತ್ತರವಾಗಿ ಬ್ಯಾಟ್ ಮಾಡಿದ ಮುಂಬೈ 18.1 ಓವರ್‌ಗಳಲ್ಲಿ 166 ರನ್ ಸೇರಿಸಿ ಜಯ ಸಾಧಿಸಿತು. ಮುಂಬೈ ಇಂಡಿಯನ್ಸ್ ಈ ಗೆಲುವಿನ ಮೂಲಕ ಆಡಿರುವ ಏಳು ಪಂದ್ಯಗಳಲ್ಲಿ ಮೂರು ಜಯ, 4 ಸೋಲು ಕಂಡಿದ್ದು ಆರು ಅಂಕಗಳೊಂದಿಗೆ ಏಳನೇ ಸ್ಥಾನದಲ್ಲಿದೆ. ಸನ್‌ರೈಸರ್ಸ್ ಹೈದರಾಬಾದ್ ತಂಡದ ಎದುರಾಳಿ ಅಂಗಳದಲ್ಲಿ ಮೊದಲ ಜಯದ ಕನಸು ಕಮರಿದೆ. ಎಸ್‌ಆರ್‌ಎಚ್ ಆಡಿದ 7 ಪಂದ್ಯಗಳಲ್ಲಿ 2 ಜಯ ಸಾಧಿಸಿದ್ದು, 4 ಅಂಕಗಳೊಂದಿಗೆ ಅಂಕ ಪಟ್ಟಿಯಲ್ಲಿ ಕೊನೆಯಿಂದ ಎರಡನೇ ಸ್ಥಾನದಲ್ಲಿದೆ. ಗುರಿಯನ್ನು ಬೆನ್ನಟ್ಟಿದ ಮುಂಬೈ ಇಂಡಿಯನ್ಸ್ ತಂಡದ ಆರಂಭಿಕರಾದ ರೋಹಿತ್ ಶರ್ಮಾ ಆರ್ಭಟ ನಡೆಸುವ ಸೂಚನೆ ನೀಡಿದರು.

ರೋಹಿತ್ ಹಾಗೂ ರಿಯಾನ್ ರಿಕಲ್ಟನ್ ಜೋಡಿ ಮೊದಲ ವಿಕೆಟ್‌ಗೆ 32 ರನ್ ಸೇರಿಸಿತು. ರೋಹಿತ್ ಶರ್ಮಾ 16 ಎಸೆತಗಳಲ್ಲಿ 3 ಸಿಕ್ಸರ್ ನೆರವಿನಿಂದ 26 ರನ್ ಬಾರಿಸಿ ಬಿಗ್ ಇನಿಂಗ್ಸ್ ಕಟ್ಟುವ ಸೂಚನೆ ನೀಡಿದರು. ಆದರೆ ಇವರ ಆಟಕ್ಕೆ ನಾಯಕ ಪ್ಯಾಟ್ ಕಮಿನ್ಸ್ ಬ್ರೇಕ್ ಹಾಕಿದರು. ಇನ್ನೋರ್ವ ಆರಂಭಿಕ ಆಟಗಾರ ರಿಯಾನ್ ರಿಕಲ್ಟನ್ 5 ಬೌಂಡರಿ ನೆರವಿನಿಂದ 31 ರನ್ ಬಾರಿಸಿ ಔಟ್ ಆದರು.

# ಗ್ರಾಂಡ್‌ಮಾಸ್ಟರ್ಸ್ ಓಪನ್ ಚೆಸ್ ಟೂರ್ನಿ: ಮುನ್ನಡೆಯಲ್ಲಿ ಪೆಂಟ್ರುಲಾಯಿಯಾ

**ಬೆಂಗಳೂರು, ಏ. 17:** ಗ್ರಾಂಡ್ ಮಾಸ್ಟರ್ ಪಾ.ಇನಿಯನ್ ಅವರನ್ನು ಸೋಲಿಸಿದ ಜಾರ್ಜಿಯಾದ ಗ್ರಾಂಡ್‌ಮಾಸ್ಟರ್ ಲೆವನ್ ಪೆಂಟ್ಸುಲಾಯಿಯ ಅವರು 'ನಮ್ಮ ಬೆಂಗಳೂರು ಇಂಟರ್ ನ್ಯಾಷನಲ್ ಗ್ರಾಂಡ್ ಮಾಸ್ಟರ್ಸ್ ಓಪನ್ ಚೆಸ್ ಟೂರ್ನಿಯ ಒಂಬತ್ತನೇ ಸುತ್ತಿನ ನಂತರ ಏಳೂವರೆ ಪಾಯಿಂಟ್ಸ್ ಸಂಗ್ರಹಿಸಿ ಒಂಟಿಯಾಗಿ ಅಗ್ರಸ್ಥಾನಕ್ಕೇರಿದರು.

ಶುಕ್ರವಾರ ಕೊನೆಯ ಸುತ್ತು ನಡೆಯಲಿದ್ದು ಪ್ರಶಸ್ತಿಗೆ ಪೈಪೋಟಿ ತೀವ್ರಗೊಂಡಿದೆ. ತಲಾ ಏಳು ಪಾಯಿಂಟ್ಸ್ ಗಳಿಸಿರುವ ಹತ್ತು ಮಂದಿ ಆಟಗಾರರು ಎರಡನೇ ಸ್ಥಾನ ಹಂಚಿಕೊಂಡಿದ್ದಾರೆ. ಅಗ್ರ ಶ್ರೇಯಾಂಕದ ಇನಿಯನ್ ಮೊದಲ ಬೋರ್ಡ್‌ನಲ್ಲಿ ನಡೆದ ಪಂದ್ಯದ 56ನೇ ನಡೆಯಲ್ಲಿ ಐದನೇ ಶ್ರೇಯಾಂಕದ ಲೆವನ್ ಎದುರು ಸೋಲೊಪ್ಪಿಕೊಂಡರು. ಕೋರಮಂಗಲ ಒಳಾಂಗಣ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಈ ಕೂಟದಲ್ಲಿ ಜಿಎಂ ಮ್ಯಾನುಯೆಲ್ ಪೆಟ್ರೋಸಿಯಾನ್ (ಅರ್ಮೇನಿಯಾ), ಐಎಂ ಅನುಜ್ ಶ್ರೀವತ್ರಿ (ಮಧ್ಯಪ್ರದೇಶ), ಐಎಂ ಅರಣ್ಯಕ್ ಘೋಷ್ (ಪಶ್ಚಿಮ ಬಂಗಾಳ) ಜಿಎಂ ಸಂದೀಪನ್ ಚಂದಾ (ಪಶ್ಚಿಮ ಬಂಗಾಳ), ಕೇರಳದ ನಿತಿನ್ ಬಾಬು, ಜಿಎಂ ಅಲೆಕ್ಸಿ ಫೆಡರೋವ್ (ಬೆಲರೂಸ್), ಐಎಂ ಹರಿಮಾಧವನ್ ಎನ್.ಬಿ (ತಮಿಳುನಾಡು), ಐಎಂ ಮೆಹರ್ ಚಿನ್ನಾರೆಡ್ಡಿ (ಆಂಧ್ರ ಪ್ರದೇಶ), ಎಂ ಅಮೇಯಾ ಆದಿ (ಗೋವಾ), ಐಎಂ ಸರವಣನ್ ಕೃಷ್ಣನ್ (ತಮಿಳುನಾಡು) ಅವರು ಎರಡನೇ ಸ್ಥಾನದಲ್ಲಿದ್ದಾರೆ. ಮೆಹರ್ ಚಿನ್ನಾರೆಡ್ಡಿ ಹತ್ತನೇ ಬೋರ್ಡ್‌ನಲ್ಲಿ ಕರ್ನಾಟಕದ ವಿಯಾನಿ ಡಿಕುನ್ಹ (6) ಅವರನ್ನು ಸೋಲಿಸಿದರೆ, ಅರಣ್ಯಕ್ ಘೋಷ್, ಸುಭಾಯನ್ ಕುಂದು (6) ಅವರನ್ನು ಮಣಿಸಿದರು.